ಬೆಂಗಳೂರು ಸಂಪುಟ: 16 ಸಂಚಿಕೆ: 59 ಪುಟ: 06 ಶನಿವಾರ 25-01-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಬಾಳೆ ಎಲೆಯಲ್ಲಿ ಊಟ.. ಜಾಹ್ನವಿ!

ಅವ್ರು ಹೊಸ ಪಾರ್ಟನರ್,

ಬಿಗ್ ಡೀಲ್‌ಗೆ 'ಕೈ' ಹಾಕಿದ ಸುದೀಪ್ ಪುಟ 6

## ಮೈಕ್ರೋ ಫೈನಾನ್ಸ್ ಹಾವಳಿ ತಡೆಗೆ ಹೊಸ ಕಾನೂನು ರೂಪಿಸಿದ ಸರ್ಕಾರ

# ಬೇಲ್ ಸಿಗಲ್ಲ ಹುಷಾರ್!

**ಬೆಂಗಳೂರು:** ಮೈಕ್ರೋ ಫೈನಾನ್ಸ್ ಹಾವಳಿ ತಡೆಗೆ ಸಂಬಂಧಿಸಿದಂತೆ ಇಂದು ಹೈ ವೋಲ್ಟೇಜ್ ಸಭೆ ನಡೆಸಿದ ಸರ್ಕಾರ ದಂಧೆಕೋರರಿಗೆ ಮೂಗುದಾರ ಹಾಕುವ ಸಂಬಂಧ ಹೊಸ ಕಾನೂನು ರೂಪಿಸಿದೆ.

ಕರ್ನಾಟಕ ಮೈಕ್ರೋ ಫೈನಾನ್ಸ್ ಇನ್ಸಿಟ್ಯೂಷನ್ ಆಫ್ ರೆಗುಲೇಷನ್ ಆಫ್ ಮನಿ ಲೆಂಡಿಂಗ್ ಬಿಲ್ ಜಾರಿಗೊಳಿಸಲು ಮುಂದಾಗಿರುವ ಸರ್ಕಾರ, ಮೈಕ್ರೋ ಫೈನಾನ್ಸ್ ಸಂಸ್ಥೆಗಳು ನೀಡುವಂತಹ ಕಿರುಕುಳವನ್ನು ಶಿಕ್ಷಾರ್ಹ ಅಪರಾಧ, ಜಾಮೀನು ರಹಿತ ಅಪರಾಧ ಹಾಗೂ ಮೂರು ವರ್ಷ ಕಠಿಣ ಶಿಕ್ಷೆ ವಿಧಿಸಲು ತೀರ್ಮಾನಿಸಿದೆ. ಸಾಲಗಾರರಿಗೆ ಕಿರುಕುಳ ನೀಡುವಂತಹ ವ್ಯಕ್ತಿ ಅಥವಾ ಸಂಸ್ಥೆಯ ಪ್ರತಿನಿಧಿಗೆ ಬೇಲ್ ಸಿಗದ ರೀತಿಯಲ್ಲಿ ಕಾನೂನು ಜಾರಿಗೆ ತಂದಿದ್ದು, ಈ ಮೂರು ಹೊಸ ಕಾಯ್ದೆಗಳನ್ನು ಸುಗ್ರೀವಾಜ್ಞೆ ಮೂಲಕ ಜಾರಿಗೊಳಿಸಲು ಇಂಗಿತ ವ್ಯಕ್ತಪಡಿಸಿದ್ದಾರೆ.

ಮುಖ್ಯಮಂತ್ರಿ ಅವರ ಗೃಹಕಛೇರಿ ಕೃಷ್ಣಾದಲ್ಲಿ ಶನಿವಾರ ನಡೆದ ಮೈಕ್ರೋ ಫೈನಾನ್ಸ್‌ನಿಂದ ಸಾರ್ವಜನಿಕರಿಗೆ ಆಗುತ್ತಿರುವ ಸಮಸ್ಯೆ ಕುರಿತು ಫೈನಾನ್ಸ್ ಸಂಸ್ಥೆಗಳ ಮುಖ್ಯಸ್ಥರಿಗೆ ಖಾರವಾಗಿ ಪ್ರಶ್ನಿಸಿದ್ದಾರೆ.

ಸಿಎಂ ಗೃಹ ಕಚೇರಿ ಕೃಷ್ಣಾದಲ್ಲಿ ಶನಿವಾರ ನಡೆದ ಮೈಕ್ರೋ ಫೈನಾನ್ಸ್ ಸಭೆಯಲ್ಲಿ ಮಾತನಾಡಿದ ಸಿದ್ದರಾಮಯ್ಯ, ನಿಮ್ಮ ಸಿಬ್ಬಂದಿ ನಿಯಮ ಬಾಹಿರವಾಗಿ ಸಾಲ ವಸೂಲಿಗೆ ಇಳಿಯುತ್ತಿರುವುದನ್ನು ನಿಯಂತ್ರಿಸಲು ಏನು ಮಾಡಿದ್ದೀರಿ? ಅಂಥಾ ಸಿಬ್ಬಂದಿ ವಿರುದ್ಧ ನಿಮ್ಮ ಸಂಸ್ಥೆಗಳಿಂದ ಏನು ಕ್ರಮ ಕೈಗೊಂಡಿದ್ದೀರಿ: ನೋಂದಣಿ ಆಗಿ ಪರವಾನಗಿ ಪಡೆದಿರುವ ಮೈಕ್ರೋ ಫೈನಾನ್ಸ್ ಕಂಪನಿಗಳ ಮುಖ್ಯಸ್ಥರನ್ನು ಖಾರವಾಗಿ ಪ್ರಶ್ನಿಸಿದರು.

ಸಾಲಗಾರರ ಮನೆ ಜಪ್ತಿ ಮಾಡುವ ಮೊದಲು ನೀವು ನ್ಯಾಯಾಲಯದಿಂದ ಅನುಮತಿ ಪಡೆದಿದ್ದೀರಾ? ಕಾನೂನು



ಕೈಗೆತ್ತಿಕೊಳ್ಳಲು ನಿಮ್ಮ ಸಿಬ್ಬಂದಿಗೆ ಅನುಮತಿ ಕೊಟ್ಟವರು ಯಾರು? ಸಾಲ ವಸೂಲಿಗೆ ರೌಡಿಗಳನ್ನು ಬಳಸುತ್ತಿದ್ದೀರಾ ಎಂದು ಪ್ರಶ್ನಿಸಿದರು.

ಅಲ್ಲದೆ, ರಿಸರ್ವ್ ಬ್ಯಾಂಕಿನ ಷರತ್ತು ಮತ್ತು ನಿಬಂಧನೆಗಳನ್ನು ಸಾಲಗಾರರಿಗೆ ಅವರ ಆಡು ಭಾಷೆಯಲ್ಲಿ ಅರ್ಥ ಮಾಡಿಸಿದ್ದೀರಾ? ಆರ್‌ಬಿಐ ನಿಯಮ ಮೀರಿ ಸಾಲ ಕೊಡುತ್ತಿದ್ದೀರಾ ? ಮರುಪಾವತಿಯ ಕೆಪಾಸಿಟಿ ಗಮನಿಸದೆ ಒಬ್ಬರೇ ಸಾಲಗಾರರಿಗೆ ಪದೇ ಪದೇ ಸಾಲ ಕೊಡುತ್ತಿರುವುದು ಏಕೆ? ಎಂದು ತರಾಟೆಗೆ ತೆಗೆದುಕೊಂಡರು. ಸಾಲಗಾರರಿಗೆ ಸಾಲ ಕೊಡುವ ಮೊದಲು ಆಧಾರ್ ಕೆವೈಸಿ ಮಾಡಿಸುತ್ತಿಲ್ಲ ಏಕೆ ? ಇದನ್ನು ಮಾಡಿಸಿದ್ದರೆ ಒಬ್ಬರೇ ಸಾಲಗಾರರಿಗೆ ಪದೇ ಪದೇ ಸಾಲ ಕೊಡುವುದು ತಪ್ಪುತ್ತಿತ್ತು ಎಂದು ಸಿದ್ದರಾಮಯ್ಯ ಸೂಚನೆಗಳನ್ನು ನೀಡಿದರು. ನಿಮ್ಮ ವ್ಯವಹಾರ ಹೆಚ್ಚಿಸಿಕೊಳ್ಳಲು ನಿಯಮ ಮೀರಿ ಒಬ್ಬರೇ ಸಾಲಗಾರರಿಗೆ ಮೇಲಿಂದ ಪುಟ 2



ಹಾವೇರಿ ಜಿಲ್ಲೆಯ ಹಿರೇಕೆರೂರ ತಾಲೂಕಿನ ಚಿಕ್ಕೇರೂರು ಗ್ರಾಮದಲ್ಲಿ ಆರ್ಯವೈಶ್ಯ ಮಂಡಳಿ ಹಾಗೂ ಕನ್ನಿಕಾ ಪರಮೇಶ್ವರಿ ಟ್ರಸ್ಟ್ ವತಿಯಿಂದ ಏರ್ಪಡಿಸಿದ ಶ್ರೀ ವಾಸವಿ ಕನ್ನಿಕಾ ಪರಮೇಶ್ವರಿ, ಶ್ರೀ ಮೈಲಾರಲಿಂಗೇಶ್ವರ, ಶ್ರೀ ಲಕ್ಷ್ಮೀ ನಾರಾಯಣ, ಶ್ರೀ ಸುಬ್ರಮಣ್ಯ, ಶ್ರೀ ಗಣಪತಿ ದೇವರುಗಳ ನೂತನ ಮೂರ್ತಿಗಳ ಪ್ರಾಣ ಪ್ರತಿಷ್ಠಾಪನಾ ಕಾರ್ಯಕ್ರಮ ಮತ್ತು ಶ್ರೀ ವಾಸವಿ ಸಮುದಾಯ ಭವನ ಮತ್ತು ಪ್ರಸಾದ ನಿಲಯದ ಉದ್ಘಾಟನಾ ಸಮಾರಂಭದ ವೇದಿಕೆ ಕಾರ್ಯಕ್ರಮವನ್ನು ಕರ್ನಾಟಕ ಸರ್ಕಾರದ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ – ಗದಗ ಲೋಕಸಭಾ ಕ್ಷೇತ್ರದ ಸಂಸದ ಬಸವರಾಜ ಬೊಮ್ಮಾಯಿರವರು ಉದ್ಘಾಟಿಸಿ ಮಾತನಾಡಿದರು. ಈ ಸಂಧರ್ಭದಲ್ಲಿ ಮಾಜಿ ಸಚಿವರಾದ ಶ್ರೀ ಬಿ.ಸಿ. ಪಾಟೀಲ್, ವಿಧಾನ ಪರಿಷತ್ ಸದಸ್ಯರಾದ ಶ್ರೀ ಡಿ.ಎಸ್.ಅರುಣ, ಕನ್ನೀಕಾ ಪರಮೇಶ್ವರಿ ಟ್ರಸ್ಟ್ ಕಮೀಟಿಯ ಅಧ್ಯಕ್ಷರಾದ ಶ್ರೀ ಕೇಶವಮೂರ್ತಿ ಚನ್ನಗಿರಿ ಸೇರಿದಂತೆ ಸಮಾಜದ ಪ್ರಮುಖರು, ಗ್ರಾ ಪಂ ಅಧ್ಯಕ್ಷ ಉಪಾಧ್ಯಕ್ಷರು ಹಾಗೂ ಸರ್ವಸದಸ್ಯರು ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

## ಅಪಘಾತ; 18 ಮಂದಿಗೆ ಗಾಯ

ರಾಯಚೂರು: ಸಾರಿಗೆ ಬಸ್ ಹಾಗೂ ಟ್ರ್ಯಾಕ್ಟರ್ ನಡುವೆ ಭೀಕರ ಅಪಘಾತ ಸಂಭವಿಸಿ ಕೂಲಿ ಕಾರ್ಮಿಕ ಮಹಿಳೆ ಸ್ಥಳದಲ್ಲೇ ಸಾವನ್ನಪ್ಪಿದ್ದು 18 ಕೂಲಿಕಾರ್ಮಿಕರು ಗಾಯಗೊಂಡಿರುವ ಘಟನೆ ರಾಯಚೂರಿನ ಮುದಗಲ್ ಪಟ್ಟಣದಲ್ಲಿರುವ ಸಮೀಪದಲ್ಲಿ ಇಂದು ಜರುಗಿದೆ.

ನಸುಕಿನ ಜಾವ ಜಿಲ್ಲೆಯ ಲಿಂಗಸೂಗೂರು ತಾಲೂಕಿನ ಮುದಗಲ್ ಪಟ್ಟಣದ ಬಳಿ ಬನ್ನಿಗೋಳದ ಗ್ರಾಮದ ಹೊರವಲಯದಲ್ಲಿ ಈ ದುರ್ಘಟನೆ ಸಂಭವಿಸಿದೆ. ಟ್ರ್ಯಾಕ್ಟರ್‌ನಲ್ಲಿದ್ದ ಶ್ರೀದೇವಿ (19) ಮೃತ ಮಹಿಳೆಯೆಂದು ಗುರುತಿಸಲಾಗಿದೆ. ಇತ್ತೀಚೆಗಷ್ಟೇ ಶ್ರೀದೇವಿ ಅವರ ಮದುವೆ ಆಗಿತ್ತು ಎಂದು ತಿಳಿದುಬಂದಿದೆ. ಇನ್ನುಳಿದ 18 ಜನ ಕೂಲಿ ಕಾರ್ಮಿಕರಿಗೆ ಗಾಯಗಳು ಆಗಿದ್ದು, ಗಾಯಾಳುಗಳನ್ನು ಲಿಂಗಸೂಗೂರು ತಾಲೂಕು ಆಸ್ಪತ್ರೆಗೆ ಚಿಕಿತ್ಸೆಗೆ ರವಾನಿಸಲಾಗಿದೆ. ಪುಟ 2

## ರಾಜ್ಯಮಟ್ಟದ ಪ್ರಶಸ್ತಿ ವಿಜೇತರಿಗೆ ಪ್ರಶಸ್ತಿ




**ಬೆಂಗಳೂರು:** ಭಾರತ ಚುನಾವಣಾ ಆಯೋಗ – ಮುಖ್ಯ ಚುನಾವಣಾಧಿಕಾರಿ, ಕರ್ನಾಟಕ ವತಿಯಿಂದ ನಗರದ ಸರ್ ಪುಟ್ಟಣ್ಣ ಚೆಟ್ಟಿ ಪುರಭವನ(ಟೌನ್ ಹಾಲ್)ದಲ್ಲಿ "ರಾಷ್ಟ್ರೀಯ ಮತದಾರರ ದಿನಾಚರಣೆ–2025" ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಗೌರವಾನ್ವಿತ ರಾಜ್ಯಪಾಲರುಗಳಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ರವರು ಆಗಮಿಸಿ ಚಾಲನೆ ನೀಡಿದರು. ಮೊದಲನೆ ಬಾರಿ ಮತದಾನ ಮಾಡುವ ಯುವ ಮತದಾರರು, ವಿಕಲ ಚೇತನರು, ತೃತೀಯ ಪುಟ 2

## 942 ಸಿಬ್ಬಂದಿಗಳಿಗೆ ಪ್ರಶಸ್ತಿ ಪ್ರಕಟ

**ನವದೆಹಲಿ:** 76ನೇ ಗಣರಾಜ್ಯೋತ್ಸವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ, ದೇಶಕ್ಕಾಗಿ ಅಪ್ರತಿಮ ಸೇವೆ ಸಲ್ಲಿಸಿದ ವಿವಿಧ ಸಾಧಕರಿಗೆ ಶೌರ್ಯ ಪ್ರಶಸ್ತಿಯನ್ನು ಪ್ರಕಟಿಸಿದೆ.

ಗಣರಾಜ್ಯೋತ್ಸವ 2025 ರ ಸಂದರ್ಭದಲ್ಲಿ, ಪೊಲೀಸ್, ಅಗ್ನಿಶಾಮಕ, ಗೃಹರಕ್ಷಕ ಮತ್ತು ನಾಗರಿಕ ರಕ್ಷಣಾ ಮತ್ತು ಸುಧಾರಣಾ ಸೇವೆಗಳ 942 ಸಿಬ್ಬಂದಿಗಳಿಗೆ ಶೌರ್ಯ ಪ್ರಶಸ್ತಿಯನ್ನು ನೀಡಲಾಗಿದ್ದು, ಇದರಲ್ಲಿ 95 ಯೋಧರಿಗೆ ಶೌರ್ಯ ಪದಕ, 101 ಮಂದಿಗೆ ವಿಶಿಷ್ಟ ಸೇವೆಗಾಗಿ ರಾಷ್ಟ್ರಪತಿ ಪದಕ, 746 ಮಂದಿಗೆ ಪ್ರತಿಭಾನ್ವಿತ ಸೇವೆಗಾಗಿ ಪದಕಗಳನ್ನು ಪ್ರಕಟಿಸಲಾಗಿದೆ. ವಿಶೇಷ



ಸೇವೆಗಾಗಿ (ಪಿಎಸ್‌ಎಂ) 101 ರಾಷ್ಟ್ರಪತಿಗಳ ಪದಕಗಳಲ್ಲಿ 85 ಪೊಲೀಸ್ ಸೇವೆಗೆ, 05 ಅಗ್ನಿಶಾಮಕ ಸೇವೆಗೆ, 07 ನಾಗರಿಕ ರಕ್ಷಣಾ–ಗೃಹರಕ್ಷಕ ದಳಕ್ಕೆ ಮತ್ತು 04 ಸುಧಾರಣಾ ಇಲಾಖೆಗೆ ನೀಡಲಾಗಿದೆ. ಮೆರಿಟೋರಿಯಸ್ ಸೇವೆಗಾಗಿ (ಎಂಎಸ್‌ಎಂ) 746 ಪುಟ 2

## ಮುಡಾ ಹಗರಣ; ವರದಿ ಸಲ್ಲಿಕೆ

**ಬೆಂಗಳೂರು:** ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಕುಟುಂಬದ ಮೇಲೆ ಬಂದಿದ್ದ ಆರೋಪದ ತನಿಖೆ ನಡೆಸಿರುವ ಲೋಕಾಯುಕ್ತ ಪೊಲೀಸರು ತನಿಖೆ ಪೂರ್ಣಗೊಳಿಸಿದ್ದು, ವರದಿಯನ್ನು ಇಂದು ನ್ಯಾಯಾಲಯಕ್ಕೆ ಸಲ್ಲಿಸಿದ್ದಾರೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನಗಳ ಹಂಚಿಕೆ ಕುರಿತು ನಡೆದಿರುವ ಅಕ್ರಮದ ಬಗ್ಗೆ ತನಿಖೆ ಪೂರ್ಣಗೊಳಿಸಿಚಿರುವ ಲೋಕಾಯುಕ್ತ ಪೊಲೀಸರು 3 ಸಾವಿರ ಪುಟಗಳಿಗೂ ಹೆಚ್ಚಿನ ವರದಿಯನ್ನು ಸಿದ್ಧಪಡಿಸಿದ್ದು, ಲೋಕಾಯುಕ್ತ ಎಸ್ಪಿ ಉದೇಶ್ ಅವರು ಲೋಕಾಯುಕ್ತ ಎಡಿಜಿಪಿ ಅವರಿಗೆ ವರದಿಯನ್ನು ಸಲ್ಲಿಸಲಿದ್ದು, ಅವರು ಪರಿಶೀಲಿಸಿ ಮುಚ್ಚಿದ ಲಕೋಟೆಯಲ್ಲಿ ಹೈಕೋರ್ಟ್‌ಗೆ ನೀಡಿದ್ದಾರೆ. ಸಿಎಂ ಕುಟುಂಬದ ಕೆಸರೆಯ ಭೂಹಗರಣ ಸೇರಿದಂತೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಶೇ.50:50 ಅನುಪಾತದ ನಿವೇಶನಗಳ ಪುಟ 2

## ಕ್ಯಾಥೆಡ್ರಲ್ ಸೊಸೈಟಿಗೆ ಅಕ್ರಮ ಸೈಟ್ ಹಂಚಿಕೆ

## ಮಾಜಿ ಆಯುಕ್ತ, ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಸೂಚನೆ

**ಮೈಸೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಕ್ಯಾಥೆಡ್ರಲ್ ಸೊಸೈಟಿಗೆ ಅಕ್ರಮವಾಗಿ ಸೈಟ್ ಹಂಚಿಕೆ ಆರೋಪ ಕೇಳಿ ಬಂದಿರುವ ಹಿನ್ನೆಲೆಯಲ್ಲಿ ಮುಡಾದ ಮಾಜಿ ಆಯುಕ್ತ ಹಾಗೂ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಸರ್ಕಾರ ಸೂಚನೆ ನೀಡಿದೆ.

ಮುಡಾದಿಂದ ಕ್ಯಾಥೆಡ್ರಲ್ ಸೊಸೈಟಿಗೆ 75225 ಚದರ ಅಡಿ ಜಾಗವನ್ನ ಅಕ್ರಮ ವಾಗಿ ನೀಡಿ ಸಾವಿರಾರು ಕೋಟಿ ರೂ. ಮೌಲ್ಯದ ಆಸ್ತಿ ಅಕ್ರಮವೆಸಗಿರುವ ಆರೋಪದ ಮೇಲೆ ಹಿಂದಿನ ಮುಡಾ ಆಯುಕ್ತ ದಿನೇಶ್ ಕುಮಾರ್ ಹಾಗೂ ಪ್ರಕರಣದಲ್ಲಿ ಭಾಗಿಯಾಗಿರುವ ಅಧಿಕಾರಿ ಗಳ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ವಕೀಲ




ವಿ.ರವಿಕುಮಾರ್, ಸ್ನೇಹಮಯಿ ಕೃಷ್ಣ, ನಿವೃತ್ತ ಶಿಕ್ಷಕ ಶಾಂತಪ್ಪ ದೂರು ಸಲ್ಲಿಕೆ ಮಾಡಿದ್ದರು. ಈ ಸಂಬಂಧ ಮುಡಾ ಮಾಜಿ ಆಯುಕ್ತ, ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಸರ್ಕಾರ ಸೂಚನೆ ನೀಡಿದೆ. ಪುಟ 2

## ಸಿಎಂ ಮೇಲ್ಮನವಿ; ವಿಚಾರಣೆ ಮಾ.22ಕ್ಕೆ ಮುಂದೂಡಿಕೆ

**ಬೆಂಗಳೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಿಂದ ತಮ್ಮ ಪತ್ನಿ ಹೆಸರಿಗೆ ಅಕ್ರಮವಾಗಿ ನಿವೇಶನ ಪಡೆದ ಆರೋಪದಲ್ಲಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದ ರಾಜ್ಯಪಾಲರ ಕ್ರಮ ಎತ್ತಿ ಹಿಡಿದಿದ್ದ ಏಕಸದಸ್ಯ ಪೀಠದ ಆದೇಶ ಪ್ರಶ್ನಿಸಿ ಸಲ್ಲಿಸಿದ್ದ ಮೇಲ್ಮನವಿ ಅರ್ಜಿ ವಿಚಾರಣೆಯನ್ನು ಹೈ ಕೋರ್ಟ್ ಮಾರ್ಚ್ 22 ಕ್ಕೆ ಮುಂದೂಡಿದೆ.



ಸಿಎಂ ಸಿದ್ದರಾಮಯ್ಯ ಸಲ್ಲಿಸಿದ್ದ ಮೇಲ್ಮನವಿ ಅರ್ಜಿ ವಿಚಾರಣೆ ನಡೆಸಿದ ಮುಖ್ಯನ್ಯಾಯಮೂರ್ತಿ ಎನ್.ವಿ. ಅಂಜಾರಿಯಾ ಮತ್ತು ನ್ಯಾಯಮೂರ್ತಿ ಎಂ.ಐ.ಅರುಣ್ ಅವರಿದ್ದ ಪೀಠ ಈ ಆದೇಶ ನೀಡಿ ವಿಚಾರಣೆಯನ್ನು ಮಾರ್ಚ್ 22 ಕ್ಕೆ ಮುಂದೂಡಿದೆ.

ವಿಚಾರಣೆ ವೇಳೆ ಸಿದ್ದರಾಮಯ್ಯ ಪರ ವಕೀಲರು, ಪ್ರಕರಣ ಸಂಬಂಧ ಸುಪ್ರೀಂ ಕೋರ್ಟ್ ಹಿರಿಯ ವಕೀಲ ಡಾ.ಅಭಿಷೇಕ್ ಮನು ಸಿಂಘ್ವಿ ಅವರು ವಾದ ಮಂಡಿಸಬೇಕಾಗಿದೆ. ಆದರೆ, ಅವರು ಕಾರಣಾಂತರಗಳಿಂದ ಬರಲಾಗಿಲ್ಲ. ಹೀಗಾಗಿ ಅರ್ಜಿ ವಿಚಾರಣೆ ಮುಂದೂಡಬೇಕು ಎಂದು ಕೋರಿದರು. ಪುಟ 2

## ನಾವೇ ಬೆಂಗಳೂರು ಅರಮನೆ ಜಾಗದ ಓನರ್

**ಮೈಸೂರು:** ನಾನು ಸಂಪುಟ ನಿರ್ಧಾರದ ಬಗ್ಗೆ ನೋಡಿದೆ. 1996 ರಲ್ಲಿ ಅಕ್ವಿಜೇಶನ್ ಅಂಡ್ ಸ್ಟೇ ಆರ್ಡರ್ ಕೂಡ ನಮ್ಮ ಬಳಿಯಿದೆ. ಎಂದು ಸರ್ಕಾರದ ಸುಗ್ರೀವಾಜ್ಞೆಗೆ ಪ್ರಮೋದ ದೇವಿ ಒಡೆಯರ್ ತಿರುಗೇಟು ನೀಡಿದ್ದಾರೆ.




ಸುಪ್ರೀಂ ಕೋರ್ಟ್ ಕೂಡ ಬೆಂಗಳೂರು ಅರಮನೆ ಜಾಗದ ಬಗ್ಗೆ ಹೇಳಿದೆ. ಕರ್ನಾಟಕದ ಸರ್ಕಾರದ ಅಣತಿಯಂತೆ ಇದುವರೆಗೂ ಅಲ್ಲಿ ಎಲ್ಲವೂ ನಡೆದಿದೆ. ಯಾವುದು ಕೂಡ ಅವರಿಗೆ ಗೊತ್ತಿಲ್ಲದ ರೀತಿ ನಡೆದಿಲ್ಲ. ಅವರು ಸ್ಟೇ ಇಲ್ಲ ಅಂದಿದ್ದಾರೆ, ಆದ್ರೆ ಸ್ಟೇ ಇದೇ, ಓನರ್ ಶಿಪ್ ಇದೆ. ಈಗಲೂ ನಾವೇ ಬೆಂಗಳೂರು ಅರಮನೆ ಜಾಗದ ಓನರ್ ಆಗಿದ್ದೇವೆ ಎಂದರು.

ನಾನು ಕೆಲ ಹೆಸರನ್ನು ಹೇಳುತ್ತೇನೆ, ಶ್ರೀಕಂಠದತ್ತ ನರಸಿಂಹರಾಜ ಒಡೆಯರ್ ಹಾಗೂ ಅಕ್ಕ ತಂಗಿಯರು ಕೂಡ ಓನರ್ ಶಿಪ್ ಅಲ್ಲಿದ್ದಾರೆ ಇನ್ನೂ ಅನೇಕರ ಹೆಸರಿದೆ. ರಸ್ತೆಗೆ ಹೋಗಿರುವ ಪ್ರಾಪರ್ಟಿ ಕೂಡ ನಮ್ಮದೇ . 15 ಎಕರೆ 36 ಗುಂಟೆ ಬಳಸಿದ್ದಾರೆ. ಟಿ.ಡಿ.ಆರ್ ಹೇಗೆ ಬಂತು ಅಂದ್ರೆ, ಜನರಿಗೆ ರಸ್ತೆ ಬೇಕು , ನಿಮ್ಮ ಜಾಗ ಬಳಸಿಕೊಳ್ಳುತ್ತೇವೆ. ನಿಮಗೆ ಟಿ.ಡಿ.ಆರ್ ಕೊಡುತ್ತವೆ ಅಂತ ಹೇಳಿದ್ದು ಬಿಬಿಎಂಪಿ. ಟಿ.ಡಿ.ಆರ್ ಕೊಡುತ್ತೇವೆ ಅಂತ ಕೋರ್ಟ್ ಗೆ ಹೋಗಿದ್ರು, 2014 ರಲ್ಲಿ ಇದು ಡಿಸ್ಮಸ್ ಆಗಿದೆ. ಎಲ್ಲ ವಾದ ವಿವಾದ ಕೇಳಿ ಪುಟ 2

## ಮೈಕ್ರೋ ಫೈನಾನ್ಸ್‌ಗಳ ಹಾವಳಿ; ರೈತರ ಆತ್ಮಹತ್ಯೆಗೆ ಸರ್ಕಾರವೇ ನೇರ ಹೊಣೆ

**ಬೆಂಗಳೂರು:** ರಾಜ್ಯದಲ್ಲಿ ಇತ್ತೀಚಿನ ಮೈಕ್ರೋ ಫೈನಾನ್ಸ್ ಗಳ ವಸೂಲಿ ದಂಧೆಗಳಿಗೆ ರಾಜ್ಯದ ರೈತರುಗಳು ಆತ್ಮಹತ್ಯೆ ಮಾರ್ಗವನ್ನು ಹಿಡಿದಿರುವುದಕ್ಕೆ ರಾಜ್ಯ ಸರ್ಕಾರವೇ ನೇರ ಹೊಣೆ ಹೊರಬೇಕು ಹಾಗೂ ಕೂಡಲೇ ಕಠಿಣ ಕಾನೂನು ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಆಮ್ ಆದ್ಮಿ ಪಕ್ಷದ ರಾಜ್ಯಾಧ್ಯಕ್ಷ ಡಾ. ಮುಖ್ಯಮಂತ್ರಿ ಚಂದ್ರು ಮುಖ್ಯಮಂತ್ರಿಗಳಿಗೆ ಬರೆದಿರುವ ಪತ್ರದಲ್ಲಿ ಆಗ್ರಹಿಸಿದ್ದಾರೆ.



ಮುಖ್ಯಮಂತ್ರಿ ಚಂದ್ರು ತಮ್ಮ ಪತ್ರದಲ್ಲಿ, ಈ ಅಕ್ರಮ ಕಂಪನಿಗಳು ಸ್ಥಳೀಯ ರಾಜಕಾರಣಿಗಳು ಹಾಗೂ ಪೊಲೀಸ್ ಇಲಾಖೆಯ ಕೃಪಾಕಟಾಕ್ಷದಿಂದಾಗಿ ರೈತಾಪಿ ಮಕ್ಕಳ ಮೇಲೆ ಯಾವುದೇ ಆರ್ ಬಿ ಐ ನಿಯಮಾವಳಿಗಳು ಹಾಗೂ ಈ ನೆಲದ ಕಾನೂನುಗಳನ್ನು ಉಲ್ಲಂಘಿಸಿ ಅಕ್ರಮ ವಸೂಲಿ, ಬೆದರಿಕೆ, ಅಪಮಾನ ದಂತಹ ಕ್ರಿಮಿನಲ್ ಮಾರ್ಗಗಳಿಂದ ಚಕ್ರ ಬಡ್ಡಿ ವಸೂಲಿ ಮಾಡುತ್ತಿರುವುದು ರಾಜ್ಯದಲ್ಲಿ ಪೊಲೀಸ್ ಪುಟ 2

## ಗರ್ಭ ಧರಿಸಿದ್ದ ಗೋ ವಧೆ ಪ್ರಕರಣ: ಓರ್ವ ಆರೋಪಿ ಬಂಧನ

**ಕಾರವಾರ:** ಹೊನ್ನಾವರ ತಾಲೂಕಿನ ಸಾಲ್ಕೋಡ್ ಗ್ರಾಮದ ಕೊಂಡಾಕುಳಿಯಲ್ಲಿ ಗರ್ಭ ಧರಿಸಿದ್ದ ಗೋ ಹತ್ಯೆ ಪ್ರಕರಣ ಸಂಬಂಧ ಓರ್ವ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ.

ಹೊನ್ನಾವರ ತಾಲೂಕಿನ ವಲ್ಕಿಯ ತೌಫಿಕ್ ಅಹಮ್ಮದ್ ಜಿದ್ದಾ ಬಂಧಿತ ಆರೋಪಿ. ಕೊಂಡಾಕುಳಿಯಲ್ಲಿ ಇದೇ ಜನವರಿ 19 ರಂದು ಗೋವಿನ ಹತ್ಯೆ ನಡೆದಿತ್ತು. ಗರ್ಭ ಧರಿಸಿದ್ದ ಗೋವನ್ನು ಕೊಂದು ಕರುವನ್ನು ಸಹ ದುಷ್ಕರ್ಮಿಗಳು ಅಲ್ಲಿಯೇ ಬಿಸಾಡಿ ಹೋಗಿದ್ದರು. ಈ ಕೃತ್ಯ ಖಂಡಿಸಿ ರಾಜ್ಯದೆಲ್ಲೆಡೆ ಆಕ್ರೋಶ ವ್ಯಕ್ತವಾಗಿತ್ತು.ಪುಟ 2

## ರಾಣಾನನ್ನು ಭಾರತಕ್ಕೆ ಹಸ್ತಾಂತರಿಸಲು ಸುಪ್ರೀಂ ಒಪ್ಪಿಗೆ

**ವಾಷಿಂಗ್ಟನ್:** ಮುಂಬೈ ಸ್ಫೋಟದ ದಾಳಿಯ ಅಪರಾದಿ ಉಗ್ರ ತಹವ್ವುರ್ ರಾಣಾನನ್ನು ಭಾರತಕ್ಕೆ ಹಸ್ತಾಂತರ ಮಾಡಲು ಅಮೆರಿಕದ ಸುಪ್ರೀಂ ಕೋರ್ಟ್ ಹಸಿರು ನಿಶಾನೆ ತೋರಿದೆ.ಇದರಿಂದಾಗಿ ಪಾಕಿಸ್ತಾನಕ್ಕೆ ಹಿನ್ನಡೆಯಾಗಿದೆ.

ಭಾರತಕ್ಕೆ ಹಸ್ತಾಂತರ ಮಾಡದಂತೆ ಸಲ್ಲಿಸಿದ್ದ ಮರುಪರಿಶೀಲನಾ ಅರ್ಜಿ ವಜಾಗೊಳಿಸಿದೆ. ಹೀಗಾಗಿ 2008 ರ ಮುಂಬೈ ಭಯೋತ್ಪಾದಕ ದಾಳಿ ಪ್ರಕರಣದಲ್ಲಿ ಪಾಕಿಸ್ತಾನಿ ಮೂಲದ ಕೆನಡಾದ ಪ್ರಜೆ ರಾಣಾ



ಅವರನ್ನು ಹಸ್ತಾಂತರ ಮಾಡುವ ದಾರಿ ಸುಲಭವಾಗಿದೆ

ಭಾರತಕ್ಕೆ ಹಸ್ತಾಂತರಿಸದಿರಲು ರಾಣಾಗೆ ಇದು ಕೊನೆಯ ಕಾನೂನು ಅವಕಾಶವಾಗಿತ್ತು. ಇದಕ್ಕೂ ಮೊದಲು, ಸ್ಯಾನ್ ಫ್ರಾನ್ಸಿಸ್ಕೋದ ಉತ್ತರ ಸರ್ಕ್ಯೂಟ್‌ನಲ್ಲಿ ಮನವಿ ಮಾಡಿದ್ದರು. ಜೊತೆಗೆ ಕೋರ್ಟ್ ಆಫ್ ಅಪೀಲ್ಸ್ ಸೇರಿದಂತೆ ಹಲವಾರು ಫೆಡರಲ್ ನ್ಯಾಯಾಲಯಗಳಲ್ಲಿ ಕಾನೂನು ಹೋರಾಟದಲ್ಲಿ ಸೋತಿದ್ದಾರೆ. ಹೀಗಾಗಿ ಭಾರತಕ್ಕೆ ಹಸ್ತಾಂತರ ಒಂದೇ ಬಾಕಿ ಉಳಿದಿದೆ

ರಾಣಾನನ್ನು ನವೆಂಬರ್ 13 ರಂದು ಅಮೆರಿಕಾದ ಸುಪ್ರೀಂ ಕೋರ್ಟ್‌ನಲ್ಲಿ "ಸರ್ಟಿಯೊರಾರಿ ಪುಟ 2

ಮೊದಲ ಪುಟದಿಂದ

## ಬೇಲ್ ಸಿಗಲ್ಲ ಹುಷಾರ್!

ಮೇಲೆ ಸಾಲ ಕೊಡುತ್ತಿದ್ದೀರಿ. ಸಾಲ ತೀರಿಸಲು ಸಾಧ್ಯವಾಗದಿದ್ದಾಗ ನಿಯಮ ಬಾಹಿರ ಕ್ರಮಕ್ಕೆ ಮುಂದಾಗುತ್ತಿದ್ದೀರಿ. ಇದನ್ನು ನಮ್ಮ ಸರ್ಕಾರ ಸಹಿಸುವುದಿಲ್ಲ ಎಂದು ಹೇಳಿದರು.

ಒಬ್ಬರೇ ಸಾಲಗಾರರು ಬೇರೆ ಬೇರೆ ಗುರಿತಿನ ಚೀಟಿ ( ಐ ಡಿ ಕಾರ್ಡ್ ಗಳು) ಕೊಟ್ಟು ಸಾಲ ಪಡೆದಿರುವುದು ನಿಮ್ಮ ದಾಖಲೆಗಳಲ್ಲಿದೆ. ಆದರೆ ಸಾಲಗಾರರು ಈ ರೀತಿ ದುರುಪಯೋಗ ಪಡಿಸಿಕೊಳ್ಳುವುದನ್ನು ತಪ್ಪಿಸಲು ಯಾವ ಪದ್ಧತಿ ಪಾಲಿಸುತ್ತಿದ್ದೀರಿ: ಕಂಪನಿಗಳಿಗೆ ಕೇಳಿದ ಸಿಎಂ

ಆರ್ ಬಿ ಐ ಪರವಾನಗಿ ಪಡೆದಿರುವ ಕಂಪನಿಗಳು ನಿಯಮಬಾಹಿರ ವಸೂಲಿಗೆ ಇಳಿದಿಲ್ಲ, ಆ ರೀತಿ ಮಾಡುತ್ತಿರುವುದು ಪರವಾನಗಿ ಇಲ್ಲದ ಕಂಪನಿಗಳು ಈ ರೀತಿ ಮಾಡುತ್ತಿವೆ ಎಂದು ಮೈಕ್ರೋ ಸಂಸ್ಥೆಗಳು ಉತ್ತರಿಸಿದ್ದು, ಇದಕ್ಕೆ ಸಚಿವ ಕೃಷ್ಣಬೈರೇಗೌಡರು, ಎಚ್.ಕೆ.ಪಾಟೀಲ್, ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ತಕರಾರು ವ್ಯಕ್ತಪಡಿಸಿ, ಪರವಾನಗಿ ಇದ್ದವರೇ ಈ ರೀತಿ ಮಾಡುತ್ತಿದ್ದಾರೆ ಎನ್ನುವ ವರದಿ ನಮಗೆ ಗ್ರೌಂಡ್ ರಿಪೋರ್ಟ್‌ನಲ್ಲಿ ಬಂದಿದೆ. ಆದ್ದರಿಂದ ಬಡ ಜನರ ಹಿತಕಾಯಲು ನಾವು ನಿಯಮ ಉಲ್ಲಂಘಿಸುವ ಕಂಪನಿ ಎಂ.ಡಿ ಗಳ ವಿರುದ್ಧ ಕ್ರಮ ಕೈಗೊಳ್ಳುವುದು ಅನಿವಾರ್ಯವಾಗುತ್ತದೆ ಎಂದು ಸಚಿವರು ಸಭೆಯಲ್ಲಿ ಗುಡುಗಿದರು.

ಮಹಿಳೆಯರ, ವೃದ್ಧರ ಮೇಲೆ ದಬ್ಬಾಳಿಕೆ ನಡೆಸಿರುವ ಪತ್ರಿಕಾ ವರದಿಗಳೂ ನಿತ್ಯ ಬರುತ್ತಿವೆ. ನಾನು ಇದನ್ನೆಲ್ಲಾ ಸಹಿಸುವುದಿಲ್ಲ. ನನ್ನ ಜನರ ರಕ್ಷಣೆಗೆ ನಾನು ಕಠಿಣ ಕ್ರಮ ಕೈಗೊಳ್ಳುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಭೆಯಲ್ಲೇ ಕಠಿಣ ಎಚ್ಚರಿಕೆ ನೀಡಿದರು.

ಇದೇ ವೇಳೆ ಕೌಶಲ್ಯಾಭಿವೃದ್ಧಿ ಇಲಾಖೆ ವತಿಯಿಂದ ಕ್ರೆಡಿಟ್ ಕೋ ಆಪರೇಟಿವ್ ಸಂಸ್ಥೆ ತೆರೆದು ಇದರಿಂದ ಸ್ತ್ರೀಶಕ್ತಿ ಸಹಾಯ ಸಂಘಗಳಿಗೆ ಕಡಿಮೆ ಬಡ್ಡಿ ದರದಲ್ಲಿ ಸಾಲ ನೀಡಲು ಸರ್ಕಾರ ಚರ್ಚೆ ನಡೆಸಿದೆ.

ಸಭೆಯಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹ ಸಚಿವರಾದ ಜಿ.ಪರಮೇಶ್ವರ್, ಕಾನೂನು ಸಚಿವರಾದ ಎಚ್.ಕೆ.ಪಾಟೀಲ್, ಕಂದಾಯ ಸಚಿವ ಕೃಷ್ಣಬೈರೇಗೌಡ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ಎಸಿಎಸ್ ಅತೀಕ್ ಅಹಮದ್, ರಾಜ್ಯ ಪೊಲೀಸ್ ಮಹಾ ನಿರ್ದೇಶಕ ಅಲೋಕ್ ಮೋಹನ್ ಸೇರಿ ಗೃಹ ಇಲಾಖೆ, ಒಳಾಡಳಿತ, ಕಂದಾಯ, ಗುಪ್ತಚರ ಇಲಾಖೆಗಳ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಸಿದ್ದರಾಮಯ್ಯ ಸಿಎಂ ಅದಾಗಲೆಲ್ಲಾ ಅರಮನೆ ವಿಚಾರದಲ್ಲಿ ಗೊಂದಲ

ಸರಿಯಲ್ಲ. ಸಿಎಂ ಸಿದ್ದರಾಮಯ್ಯ ಮೈಸೂರು ಮಹಾರಾಜರ ಬಗ್ಗೆ ಲಘುವಾಗಿ ಮಾತನಾಡುವುದು ಸರಿಯಲ್ಲ. ಸಿಎಂ ಅದಾಗೆಲ್ಲ ತೀಟೆ ಮಾಡುವುದು, ಅನವಶ್ಯಕ ಕಿರುಕುಳ ನೀಡುತ್ತಿದ್ದಾರೆ. ರಸ್ತೆಗೆ ಇರುವ ರಾಜರ ಹೆಸರು ತೆಗೆಯುವುದು. ಅಂತಹ ಮಹಾರಾಜರ ಬಗ್ಗೆ ಲಘುವಾಗಿ ಮಾತನಾಡುವುದು, ಕೆಣಕುವುದು ಸರಿಯಲ್ಲ. ನಾನು ಡೆಮೋಕ್ರೆಟಿಕ್ ಎಂದು ತೋರಿಸಿಕೊಳ್ಳಲು ಇದೆನ್ನೆಲ್ಲ ಮಾಡುತ್ತಿದ್ದಾರೆ. ಈ ರೀತಿ ಸಿಎಂ ಸಿದ್ದರಾಮಯ್ಯ ನಡೆದುಕೊಳ್ಳಬಾರದು ಎಂದು ವಾಗ್ದಾಳಿ ನಡೆಸಿದರು.

**ಲೋಕಾಯುಕ್ತ ಸರ್ಕಾರದ ಕೈಗೊಂಬೆ:** ಮುಡಾ ಹಗರಣದಲ್ಲಿ ಲೋಕಾಯುಕ್ತದಿಂದ ಸಿಎಂ ಸಿದ್ದರಾಮಯ್ಯಗೆ ಕ್ಲೀನ್ ಚೀಟ್ ಎಂಬ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಹೆಚ್.ವಿಶ್ವನಾಥ್ , ಲೋಕಾಯುಕ್ತ ಸರ್ಕಾರದ ಕೈಗೊಂಬೆಯಾಗಿದೆ. ಲೋಕಾಯುಕ್ತರಿಗೆ ಪೋಸ್ಟಿಂಗ್ ಮಾಡೋದು ಸರ್ಕಾರ. ಹೀಗಾಗಿ ಅಧಿಕಾರಿಗಳು ಸರ್ಕಾರದ ಕೈಗೊಂಬೆಯಾಗಿ ಕೆಲಸ ಮಾಡುತ್ತಾರೆ. ಇಡೀ ದೇಶದಲ್ಲೇ ಇಂತಹ ದೊಡ್ಡ ಹಗರಣವಾಗಿಲ್ಲ. ಮೈಸೂರಿನವರೇ ಸಿಎಂ ಆಗಿರುವಾಗ ಇಲ್ಲೇ ಹಗರಣವಾಗಿದೆ. ಲೋಕಾಯುಕ್ತರು ಯಾವುದನ್ನೂ ಸರಿಯಾಗಿ ಪರಾಮರ್ಶೆ ಮಾಡಿಲ್ಲ. ಸಿಎಂ ಪ್ರೆಸ್ ಮೀಟ್ ಮಾಡುವಾಗ ಹಿಂದೆಯಿಂದ ಸಚಿವ ಭೈರತಿ ಸುರೇಶ್ 62 ಕೋಟಿ ಸರ್ ಎಂದು ಹೇಳುತ್ತಾರೆ. ಇದನ್ನೇಕೆ ಲೋಕಾಯುಕ್ತ ಸಿರಿಯಸ್ ಆಗಿ ತೆಗೆದುಕೊಂಡಿಲ್ಲ.? ಪೊಲೀಸ್ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಸರ್ಕಾರಿ ಅಧಿಕಾರಿಗಳಾಗಿ ಕೆಲಸ ಮಾಡಬೇಕು. ಯಾವುದೊ ಶಾಸಕರ ಅಧಿಕಾರಿಗಳಗಬಾರದು ಎಂದು ಹೆಚ್.ವಿಶ್ವನಾಥ್ ಚಾಟಿ ಬೀಸಿದರು.

## ಮಾಜಿ ಆಯುಕ್ತ, ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಸೂಚನೆ

ಈ ಕುರಿತು ಜನವರಿ 10 ರಂದೇ ಮುಡಾ ಆಯುಕ್ತ ರಘುನಂದನ್ ಅವರಿಗೆ ಪತ್ರ ಬರೆದಿರುವ ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿ ಕೆ.ಲತಾ ಅವರು, ಮುಡಾದಿಂದ ಕ್ಯಾಥೆಡ್ರಲ್ ಸೊಸೈಟಿಗೆ ಅಕ್ರಮ ಸೈಟುಗಳ ಹಂಚಿಕೆ ಸಂಬಂಧ ಮುಡಾದ ಮಾಜಿ ಆಯುಕ್ತರು ಹಾಗೂ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ಈ ಹಿನ್ನೆಲೆಯಲ್ಲಿ 3 ದಿನದಲ್ಲಿ ದೋಷಾರೋಪಣಾ ಪಟ್ಟಿ ಸಲ್ಲಿಸುವಂತೆ ಸೂಚಿಸಿದ್ದಾರೆ.ಭೂಮಿ ನೀಡಿದ ಅಂದಿನ ಆಯುಕ್ತರು, ಅಧಿಕಾರಿಗಳು, ನಗರ ಯೋಜನಾ ಕಾರ್ಯದರ್ಶಿ, ಅವರ ಜನ್ಮದಿನಾಂಕ, ವಿಳಾಸ, ನಿವೃತ್ತರಾಗಿದ್ದರೆ ಮನೆ ವಿಳಾಸ ನೀಡಿ ಎಂದಿರುವ ಕೆ.ಲತಾ ಅವರು, ಪ್ರಾಧಿಕಾರದ ಹಿತಾಸಕ್ತಿಗೆ ವಿರುದ್ಧವಾಗಿ ಮುಡಾ ಮಾಜಿ ಆಯುಕ್ತ ದಿನೇಶ್ ಕುಮಾರ್ ನಡೆದುಕೊಂಡಿದ್ದಾರೆ. ದಿನೇಶ್ ಕುಮಾರ್ ಗಂಭೀರವಾದ ಕರ್ತವ್ಯಲೋಪ ಎಸಗಿದ್ದು, ಸರ್ಕಾರದ ಹಿತಾಸಕ್ತಿಗೆ ವಿರುದ್ಧವಾಗಿ ನಡೆದುಕೊಂಡಿದ್ದಾರೆ. ಅವರು ಜವಾಬ್ದಾರಿಯುತ ಸರ್ಕಾರಿ ನೌಕರನ ರೀತಿ ನಡೆದುಕೊಂಡಿಲ್ಲ. ಹೀಗಾಗಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು–1957 ರ ನಿಯಮ ಶಿಸ್ತುಕ್ರಮ ಜರುಗಿಸಲು ಅನುವಾಗುವಂತೆ ದೋಷಾರೋಪ ಸಲ್ಲಿಸಿ. ಮೂಲ ಅಥವಾ ದೃಢೀಕೃತ ಪ್ರತಿಗಳೊಂದಿಗೆ ಸರ್ಕಾರಕ್ಕೆ ಕಳುಹಿಸಿ ಎಂದು ಕೆ.ಲತಾ ಅವರು ಪತ್ರದ ಮೂಲಕ ಮುಡಾ ಆಯುಕ್ತ ರಘುನಂದನ್ ಗೆ ತಿಳಿಸಿದ್ದಾರೆ.

## ಮುಡಾ ಹಗರಣ; ವರದಿ ಸಲ್ಲಿಕೆ

ಹಂಚಿಕೆ ಕುರಿತು ಲೋಕಾಯುಕ್ತ ಪೊಲೀಸರು ಸಮಗ್ರ ತನಿಖೆ ನಡೆಸಿದ್ದು, ಮುಡಾ ಕಚೇರಿ ಎಲ್ಲಾ ದಾಖಲಾತಿಗಳನ್ನು ಸಂಗ್ರಹಿಸಿ ಮಾಹಿತಿಗಳನ್ನು ಕ್ರೋಢೀಕರಿಸಿ ವರದಿಯನ್ನು ಸಿದ್ಧಪಡಿಸಿದ್ದಾರೆ. ಈ ವರದಿ ಇಂದು ನ್ಯಾಯಾಲಯಕ್ಕೆ ಸಲ್ಲಿಕೆಯಾಗಲಿದೆ. ಮುಡಾದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕುಟುಂಬದವರು ನಿವೇಶನ ಪಡೆದಿರುವುದು ರಾಜ್ಯ ಹಾಗೂ ದೇಶಾದ್ಯಂತ ಸುದ್ದಿಯಾಗಿತ್ತು. ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಅವರು ಈ ಬಗ್ಗೆ ತನಿಖೆ ನಡೆಸಬೇಕೆಂದು ಲೋಕಾಯುಕ್ತ ಪೊಲೀಸರಿಗೆ, ರಾಜ್ಯಪಾಲರಿಗೆ ದೂರು ನೀಡಿದ್ದರು.

## ವಿಜೇತರಿಗೆ ಪ್ರಶಸ್ತಿ

ಲಿಂಗಿಗಳು ಹಾಗೂ ಬುಡಕಟ್ಟು ಜನಾಂಗದವರಿಗೆ ಗುರುತಿನ ಚೀಟಿ ವಿತರಿಸಲಾಯಿತು. ಇದೇ ವೇಳೆ ಬ್ಯಾಡ್ಜ್ ವಿತರಿಸಲಾಯಿತು.

ರಾಷ್ಟ್ರೀಯ ಮತದಾರರ ದಿನಾಚರಣೆಯ ಅಂಗವಾಗಿ ಸಭಾಂಗಣಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು, ವಿದ್ಯಾರ್ಥಿಗಳು ಸೇರಿದಂತೆ 1500ಕ್ಕೂ ಹೆಚ್ಚು ಮಂದಿ ಮತದನಾ ಪ್ರತಿಜ್ಞಾ ವಿಧಿ ಸ್ವೀಕರಿಸಿದರು.

ಮತದಾರರ ಪಟ್ಟಿ ಪರಿಷ್ಕರಣೆ ಸೇರಿದಂತೆ ಇನ್ನಿತರೆ ವಿಷಯಗಳಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿದಂತಹ ಅಧಿಕಾರಿಗಳಿಗೆ ರಾಜ್ಯಮಟ್ಟದ ಪ್ರಶಸ್ತಿ ವಿಜೇತರಿಗೆ ಪ್ರಶಸ್ತಿ ಹಾಗೂ ಪಾರಿತೋಷಕವನ್ನು ವಿತರಿಸಲಾಯಿತು. (ಕಾರ್ಯಕ್ರಮದಲ್ಲಿ ಮುಖ್ಯ ಚುನಾವಣಾಧಿಕಾರಿಯಾದ ಶ್ರೀ ಮನೋಜ್ ಕುಮಾರ್ ಮೀನಾ, ಮುಖ್ಯ ಆಯುಕ್ತರಾದ ಶ್ರೀ ತುಷಾರ್ ಗಿರಿ ನಾಥ್, ಹೆಚ್ಚುವರಿ ಮುಖ್ಯ ಚುನಾವಣಾಧಿಕಾರಿಯಾದ ಕುರುಮರಾವ್, ಚುನಾವಣಾ ವಿಭಾಗದ ವಿಶೇಷ ಆಯುಕ್ತರಾದ ಸೆಲ್ವಮಣಿ, ಅಪರ ಜಿಲ್ಲಾ ಚುನಾವಣಾಧಿಕಾರಿಗಳು, ಸ್ವೀಪ್ ನೋಡಲ್ ಅಧಿಕಾರಿ ಪಿ.ಎನ್ ವಸ್ತದ್ ಸೇರಿದಂತೆ ಇನ್ನಿತರೆ ಹಿರಿಯ ಅಧಿಕಾರಿಗಳು, ವಿದ್ಯಾರ್ಥಿಗಳು ಹಾಜರಿದ್ದರು.

# ಮಾದಕವಸ್ತುಗಳ ಸಾಗಣೆ, ಬಳಕೆ ಕಂಡು ಬಂದಲ್ಲಿ ಸಾರ್ವಜನಿಕರು ಪೊಲೀಸರಿಗೆ ಮಾಹಿತಿ ನೀಡಿ






ಚಿಕ್ಕಬಳ್ಳಾಪುರ: ಮಾದಕ ವಸ್ತು ಮುಕ್ತ ಚಿಕ್ಕಬಳ್ಳಾಪುರ ನಿರ್ಮಾಣಕ್ಕಾಗಿ ಜಿಲ್ಲಾ ಪೊಲೀಸ್ ಇಲಾಖೆ ನಿರಂತರವಾಗಿ ಶ್ರಮಿಸುತ್ತಿದೆ.ಗಾಂಜಾ ಸೇರಿ ಯಾವುದೇ ಮಾದಕವಸ್ತುಗಳ ಸಾಗಣೆ, ಬಳಕೆ ಕಂಡು ಬಂದಲ್ಲಿ ಸಾರ್ವಜನಿಕರು ಪೊಲೀಸರಿಗೆ ಮಾಹಿತಿ ನೀಡಿದರೆ, ಕಾನೂನು ಕ್ರಮಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ ತಿಳಿಸಿದರು.

ನಗರದ ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿ, ಜಿಲ್ಲೆಗೆ ಗಾಂಜಾ ಸೇರಿ ಇತರೆ ಮಾದಕ ವಸ್ತುಗಳು ಅಂಧ್ರಪ್ರದೇಶದಿಂದ ಹೆಚ್ಚಿನ ಪ್ರಮಾಣದಲ್ಲಿ ಬರುತ್ತಿದೆ. ಆಂಧ್ರ ಗಡಿ ಠಾಣೆಗಳಾದಬಾಗೇಪಲ್ಲಿ, ಚೇಳೂರು, ಬಟ್ಲಹಳ್ಳಿ, ಕೆಂಚಾರ್ಲಹಳ್ಳಿ ಮತ್ತು ಗೌರಿಬಿದನೂರು ಠಾಣೆಗಳಲ್ಲಿ ಹೆಚ್ಚಿನ ನಿಗಾವಹಿಸಲಾಗಿದೆ ಎಂದು ಹೇಳಿದರು.

2024ನೇ ಸಾಲಿನಲ್ಲಿ 26 ಮಾದಕ ವಸ್ತುಗಳ ಸಾಗಣೆ ಪ್ರಕರಣ ದಾಖಲಾಗಿದೆ. ಈ ವರ್ಷ ಜನವರಿ ತಿಂಗಳಿನಲ್ಲಿ 5 ಪ್ರಕರಣ ದಾಖಲಾಗಿದೆ. ಸಾರ್ವಜನಿಕರು ಮತ್ತು ಮಾಧ್ಯಮ ಸಹಕಾರ ದೊಂದಿಗೆ ಮಾದಕ ವಸ್ತುಗಳ ಮುಕ್ತ ಚಿಕ್ಕಬಳ್ಳಾಪುರ ಮಾಡಲು ಪೊಲೀಸ್ ಇಲಾಖೆ ಶ್ರಮಿಸುತ್ತಿದೆ.

ಮಾದಕ ವಸ್ತುಗಳ ಸಾಗಣೆ ಬಗ್ಗೆ ನಿರಂತರವಾಗಿ ಮಾಹಿತಿ ಕಲೆಹಾಕಲಾಗುತ್ತಿದೆ. ಆರೋಪಿಗಳು ಹೊಸ ಮಾರ್ಗದಲ್ಲಿ ಗಾಂಜಾ ಸಾಗಿಸುತ್ತಿದ್ದು ಅದನ್ನು ಹಿಡಿಯಲು ಇಲಾಖೆ ನಿರಂತರವಾಗಿ ಶ್ರಮಿಸುತ್ತಿದೆ ಎಂದರು.

ಗಾಂಜಾ ಹಿಡಿದಾಗ ಕೇವಲ ಅಲ್ಲಿ ಸಿಕ್ಕ ಆರೋಪಿಗಳನ್ನು ಮಾತ್ರ ವಿಚಾರಣೆ ಮಾಡದೆ ಅವರ ಸ್ನೇಹಿತರು,ಅವರ ಪರಿಚಿತರ ಬಗ್ಗೆಯೂ ಮಾಹಿತಿ ಕಲೆ ಹಾಕಲಾಗುತ್ತಿದೆ.

ಇನ್ನು ಶಾಲಾ ಕಾಲೇಜು ವ್ಯಾಪ್ತಿಯಲ್ಲಿ ಗಾಂಜಾ ಮಾರಾಟ ಮಾಡುವ ಬಗ್ಗೆ ಸಾರ್ವಜನಿಕರು ಮಾಹಿತಿ ನೀಡಿದರೆ, ಮಾಹಿತಿದಾರರ ಹೆಸರು ಗೋಪ್ಯವಾಗಿಟ್ಟು, ಆರೋಪಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದರು.

ರಾಷ್ಟ್ರೀಯ ಹೆದ್ದಾರಿಯಲ್ಲಿಯೂ ಚೆಕ್‌ಪೋಸ್ಟ್ ಹಾಕಿ ಪರಿಶೀಲಿಸಲಾಗುತಿದೆ. ಚಿಂತಾಮಣಿ ತಾಲ್ಲೂಕಿನ ರೈತರ ಜಮೀನಿನಲ್ಲಿ ಗಾಂಜಾ ಬೆಳೆಯುತ್ತಿರುವ ಬಗ್ಗೆ ಹೆಚ್ಚು ಪ್ರಕರಣಗಳು ದಾಖಲಾಗಿದೆ.

ಚಿಕ್ಕಬಳ್ಳಾಪುರ ಗ್ರಾಮಾಂತರ ಪ್ರದೇಶದಲ್ಲಿ ಗಾಂಜಾ ಸಾಗಣೆ ಮಾಡುವ ಬಗ್ಗೆ ದೂರುಗಳು ಬಂದಿವೆ.ಈ ಬಗ್ಗೆ ಕ್ರಮ ವಹಿಸಲಾಗುತ್ತಿದೆ ಎಂದು ಹೇಳಿದರುಇನ್ನು ಮಾದಕ ವಸ್ತುಗಳ ಬಳಕೆ ಮಾಡದಂತೆ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನೂ ಇಲಾಖೆ ಮಾಡುತ್ತಿದ್ದು, ಸಾಮಾಜಿಕ ಜಾಲತಾಣದಲ್ಲಿ ಪ್ರಚಾರ ನಡೆಸಲಾಗುತ್ತಿದೆ ಎಂದರು.

**24,758 ಕೆ.ಜಿ ಗಾಂಜಾ ನಾಶ:**

ಜಿಲ್ಲೆಯಲ್ಲಿ 2024ರಲ್ಲಿ ಗಾಂಜಾ ಸಾಗಣೆ ಸೇರಿ ಇತರೆ ಮಾದಕ ವಸ್ತುಗಳಿಗೆ ಸಂಬಂಧಿಸಿದ ಎನ್‌ಪಿಎಸ್ ಕಾಯ್ದೆಯಡಿ ಒಟ್ಟು 26 ಪ್ರಕರಣಗಳು ದಾಖಲಾಗಿದೆ. 118 ಕೆಜಿ ಗಾಂಜಾ ವಶಕ್ಕೆ ಪಡೆಯಲಾಗಿದೆ ಎಂದು ಎಸ್‌ಪಿ ಕುಶಲ್ ಚೌಕ್ಸೆ ತಿಳಿಸಿದರು.ಕಳೆದ ಸಾಲಿನಲ್ಲಿ ವಶಕ್ಕೆ ಪಡೆದಿರುವ ಗಾಂಜಾ ಸೇರಿ ಇತರೆ ಮಾದಕ ವಸ್ತುಗಳಲ್ಲಿ ಒಟ್ಟು 12 ಪ್ರಕರಣಗಳ 9.5ಲಕ್ಷ ಮೌಲ್ಯದ ಮೌಲ್ಯದ 24,758 ಕೆ.ಜಿ ಗಾಂಜಾ ನಾಶ ಮಾಡಲು ನ್ಯಾಯಾಲಯದ ಅನುಮತಿ ನೀಡಿದೆ. ಹೊಸಕೋಟೆ ಕೈಗಾರಿಕಾ ಪ್ರದೇಶದ ಕಂಪನಿ

ಯೊಂದರಲ್ಲಿ ಈ ಎಲ್ಲ ಮಾದಕ ವಸ್ತುಗಳ ನಾಶ ಮಾಡಲಾಗುತ್ತದೆ. ಉಳಿದ ಪ್ರಕರಣಗಳಲ್ಲಿದೊರೆತಿರುವ ಮಾದಕ ವಸ್ತುಗಳನ್ನೂ ಅನುಮತಿ ಸಿಕ್ಕ ನಂತರ ನಾಶ ಪಡಿಸಲಾಗುವುದು ಎಂದರು. ಸುದ್ದಗೋಷ್ಠಿಯಲ್ಲಿ ಹೆಚ್ಚುವರಿ ಎ.ಎಸ್.ಪಿ ರಾಜಾ ಇಮಾಂ ಕಾಸಿಂ ಇದ್ದರು.

# ಮುಡಾ ವಿಚಾರವಾಗಿ ಸಿಎಂ ತಪ್ಪು ಮಾಡಿಲ್ಲ, ಯಾವುದೇ ತನಿಖೆ ಎದುರಿಸಲು ಸಿದ್ಧ

**ಕೋಲಾರ :** ಮುಡಾ ವಿಚಾರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಲೋಕಾಯುಕ್ತ ಕ್ಲಿನ್‌ಚಿಟ್ ನೀಡುವ ನಿರೀಕ್ಷೆ ಇದ್ದರೂ ಅವರು ತಪ್ಪು ಮಾಡದಿರುವಾಗ ಯಾರಿಗೂ ಹೆದರುವ ಅವಶ್ಯಕತೆಯಿಲ್ಲ. ಸಿಬಿಐ, ಐಟಿ, ಇಡಿ ಯಾವುದೇ ತನಿಖೆ ಎದುರಿಸಲು ಸಿದ್ಧರಿದ್ದಾರೆ ಎಂದು ರಾಜ್ಯ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದರು.

ಸಿಎಂ ಸಿದ್ದರಾಮಯ್ಯ ಮುಡಾ ಹಗರಣದಲ್ಲಿ ಲೋಕಾಯುಕ್ತ ಕ್ಲಿನ್ ಚಿಟ್ ನೀಡುವ ಕುರಿತು ಮಾತನಾಡಿ, ಲೋಕಾಯುಕ್ತ ಕ್ಲಿನ್ ಚಿಟ್ ಕೊಡುತ್ತಾರೆ ಎನ್ನುವ ನಿರೀಕ್ಷೆ ಇದ್ದು,. ಇಡಿ, ಸಿಬಿಐ, ಐಟಿ ಬರಲಿ ಎದುರಿಸಲು ಸಿದ್ದವಿರುವುದಾಗಿ ತಿಳಿಸಿದರು.

ಸಿದ್ದರಾಮಯ್ಯ ತಪ್ಪು ಮಾಡಿಲ್ಲ ಎನ್ನುವ ನಂಬಿಕೆ ಇರುವ ಕಾರಣ ಹೆದರಲ್ಲ, ಮುಡಾ ಪ್ರಕರಣ ಸಿಬಿಐಗೆ ನೀಡುವಂತೆ ಆಗ್ರಹಿಸಿರುವ ಬಿಜೆಪಿಯವರು ಅಧಿಕಾರದಲ್ಲಿದ್ದಾಗ ಎಷ್ಟು ಪ್ರಕರಣ ಸಿಬಿಐಗೆ ನೀಡಿದ್ದಾರೆ ಎಂದು ಪ್ರಶ್ನಿಸಿದರು.

**ಬಿಜೆಪಿಯವರ ಮೇಲೆ ದಾಳಿ ಮಾಡಿದ್ದಾರಾ ?** ಬಿಜೆಪಿ ಅಧಿಕಾರದಲ್ಲಿದ್ದಾಗ ಒಂದೇ ಒಂದು ಕೇಸ್ ಸಿಬಿಐ ನೀಡಿಲ್ಲ. ಹೀಗಿರುವಾಗ ಬಿಜೆಪಿಗೆ ಒಂದು, ಬೇರೆಯವರಿಗೆ ಒಂದು ಮಾನದಂಡನಾ ಎಂದು ಪ್ರಶ್ನಿಸಿ, ಸಿಎಂ ಹೆಸರಿಗೆ ಕಳಂಕ ತರಲು ಕೇಂದ್ರ ಸರಕಾರದಿಂದ ಸಂಚು ನಡೆಸಲಾಗುತ್ತಿದೆ ಎಂದು ಆರೋಪಿಸಿದರು.

ಎಲ್ಲಾದರೂ ಇಡಿ, ಐಟಿ, ಸಿಬಿಐನಿಂದ ಬಿಜೆಪಿ ನಾಯಕರ ಮೇಲೆ ದಾಳಿ ಮಾಡಿದ್ದಾರಾ ಎಂದು ಪ್ರಶ್ನಿಸಿದ ಅವರು, ಬಿಜೆಪಿಯವರಿಗೆ ಭ್ರಷ್ಟರಲ್ಲ ಅಂತ ಸರ್ಟಿಫಿಕೇಟ್ ಕೊಡಲಾಗಿದೀಯೇ? ಇದೆಲ್ಲವನ್ನು ನೋಡಿದರೆ ಇಡಿಯು ಬಿಜೆಪಿಯ ಒಂದು ಇಲಾಖೆಯಂತೆ ಕಾಣುತ್ತದೆಯೇ ಹೊರತು ಕೇಂದ್ರ ಸರಕಾರದ ಇಲಾಖೆಯಲ್ಲಎಂದರು.

**ಬಿಜೆಪಿಯಲ್ಲಿ ಕೆಸರೆರಚಾಟ:** ಬಿಜೆಪಿ ನಾಯಕ ಶ್ರೀರಾಮುಲು ಕಾಂಗ್ರೆಸ್‌ಗೆ ಸೇರುವ ಕುರಿತು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಅವರು, ಜನಾರ್ದನ್ ರೆಡ್ಡಿ, ಶ್ರೀರಾಮುಲು ಜಗಳಕ್ಕೆ ನಮ್ಮನ್ನು ಯಾಕೆ ಸೇರಿಸುತ್ತೀರಿ. ಬಿಜೆಪಿಯಲ್ಲಿ ಒಡೆದ ಮನೆಯಾಗಿ ಒಬ್ಬರ ಮೇಲೊಬ್ಬರು ಕೆಸರೆರಚಾಟ ನಡೆಯುತ್ತಿದೆ ಎಂದರು. ನಾನು ಯಾರನ್ನು ಸಂಪರ್ಕ ಮಾಡಿಲ್ಲ ಅಂತ ಶ್ರೀರಾಮುಲು ಹೇಳಿದ್ದಾರೆ. ಕಾಂಗ್ರೆಸ್ ಶ್ರೀರಾಮುಲು ಅವರನ್ನು ಕಾಂಗ್ರೆಸ್‌ಗೆ ಕರೆತರುವ ಕೆಲಸವೂ ಮಾಡಿಲ್ಲ, ಜನಾರ್ದನ ರೆಡ್ಡಿನ ಪಕ್ಷಕ್ಕೆ ಏಕೆ ಸೇರ್ಪಡೆ ಮಾಡಿಕೊಂಡೆವು ಅನ್ನೋ ಭಾವನೆ ಬಿಜೆಪಿಗೆ ಈಗ ಬಂದಿದೆ ಎಂದು ಲೇವಡಿ ಮಾಡಿ, ಕಾಂಗ್ರೆಸ್ ಪಕ್ಷಕ್ಕೆ ಹಿರಿಯ, ಕಿರಿಯ ನಾಯಕರು ಯಾರೇ ಬಂದರು ಸ್ವಾಗತಿಸುವುದಾಗಿ ತಿಳಿಸಿದರು.

## ನಾವೇ ಓನರ್

ಟಿ.ಡಿ.ಆರ್ ಒಪ್ಪಿದರು. ಈಗ ಲೇಟೆಸ್ಟ್ 10.12.24 ರಲ್ಲಿ ನೀವು ಹೀಗೆ ಡ್ರ್ಯಾಗ್ ಮಾಡ್ತಿದ್ದೀರಾ ಅಂತ ಹೇಳಿದ್ರು, ಟಿ.ಡಿ.ಆರ್ ವ್ಯಾಲ್ಯೂ ಅಂದು ಫಿಕ್ಸ್ ಆಗಿರಲಿಲ್ಲ. ಇವತ್ತು 3 ಸಾವಿರ ಕೋಟಿ ಬರತ್ತೆ ಅಂತ ಈಗ ಬೇರೆ ರೀತಿ ಮಾಡುತ್ತಿದ್ದಾರೆ. ಆವಾಗ್ಲೇ ನಮಗೆ ಟಿ.ಡಿ.ಆರ್ ಕೊಟ್ಟಿದ್ರೆ ಇಷ್ಟು ಅಮೌಂಟ್ ಆಗ್ತಿರಲಿಲ್ಲ. ಸ್ಟೇ.ಆರ್ಡರ್ ಇದೇ ನಾವೇ ಪೋಶಿಷನ್ ಅಲ್ಲಿದ್ದೇವೆ. ಕಾನೂನು ಮೂಲಕ ಹೋರಾಟ ಮಾಡುತ್ತೇವೆ.ಎಂದು ಅವರು ಹೇಳಿದರು.

**ಅರಮನೆ ಟಾರ್ಗೆಟ್ :** ಅರಮನೆ ಟಾರ್ಗೆಟ್ ಆಗ್ತಿದ್ಯಾ ಇಲ್ವಾ ನೀವೇ ಅರ್ಥ ಮಾಡ್ಕೊಳ್ಳಿ, ಮೈಸೂರಿನಲ್ಲಿ ಪ್ರಮೋದ ದೇವಿ ಒಡೆಯರ್ ಹೇಳಿಕೆ. ಮೈಸೂರು ಅರಮನೆ ಆಯ್ತು, ಚಾಮುಂಡಿ ಬೆಟ್ಟ ಪ್ರಾಧಿಕಾರ ಮಾಡಿದ್ದಾರೆ. ಆದ್ರೆ ಬೆಟ್ಟದ ಕುರಿತು ಕೇಸ್ ಇದೆ. ನಮ್ಮಿಂದ ಯಾರಿಗೂ ತೊಂದರೆ ಇಲ್ಲ. ನಮಗೆ ಯಾಕೆ ತೊಂದರೆ ಕೊಡುತ್ತಿದ್ದಾರೆ ಗೊತ್ತಿಲ್ಲ. ದ್ವೇಷ ಇದಿಯಾ ಇಲ್ವಾ ಅದು ಗೊತ್ತಿಲ್ಲ . ನಮ್ಮನ್ನೇ ಯಾಕೆ ಟಾರ್ಗೆಟ್ ಮಾಡ್ತಾರೆ ಅದು ಗೊತ್ತಿಲ್ಲ.

ಇದೆಲ್ಲ ಯಾರು ಮಾಡ್ತಿದ್ದಾರೆ ಅಂತ ನಿಮಗೆ ಗೊತ್ತು. ಅವರನ್ನೇ ಕೇಳಿ. ಸುಮಾರು ವರ್ಷಗಳಿಂದ ಟಾರ್ಗೆಟ್ ಮಾಡ್ತಿದ್ದಾರೆ. ಕಾರಣನಾನೇ ಇಲ್ಲದೆ ಟಾರ್ಗೆಟ್ ಆಗ್ತಿದ್ದೇವೆ. ಮೈಸೂರಿನಲ್ಲಿ ರಾಜವಂಶಸ್ಥೆ ಪ್ರಮೋದ ದೇವಿ ಒಡೆಯರ್ ಹೇಳಿಕೆ.

**ಕಾನೂನು ಹೋರಾಟ:** ಕಲೆದ 30 ವರ್ಷದಿಂದ ಕಾನೂನು ಸಮರ ಮಾಡಿದ್ದೇವೆ , ಮುಂದೇನು ಹೋರಾಟ ಮಾಡ್ತೀವಿ. ಅವರು ಒಂದು ಕಲ್ಲು ಎಸೆದ್ರೆ ನಾವು ಡಿಫೆಂಡ್ ಮಾಡ್ಕೋಬೇಕು. ಮಾಡ್ಕೋತಿವಿ. ಕಾನೂನು ಸಚಿವರಿಗೆ ಮಾಹಿತಿ ಕೊರತೆ ಇದಿಯಾ ಇಲ್ವಾ ಗೊತ್ತಿಲ್ಲ. ಕೋರ್ಟ್ ಆರ್ಡರ್ ಇದ್ರು ಟಿ.ಡಿ.ಆರ್ ಕೊಡಬೇಕು ಅಂತ ಆರ್ಡರ್ ಇದ್ರು ಈ ರೀತಿ ಮಾಡ್ತಿದ್ದಾರೆ.

## ಲೈಂಗಿಕ ಕಿರುಕುಳ: ತ್ವರಿತ ಕ್ರಮಕ್ಕೆ ಸೂಚನೆ

**ಬೆಳಗಾವಿ :** ಉಡುಪಿಯಲ್ಲಿ 5 ವರ್ಷದ ಬಾಲಕಿಗೆ ಅಪರಿಚಿತ ವ್ಯಕ್ತಿ ಲೈಂಗಿಕ ಕಿರುಕುಳ ನೀಡಿದ ಪ್ರಕರಣದ ಕುರಿತು ತ್ವರಿತ ಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸೂಚನೆ ನೀಡಿದ್ದಾರೆ.

ಅಪಘಾತದಿಂದ ಗಾಯುಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಘಟನೆಯ ಮಾಹಿತಿ ಬಂದ ತಕ್ಷಣ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳ ಜೊತೆ ಮಾತನಾಡಿ ಘಟನೆಯ ವಿವರ ಪಡೆದರು.

ಘಟನೆಯನ್ನು ಗಂಭೀರವಾಗಿ ಪರಿಗಣಿಸಿ, ಆರೋಪಿಯನ್ನು ತಕ್ಷಣ ಪತ್ತೆ ಹಚ್ಚಬೇಕು. ಜೊತೆಗೆ, ಬಾಲಕಿಗೆ ಅಗತ್ಯವಾದ ಎಲ್ಲ ನೆರವನ್ನು ನೀಡಬೇಕು ಎಂದು ಸಚಿವರು ಜಿಲ್ಲಾಧಿಕಾರಿ ಹಾಗೂ ಎಸ್ಪಿಗೆ ಸೂಚನೆ ನೀಡಿದರು.

## ಲಾಯರ್ ಜಗದೀಶ್ ಬಂಧನ

**ಬೆಂಗಳೂರು:** ಬಿಗ್ ಬಾಸ್ ಮಾಜಿ ಸ್ಪರ್ಧಿ ಲಾಯರ್ ಜಗದೀಶ್ ಹಾಗೂ ಅವರ ಗನ್ ಮ್ಯಾನ್ ನನ್ನು ಕೊಡಿಗೆಹಳ್ಳಿ ಠಾಣಾ ಪೊಲೀಸರು ಬಂಧಿಸಿದ್ದಾರೆ. ನಿನ್ನೆ ಸಹಕಾರ ನಗರದ ಮನೆ ಬಳಿ ನಡೆದ ಗಲಾಟೆ ಸಂಬಂಧ ತೇಜಸ್ ಎಂಬುವವರು ನೀಡಿದ ದೂರಿನ ಮೇರೆಗೆ ಲಾಯರ್ ಜಗದೀಶ್ ಹಾಗೂ ಗನ್ ಮ್ಯಾನ್ ನನ್ನು ಪೊಲೀಸರು ಬಂಧಿಸಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಗಲಾಟೆಯಲ್ಲಿ ಲಾಯರ್ ಜಗದೀಶ್ ಅವರು ಗಾಯಗೊಂಡಿದ್ದು, ಸಾಮಾಜಿಕ ಜಾಲತಾಣದಲ್ಲಿ ಲೈವ್ ಬಂದು ಮಾತನಾಡಿದ್ದರು. ಈ ಮಧ್ಯೆ ಪೊಲೀಸರು ಲಾಯರ್ ಜಗದೀಶ್, ಮಗ ಆರ್ಯನ್ ಹಾಗೂ ಇಬ್ಬರು ಗನ್ ಮ್ಯಾನ್ಗಳನ್ನು ಅರೆಸ್ಟ್ ಮಾಡಿದ್ದಾರೆ.

ಮೊದಲ ಪುಟದಿಂದ

## ರಾಣಾನನ್ನು ಭಾರತಕ್ಕೆ ಹಸ್ತಾಂತರಿಸಲು ಸುಪ್ರೀಂ ಒಪ್ಪಿಗೆ

ರಿಟ್‌ಗಾಗಿ ಅರ್ಜಿ" ಸಲ್ಲಿಸಿ ಹಸ್ತಾಂತರ ಮಾಡದಂತೆ ಮನವಿ ಮಾಡಿದ್ದ, ಅದನ್ನು ಅಮೇರಿಕಾ ಸುಪ್ರೀಂಕೋರ್ಟ್ ಅರ್ಜಿ ವಜಾ ಮಾಡಿದೆ. ಡೊನಾಲ್ಡ್ ಟ್ರಂಪ್ ಅಮೆರಿಕದ ಅಧ್ಯಕ್ಷರಾಗಿ ಪ್ರಮಾಣ ವಚನ ಸ್ವೀಕರಿಸಿದ ಒಂದು ದಿನದ ನಂತರ ಜನವರಿ 21 ರಂದು ಇದನ್ನು ಸುಪ್ರೀಂ ಕೋರ್ಟ್ ನಿರಾಕರಿಸಿತು.

64 ವರ್ಷದ ರಾಣಾ ಅವರನ್ನು ಪ್ರಸ್ತುತ ಲಾಸ್ ಏಂಜಲೀಸ್‌ನ ಮೆಟ್ರೋಪಾಲಿಟನ್ ಡಿಟೆನ್ಷನ್ ಸೆಂಟರ್‌ನಲ್ಲಿ ಬಂಧಿಸಲಾಗಿದೆ. ಸುಪ್ರೀಂಕೋರ್ಟ್ ಹಸ್ತಾಂತರಕ್ಕೆ ಅವಕಾಶ ಮಾಡಿಕೊಟ್ಟಿರುವ ಹಿನ್ನೆಲೆಯಲ್ಲಿ ಕಾನೂನಿನ ತೊಡಕು ನಿವಾರಣೆ ಆಗಿದೆ.

ಈ ಹಿಂದೆ ಅಮೆರಿಕಾ ಸರ್ಕಾರ ನ್ಯಾಯಾಲಯದಲ್ಲಿ ಸರ್ಟಿಯೊರಾರಿ ರಿಟ್ ಅರ್ಜಿ ನಿರಾಕರಿಸಬೇಕು ಎಂದು ವಾದಿಸಿತ್ತು. ಅಮೇರಿಕಾ ಸಾಲಿಸಿಟರ್ ಜನರಲ್ ಎಲಿಜಬೆತ್ ಬಿ ಪ್ರಿಲೋಗರ್ ಅವರು ಡಿಸೆಂಬರ್ 16 ರಂದು ಸುಪ್ರೀಂ ಕೋರ್ಟ್‌ಗೆ ಸಲ್ಲಿಸಿದ ಫೈಲಿಂಗ್‌ನಲ್ಲಿ ಇದನ್ನು ಹೇಳಿ ಈ ಸಂದರ್ಭದಲ್ಲಿ ಭಾರತಕ್ಕೆ ಹಸ್ತಾಂತರದಿಂದ ಪರಿಹಾರ ಪಡೆಯಲು ರಾಣಾ ಅರ್ಹನಲ್ಲ ಎಂದು ಅವರು ಹೇಳಿದ್ದರು

ಒಂಬತ್ತನೇ ಸರ್ಕ್ಯೂಟ್‌ಗಾಗಿ ಅಮೆರಿಕಾದ ಮೇಲ್ಮನವಿ ನ್ಯಾಯಾಲಯದ ತೀರ್ಪನ್ನು ಪರಿಶೀಲಿಸಲು ಸರ್ಟಿಯೊರಾರಿ ಅವರ ಅರ್ಜಿಯಲ್ಲಿ, ರಾಣಾ ಅವರು ಇಲಿನಾಯ್ಸ್‌ನ ಉತ್ತರ ಜಿಲ್ಲೆಯ ಫೆಡರಲ್ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಗಾದರು ಮತ್ತು ಆರೋಪಕ್ಕೆ ಸಂಬಂಧಿಸಿದ ಆರೋಪದಲ್ಲಿ ಖುಲಾಸೆಗೊಂಡರು ಎಂದು ವಾದಿಸಿದ್ದರು

ಚಿಕಾಗೋ ಪ್ರಕರಣದಲ್ಲಿ ಒಂದೇ ರೀತಿಯ ನಡವಳಿಕೆಯನ್ನು ಆಧರಿಸಿದ ಆರೋಪದ ಮೇಲೆ ಭಾರತವು ಅವರನ್ನು ವಿಚಾರಣೆಗೆ ಹಸ್ತಾಂತರಿಸಲು ಪ್ರಯತ್ನಿಸುತ್ತಿದೆ" ಎಂದು ಅದು ಹೇಳಿದೆ.

"ಈ ಪ್ರಕರಣದಲ್ಲಿ ಪಿತೂರಿ ಆರೋಪಗಳನ್ನು ಒಳಗೊಂಡಿರುವ ತೀರ್ಪುಗಾರರ ತೀರ್ಪು ಸ್ಪಷ್ಟವಾಗಿಲ್ಲ ಮತ್ತು ಪಾರ್ಸ್ ಮಾಡಲು ಸ್ವಲ್ಪ ಕಷ್ಟಕರವಾಗಿತ್ತು ಎಂದರೆ ಭಾರತ ಆರೋಪಿಸಿದ ಎಲ್ಲಾ ನಿರ್ದಿಷ್ಟ ನಡವಳಿಕೆಯ ಮೇಲೆ ಅವರನ್ನು "ಶಿಕ್ಷೆ ಅಥವಾ ಖುಲಾಸೆಗೊಳಿಸಲಾಗಿದೆ" ಎಂದು ಹೇಳಲಾಗಿದೆ

2008 ರ ಮುಂಬೈ ಭಯೋತ್ಪಾದಕ ದಾಳಿಯಲ್ಲಿ ಆರು ಅಮೆರಿಕನ್ನರು ಸೇರಿದಂತೆ ಒಟ್ಟು 166 ಜನರು ಸಾವನ್ನಪ್ಪಿದರು, ಇದರಲ್ಲಿ 10 ಪಾಕಿಸ್ತಾನಿ ಭಯೋತ್ಪಾದಕರು 60 ಗಂಟೆಗಳಿಗೂ ಹೆಚ್ಚು ಕಾಲ ಮುತ್ತಿಗೆ ಹಾಕಿದರು, ಮುಂಬೈನ ಪ್ರಮುಖ ಮತ್ತು ಪ್ರಮುಖ ಸ್ಥಳಗಳಲ್ಲಿ ದಾಳಿ ಮಾಡಿದ ಪರಿಣಾಮ ನೂರಾರು ಮಂದಿ ಸಾವನ್ನಪ್ಪಿದ್ದರು.

## 942 ಸಿಬ್ಬಂದಿಗಳಿಗೆ ಪ್ರಶಸ್ತಿ

ಪದಕಗಳಲ್ಲಿ, 634 ಪೊಲೀಸ್ ಸೇವೆಗೆ, 37 ಅಗ್ನಿಶಾಮಕ ಸೇವೆಗೆ, 39 ಸಿವಿಲ್ ಡಿಫೆನ್ಸ್ ಗೃಹರಕ್ಷಕರಿಗೆ ಮತ್ತು 36 ತಿದ್ದುಪಡಿ ಸೇವೆಗೆ ನೀಡಲಾಗಿದೆ.

ಶೌರ್ಯ ಪ್ರಶಸ್ತಿಯ ರಾಜ್ಯವಾರು ಅಂಕಿಅಂಶಗಳನ್ನು ಗಮನಿಸಿದರೆ, ಈ ಪ್ರಶಸ್ತಿಯನ್ನು ಛತ್ತೀಸ್‌ಘಢದ 11, ಒಡಿಶಾದ 6, ಉತ್ತರ ಪ್ರದೇಶದ 17 ಮತ್ತು ಜಮು ಮತ್ತು ಕಾಶ್ಮೀರದ 15 ಪೊಲೀಸ್ ಸಿಬ್ಬಂದಿಗೆ ನೀಡಲಾಗಿದೆ. ಅಸ್ಸಾಂ ರೈಫಲ್ಸ್‌ನ ಒಬ್ಬ ಸೈನಿಕ, ಬಿಎಸ್‌ಎಫ್ 5, ಸಿಆರ್‌ಪಿಎಸ್‌ಎಫ್ 19 ಮತ್ತು ಎಸ್‌ಎಸ್ಬಿಯ 4 ಯೋಧರಿಗೆ ಶೌರ್ಯ ಪ್ರಶಸ್ತಿ ನೀಡಲಾಗಿದೆ. ಇದಲ್ಲದೆ ಉತ್ತರ ಪ್ರದೇಶದ ಅಗ್ನಿಶಾಮಕ ಇಲಾಖೆಯ 16 ಸಿಬ್ಬಂದಿ ಮತ್ತು ಜಮು ಮತ್ತು ಕಾಶ್ಮೀರದ ಒಬ್ಬ ಅಗ್ನಿಶಾಮಕ ದಳಕ್ಕೆ ಈ ಪ್ರಶಸ್ತಿಯನ್ನು ನೀಡಲಾಗಿದೆ. ಗಣ್ಯರ ಸೇವೆಯ ಅಡಿಯಲ್ಲಿ, ಅರುಣಾಚಲ ಪ್ರದೇಶ, ಅಸ್ಸಾಂ, ಛತ್ತೀಸ್‌ಘಢ, ಹರಿಯಾಣ, ಕೇರಳ, ಮಣಿಪುರ, ಮಿಜೋರಾಂ, ನಾಗಾಲ್ಯಾಂಡ್, ರಾಜಸ್ಥಾನ, ಸಿಕ್ಕಿಂ, ತ್ರಿಪುರಾ, ಪುದುಚೇರಿ, ಅಸ್ಸಾಂ ರೈಫಲ್ಸ್, ಎನ್‌ಎಸ್‌ಜಿ, ಪೊಲೀಸ್ ಸಂಶೋಧನೆ ಮತ್ತು ಅಭಿವೃದ್ಧಿ ಬ್ಯೂರೋ, ಎನ್‌ಡಿಆರ್‌ಫ್, ಎನ್‌ಸಿಆರ್‌ಬಿ, ಸಂಸದೀಯ ವ್ಯವಹಾರಗಳ ಸಚಿವಾಲಯ ಆರ್‌ಎಸ್ ಸಚಿವಾಲಯ, ರೈಲ್ವೆ ರಕ್ಷಣೆ, ಕರ್ನಾಟಕ, ಒಡಿಶಾ, ಮಧ್ಯಪ್ರದೇಶ (ತಿದ್ದುಪಡಿ ಸೇವೆ) ಮತ್ತು ಉತ್ತರಾಖಂಡಕ್ಕೆ ತಲಾ ಒಂದು ಪ್ರಶಸ್ತಿ ನೀಡಲಾಗಿದೆ.

ವಿಶಿಷ್ಟ ಸೇವೆಯ ಅಡಿಯಲ್ಲಿ, ಬಿಹಾರ, ಗುಜರಾತ್, ಕರ್ನಾಟಕ, ಒಡಿಶಾ, ಪಂಜಾಬ್, ತಮಿಳುನಾಡು, ತೆಲಂಗಾಣ, ಪಶ್ಚಿಮ ಬಂಗಾಳ, ಜಮು ಮತ್ತು ಕಾಶ್ಮೀರ, ಸಿಐಎಸ್‌ಎಫ್, ಎಸ್‌ಎಸ್‌ಬಿ, ಕೇರಳ (ಅಗ್ನಿಶಾಮಕ ಇಲಾಖೆ), ಒಡಿಶಾ–ಉತ್ತರ ಪ್ರದೇಶ (ಗೃಹರಕ್ಷಕ ದಳ)ಗೆ ತಲಾ ಎರಡು ಪ್ರಶಸ್ತಿಗಳನ್ನು ನೀಡಲಾಗಿದೆ. ವಿಶಿಷ್ಟ ಸೇವೆಯ ಅಡಿಯಲ್ಲಿ, ಬಿಹಾರ, ಗುಜರಾತ್, ಕರ್ನಾಟಕ, ಒಡಿಶಾ, ಪಂಜಾಬ್, ತಮಿಳುನಾಡು, ತೆಲಂಗಾಣ, ಪಶ್ಚಿಮ ಬಂಗಾಳ, ಜಮು ಮತ್ತು ಕಾಶ್ಮೀರ, ಎನ್‌ಡಿಆರ್‌ಫ್, ಎನ್‌ಸಿಆರ್‌ಬಿ ಕೇರಳ (ಅಗ್ನಿಶಾಮಕ ಇಲಾಖೆ), ಒಡಿಶಾ–ಉತ್ತರ ಪ್ರದೇಶ (ಗೃಹರಕ್ಷಕ ದಳ) ಗೆ ತಲಾ ಎರಡು ಪ್ರಶಸ್ತಿಗಳನ್ನು ನೀಡಲಾಗಿದೆ. ದೆಹಲಿ ಪೊಲೀಸ್ ಐಟಿಬಿಪಿ, ಉತ್ತರ ಪ್ರದೇಶ (ತಿದ್ದುಪಡಿ ಸೇವೆ) ತಲಾ 3, ಮಧ್ಯಪ್ರದೇಶ, ಮಹಾರಾಷ್ಟ್ರ ತಲಾ 4, ಉತ್ತರ ಪ್ರದೇಶ ಪೊಲೀಸ್ ಮತ್ತು ಬಿಎಸ್‌ಎಫ್ ತಲಾ 5, ಸಿಆರ್‌ಪಿಎಫ್–ಸಿಬಿಐ 6, ಐಬಿ 8 ಪ್ರಶಸ್ತಿಗಳನ್ನು ನೀಡಲಾಗಿದೆ.

## ಓರ್ವ ಆರೋಪಿ ಬಂಧನ

ಈ ಸಂಬಂಧ ಹೊನ್ನಾವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಸರ್ಕಾರ ಕೂಡ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಕಾರಣ ಪೊಲೀಸ್ ಇಲಾಖೆಯು ಈ ಬಗ್ಗೆ ತನಿಖೆಗೆ ವಿಶೇಷ ತನಿಖಾ ತಂಡ ರಚಿಸಿತ್ತು. ಪ್ರಕರಣದ ತನಿಖೆ ಚುರುಕುಗೊಳಿಸಿರುವ ಖಾಕಿ ಪಡೆ, ಓರ್ವ ಆರೋಪಿಯನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾಗಿದೆ.

ಗೋ ಹತ್ಯೆ ಕೃತ್ಯದಲ್ಲಿ ಸಹಕರಿಸಿದ ಮತ್ತು ತನ್ನ ಬೈಕ್ ಮೂಲಕ ಮಾಂಸ ಸಾಗಣೆಗೂ ಸಹಕರಿಸಿದ ಆರೋಪದ ಮೇಲೆ ಆರೋಪಿ ತೌಫಿಕ್ ಅಹಮ್ಮದ್‌ನನ್ನು ಬಂಧಿಸಲಾಗಿದ್ದು, ಇತರೆ ಆರೋಪಿಗಳ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ. ಬೆಂಗಳೂರಿನ ಚಾಮರಾಜಪೇಟೆಯ ವಿನಾಯಕ ನಗರದ ರಸ್ತೆ ಬದಿ ಶೆಡ್‌ನಲ್ಲಿ ಮಲಗಿದ್ದ ಮೂರು ಹಸುಗಳ ಕೆಚ್ಚಲು ಕೊಯ್ದ ಅಮಾನವೀಯ ಘಟನೆ ನಡೆದ ಬೆನ್ನಲ್ಲೇ ಹೊನ್ನಾವರದಲ್ಲಿ ಗೋ ವಧೆ ಪ್ರಕರಣ ಬೆಳಕಿಗೆ ಬಂದಿತ್ತು.

**ಪ್ರತ್ಯೇಕ ಪ್ರಕರಣದಲ್ಲಿ ಗೋ ಕಳ್ಳರ ಬಂಧನ :** ದನಗಳ ಕಳ್ಳತನ ಮಾಡಿದ್ದ ಆರೋಪದ ಮೇಲೆ ಮೂವರು ಆರೋಪಿತರನ್ನು ಹೊನ್ನಾವರ ಪೊಲೀಸರು ಬಂಧಿಸಿದ್ದಾರೆ. ಹೊನ್ನಾವರದ ಸಾಲ್ಕೋಡ್, ಕೊಂಡಾಕುಳಿ, ಹೊಸಾಕುಳಿ ಮತ್ತು ಕವಲಕ್ಕಿ ಭಾಗಗಳಲ್ಲಿ ದನಗಳ ಕಳ್ಳತನ ಸಂಬಂಧ ಹೊನ್ನಾವರ ಪೊಲೀಸ್ ಠಾಣೆಯಲ್ಲಿ 4 ಪ್ರಕರಣಗಳು ದಾಖಲಾಗಿದ್ದವು ಎಂದು ಪೊಲೀಸರು ತಿಳಿಸಿದ್ದಾರೆ.

## ಸರ್ಕಾರವೇ ನೇರ ಹೊಣೆ

ತಿಇಲಾಖೆ ವೈಫಲ್ಯಗೊಂಡಿರುವುದರ ಸಂಕೇತವಾಗಿದೆ. ಸ್ಥಳೀಯ ಸಹಕಾರಿ ಸಂಸ್ಥೆಗಳು ರೈತರಿಗೆ ಕಡಿಮೆ ಬಡ್ಡಿ ದರದಲ್ಲಿ ಹಣಕಾಸು ನೆರವು ನೀಡದೆ ಕೇವಲ ಪ್ರಭಾವಿಗಳ– ಸ್ಥಳೀಯ ಶಾಸಕರುಗಳ ಬಿಗಿ ಮುಷ್ಟಿಯಲ್ಲಿ ಸಿಲುಕಿಕೊಂಡಿವೆ. ಮತ್ತೊಂದು ಕಡೆ ಸರ್ಕಾರದಿಂದ ರೈತಾಪಿ ವರ್ಗಗಳಿಗೆ ಬೆಳೆ ನಷ್ಟ ಪರಿಹಾರಗಳಿಗೆ ಪರಿಣಾಮಕಾರಿಯಾದಂತಹ ಯೋಜನೆಗಳು ತಲುಪದೇ ಅನಿವಾರ್ಯವಾಗಿ ರೈತರು ಸಾಲಕ್ಕಾಗಿ ಇಂತಹ ಅಕ್ರಮ ಫೈನಾನ್ಸ್ ಕಂಪನಿಗಳ ಮೊರೆ ಹೋಗಿ ತಮ್ಮ ಜೀವಗಳನ್ನೇ ಬಲಿ ಕೊಡುವಂತಹ ವಾತಾವರಣ ಹಾಗೂ ಸಂದರ್ಭಗಳು ರಾಜ್ಯದಲ್ಲಿ ಸೃಷ್ಟಿಯಾಗಿದೆ. ರಾಜ್ಯದ ಪೊಲೀಸ್ ಇಲಾಖೆ ಹಾಗೂ ಕೇಂದ್ರದ ಜಾರಿ ನಿರ್ದೇಶನಾಲಯ ಕಣ್ಮುಚ್ಚಿ ಕುಳಿತಿರುವುದು ಬೇಸರದ ಸಂಗತಿಯಾಗಿದೆ. ಆರಂಭದಲ್ಲಿ ಈ ಕಂಪನಿಗಳ ವಿರುದ್ಧ ಕಠಿಣ ಕ್ರಮ ತೆಗೆದುಕೊಂಡಿದ್ದಲ್ಲಿ ಈಗಾಗಲೇ ಆತ್ಮಹತ್ಯೆಗೆ ಶರಣಾಗಿರುವ ನೂರಾರು ರೈತರ ಜೀವವನ್ನು ಉಳಿಸಬಹುದಾಗಿತ್ತು. ಆದರೆ ಹಲವು ತಿಂಗಳುಗಳಿಂದ ಸರ್ಕಾರ ಹಾಗೂ ವಿಪಕ್ಷಗಳು ಇಲ್ಲಸಲ್ಲದ ರಾಜಕೀಯ ಆರೋಪ ಪ್ರತ್ಯಾರೋಪಗಳಲ್ಲಿ ತೊಡಗಿಕೊಂಡು ಇಂದು ನೂರಾರು ರೈತರ ಆತ್ಮಹತ್ಯೆಗೆ ತಾವುಗಳೇ ನೇರ ಹೊಣೆ ಹೊರಬೇಕೆಂದು ಆಗ್ರಹಿಸಿದ್ದಾರೆ. ಈ ಕೂಡಲೇ ಕಾನೂನಿನ ಬಿಗಿ ಕುಣಿಕೆಯನ್ನು ಹಣಕಾಸು ಕಂಪನಿಗಳ ವಿರುದ್ಧ ಪ್ರಯೋಗಿಸಬೇಕು ಹಾಗೂ ಕೇಂದ್ರದ ಜಾರಿ ನಿರ್ದೇಶನಾಲಯಕ್ಕೆ ಕ್ರಮ ತೆಗೆದುಕೊಳ್ಳಲು ಶೀಘ್ರ ಶಿಫಾರಸ್ಸು ಮಾಡಿ ಮುಂಬರುವ ದಿನಗಳಲ್ಲಿ ರೈತರ ಆತ್ಮಹತ್ಯೆಗಳನ್ನು , ಶೋಷಣೆಗಳನ್ನು ತಪ್ಪಿಸಬೇಕೆಂದು ಮುಖ್ಯಮಂತ್ರಿ ಚಂದ್ರು ತಮ್ಮ ಪತ್ರದಲ್ಲಿ ಒತ್ತಾಯಿಸಿದ್ದಾರೆ.

## ಮಾ.22ಕ್ಕೆ ಮುಂದೂಡಿಕೆ

ಇದನ್ನು ದಾಖಲಿಸಿಕೊಂಡ ಪೀಠ ವಿಚಾರಣೆ ಮುಂದೂಡಿತು.

ಪ್ರಕರಣವೇನು ? ಮುಡಾ ಹಗರಣಕ್ಕೆ ಸಂಬಂಧಿಸಿದಂತೆ, ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ದೂರನ್ನು ಆಧರಿಸಿ ತನಿಖೆ ನಡೆಸಲು ರಾಜ್ಯಪಾಲರು, ಭ್ರಷ್ಟಾಚಾರ ನಿಯಂತ್ರಣ ಕಾಯ್ದೆ–1988ರ ಕಲಂ 17 ಎ ಅಡಿ ಅನುಮತಿ ನೀಡಿದ್ದರು. ಈ ಅನುಮತಿ ನೀಡಿದ್ದನ್ನು ಪ್ರಶ್ನಿಸಿ ಸಿದ್ದರಾಮಯ್ಯ ಅವರು ಹೈಕೋರ್ಟ್‌ನಲ್ಲಿ ರಿಟ್ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿ ವಜಾಗೊಳಿಸಿದ್ದ ಏಕ ಸದಸ್ಯ ಪೀಠ, ರಾಜ್ಯಪಾಲರ ಕ್ರಮ ಎತ್ತಿಹಿಡಿದಿತ್ತು. ಇದನ್ನು ಪ್ರಶ್ನಿಸಿ ಸಿದ್ದರಾಮಯ್ಯ ಮೇಲ್ಮನವಿ ಸಲ್ಲಿಸಿದ್ದರು.

# ಕನ್ನಡದಲ್ಲೇ ಎಲ್ಲೆಡೆ ವ್ಯವಹರಿಸಿ: ಎಚ್.ಕೆ.ಮೋಹನ್ ಬಾಬು

**ಮುಳಬಾಗಿಲು:** ಸಮಗ್ರ ಶಿಕ್ಷಣ ಕರ್ನಾಟಕ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಕೋಲಾರ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕ್ಷೇತ್ರ ಸಮನ್ವಯ ಅಧಿಕಾರಿಗಳ ಕಚೇರಿ ಮುಳಬಾಗಿಲು ಸಹಯೋಗದೊಂದಿಗೆ ಗಡಿನಾಡು ಶಾಲೆಗಳ ಕನ್ನಡ ಭಾಷಾ ಮೇಳಾ –2025 ಕಾರ್ಯಕ್ರಮವನ್ನು ಬೈರಕೂರು ಗ್ರಾಮದಲ್ಲಿ ಏರ್ಪಡಿಸಲಾಗಿತ್ತು.



ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಹೆಚ್ ಕೆ ಮೋಹನ್ ಬಾಬು ಮಾತನಾಡಿ, ಕನ್ನಡಿಗರು ತುಂಬಾ ಹೃದಯ ವೈಶಾಲ್ಯತೆಯನ್ನು ಹೊಂದಿರುವವರು ಆಗಿದ್ದಾರೆ. ಏಕೆಂದರೆ ಅನ್ಯ ರಾಜ್ಯಗಳ ಜನ ನಮ್ಮ ಬಳಿ ಮಾತನಾಡಲು ಬಂದಾಗ ನಾವು ನಮ್ಮ ಭಾಷೆಗಿಂತ ಅವರ ಭಾಷೆಗೆ ಹೆಚ್ಚಿನ ಮಾನ್ಯತೆಯನ್ನು ನೀಡುತ್ತೇವೆ ಹಾಗೂ ಅವರ ಭಾಷೆಯಲ್ಲಿ ಮಾತಾಡಲು ಪ್ರಯತ್ನ ಮಾಡುತ್ತೇವೆ. ನಾವು ಜೀವಿಸುತ್ತಿರುವ ನಮ್ಮ ನೆಲ ಜಲ ಇದರ ಬಗ್ಗೆ ಎಂದಿಗೂ ನಾವು ನಮ್ಮತನವನ್ನು ಉಳಿಸಿಕೊಳ್ಳಬೇಕು ಹಾಗೂ ಅನ್ಯ ಭಾಷೆಗಳನ್ನ ಪ್ರೀತಿಸೋಣ ಆದರೆ ನಮ್ಮ ಭಾಷೆಯನ್ನು ನಾವು ಮಾತನಾಡೋಣ ಅದುವೇ ನಮ್ಮ ಮಾತೃಭಾಷೆ. ಆದ್ದರಿಂದ ಪ್ರತಿಯೊಬ್ಬ ವ್ಯಕ್ತಿಯು ಕನ್ನಡಿಗರಾಗಿರುವ ನಾವು ಕನ್ನಡ ಭಾಷೆಯಲ್ಲಿ ಎಲ್ಲಾ ಕಡೆಯಲ್ಲೂ ವ್ಯವಹರಿಸಬೇಕು ಎಂದು ಹೇಳಿದರು.

ಕನ್ನಡ ದ್ರಾವಿಡ ಭಾಷಾ ಮೂಲದಿಂದ ಬಂದಿದ್ದು ತೆಲುಗು, ತಮಿಳು, ಮಲಯಾಳಂ ಭಾಷೆಗಳೊಂದಿಗೆ ನಾವು ವ್ಯವಹಾರಿಸಬೇಕಿದೆ ಆದರೆ ಕನ್ನಡ ಮಾತ್ರ ನಮ್ಮ ಹೃದಯ ಭಾಷೆ ಆಗಿರಲಿ ಎಂದರು.

ಗ್ರಾಮ ಪಂಚಾಯಿತಿ ಅಧ್ಯಕ್ಷರು ಹಾಗೂ ಪಿಎಲ್‌ಡಿ ಬ್ಯಾಂಕ್‌ನ ನೂತನ ನಿರ್ದೇಶಕರಾದ ಕಾಡೇನಹಳ್ಳಿ ಕೆ.ಎಸ್ ಅಶೋಕ್ ಮಾತನಾಡಿ, ಕನ್ನಡಿಗರು ಸ್ವಾಭಿಮಾನಿಗಳು ಏಕೆಂದರೆ ದಕ್ಷಿಣ ಭಾರತದಿಂದ ಉತ್ತರ ಭಾರತದ ವರೆಗೂ ಕನ್ನಡಿಗರು ಸ್ವಾಭಿಮಾನಿಗಳಾಗಿ ಬದುಕುತ್ತಿದ್ದಾರೆ ಅನ್ಯ ರಾಜ್ಯಗಳಿಂದ ಬರುವ ಎಲ್ಲರಿಗೂ ನಾವು ಇಲ್ಲಿ ಬದುಕಲು ಅವಕಾಶ ನೀಡುತ್ತಿದ್ದೇವೆ.ನಮ್ಮ ರಾಜ್ಯದಲ್ಲಿ ಇತರೇ ರಾಜ್ಯದಿಂದ ಬರುವ ಜನರಿಗೆ ಮುದುಕನ್ನು ಕಟ್ಟಿಕೊಳ್ಳಲು ನಾವು ಅವಕಾಶವನ್ನು ಕಲುಪಿಸುತಿದ್ದೇವೆ ಹಾಗೆಯೇ ಅವರಿಗೆ ಬೇಕಿರುವ ರೀತಿಯಲ್ಲಿ ಸಹಕಾರವನ್ನು ನೀಡುತ್ತಿದ್ದೇವೆ. ಆದರೆ ನಾವು ಬೇರೆಯವರನ್ನ ಅರಸಿ ಎಂದಿಗೂ ಹೋಗುವ ವ್ಯಕ್ತಿಗಳು ಅಲ್ಲ ಇದು ನಮ್ಮ ಕನ್ನಡಿಗರ ಸ್ವಾಭಿಮಾನ.

ಆದ್ದರಿಂದ ಕನ್ನಡ ಅಭಿಮಾನವೆಂದರೆ ಕೇವಲ ನವೆಂಬರ್ ಒಂದಕ್ಕೆ ಮಾತ್ರ ಸೀಮಿತವಾಗದೆ ವರ್ಷದ 365 ದಿನಗಳು ಕನ್ನಡವೇ ನಮ್ಮ ತನು ಮನ ಆಗಿರಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಎಲ್ಲಾ ಕನ್ನಡಪರ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ವಿದ್ಯಾರ್ಥಿಗಳು ಬೈರಕೂರು ಗ್ರಾಮದ ಪ್ರಮುಖ ಬೀದಿಗಳಲ್ಲಿ ಕನ್ನಡ ಪರವಾಗಿರುವ ಧ್ವನಿಗಳನ್ನು ಕೂಗುತ್ತಾ ಹೆಜ್ಜೆಗಳನ್ನು ಹಾಕುತ್ತಾ ಹಾಡು ನೃತ್ಯ ಪ್ರದರ್ಶನ ನೀಡಿದ್ದು ವಿಶೇಷವಾಗಿತ್ತು. ಹಾಗೆಯೇ ವಿದ್ಯಾರ್ಥಿಗಳು ನಾಡಿನ ಚರಿತ್ರೆಯನ್ನು ಸಾರುವ ವೇಷ ಭೂಷಣಗಳೊಂದಿಗೆ ಮೆರವಣಿಗೆಯನ್ನು ಮಾಡಿದರು.

ಈ ಸಂದರ್ಭದಲ್ಲಿ ಬೈರಕೂರು ನಾಡಕಚೇರಿ ಉಪ ತಹಸೀಲ್ದಾರ್ ರಾದ ವೆಂಕಟೇಶಯ್ಯ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಉಪಾಧ್ಯಕ್ಷರಾದ ಓಬಳ ರೆಡ್ಡಿ, ತಾಲೂಕು ಸಮನ್ವಯಾಧಿಕಾರಿಗಳು ಸೋಮೇಶ್, ತಾ. ಪ್ರಾ.ಶಾಲಾ.ಶಿ.ಸ ಅಧ್ಯಕ್ಷ ವೆಂಕಟಗಿರಿಯಪ್ಪ, ತಾ ಉ. ಭಾಸ್ಕರ್ ರೆಡ್ಡಿ, ಸೇವಾದಳ ಅಧ್ಯಕ್ಷರು ವೆಂಕಟಸ್ವಾಮಿ, ಗ್ರಾಪಂ ಸದಸ್ಯರು ಸುರೇಂದ್ರ ನಾಯ್ಡು, ಸುಮಲತಾ ಸುಬ್ರಹ್ಮಣ್ಯಂ, ಉದಯಕುಮಾರ್, ಬಾಬು, ಬೈರೆಕೂರು ಹಿರಿಯ ಪ್ರಾಥಮಿಕ ಶಾಲೆ ಎಸ್ ಡಿ ಎಂ ಸಿ ಅಧ್ಯಕ್ಷ ಕಾಡೇನಹಳ್ಳಿ ಇಂದ್ರನಗರ್ ಅಮರನಾಥ್, ಮುಖ್ಯೋಪಾಧ್ಯಾಯರು ನಾಗರಾಜ್, ಶಾಲೆಯ, ಸಿ ಆರ್ ಪಿ ಸಂಘದ ಅಧ್ಯಕ್ಷ ಕೃಷ್ಣಪ್ಪ, ಹೆಬ್ಬಣಿ ಸಿ ಆರ್ ಪಿ ಬ್ರಹ್ಮಾನಂದ ರೆಡ್ಡಿ, ಸದಸ್ಯರು ಬಾಬು,ಮಂಜುಳಾ,ಶಾಹಿನ, ಬೈರಕೂರು ಶಾಲೆಯ ಸಿ ಆರ್ ಪಿ ಗಳಾದ ವರದರಾಜು, ಅಂಬ್ಲಿಕಲ್ ಸಿಆರ್‌ಪಿ ಗಣೇಶ್, ಸರಳ. ರುದ್ರಪ್ಪ, ಮಂಜುನಾಥ್, ಶ್ರೀನಿವಾಸ್, ನಾಗವೇಣಿ, ಶಿವಕುಮಾರ್, ಕೋಡಹಳ್ಳಿ ಸುರೇಂದ್ರ, ಹೆಬ್ಬಣಿ ಆರ್. ಕೆ.ಹೆಚ್.ಎಸ್ ಪ್ರೌಢಶಾಲೆಯ ಪ್ರಭಾರಿ ಮುಖ್ಯ ಶಿಕ್ಷಕರಾದ ಗಂಗಾಧರ್, ಕೃಷ್ಣಪ್ಪ, ವೆಂಕಟೇಶ್ವರ ಬಾಲಕಿಯರ ಪ್ರೌಢಶಾಲೆಯ ಮುಖ್ಯ ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗ ಹಾಗೂ ಹೋಬಳಿಯ ಎಲ್ಲಾ ಶಾಲೆಗಳ ಶಿಕ್ಷಕರು ಮತ್ತು ಆಯ್ದ ವಿದ್ಯಾರ್ಥಿಗಳು ಮತ್ತು ಪೋಷಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ತಂಬಾಕು ಸೇವನೆಯಿಂದ ಯುವಕರು ದೂರ ಉಳಿಯಿರಿ



**ಶಿಡ್ಲಘಟ್ಟ:** ತಂಬಾಕು ಸೇವನೆಯಿಂದ ಆಗುವ ಮಾರಕ ಪರಿಣಾಮಗಳ ಬಗ್ಗೆ ಅರಿತು ಅದರಿಂದ ಯುವಕರು ದೂರ ಉಳಿಯಬೇಕು. ಇದೊಂದು ಮಾರಕ ದುಶ್ಚಟವಾಗಿ ಪರಿಣಮಿಸಿದ್ದು, ಇದನ್ನು ಅರಿಯದೇ ತಂಬಾಕಿನ ವಿವಿಧ ಉತ್ಪನ್ನಗಳಿಗೆ ಯುವಕರು ಬಲಿಯಾಗುತ್ತಿದ್ದಾರೆ ಎಂದು ತಾಲ್ಲೂಕು ಕಾನೂನು ಸೇವಾ ಸಮಿತಿ ಅಧ್ಯಕ್ಷ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಮಹಮ್ಮದ್ ರೋಷನ್ ಷಾ ತಿಳಿಸಿದರು.

ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ, ಪೊಲೀಸ್ ಇಲಾಖೆ, ತಂಬಾಕು ನಿಯಂತ್ರಣ ಘಟಕ, ಕಾನೂನು ಸೇವಾ ಸಮಿತಿ, ಆರೋಗ್ಯ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಗುಲಾಬಿ ಆಂದೋಲನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ತಂಬಾಕು ಮಾರಕವಾದ ವಸ್ತವಾಗಿದ್ದು ಇದನ್ನು 18 ವರ್ಷದೊಳಗಿನ ಮಕ್ಕಳಿಗೆ ನೀಡುವುದು ಕಾನೂನು ಬಾಹಿರ, ಅಲ್ಲದೇ ಶಾಲಾ ಸುತ್ತಮುತ್ತಲ ನೂರು ಮೀಟರ ಒಳಗಡೆ ಮಾರಾಟ ಮಾಡದಂತೆ ಸ್ಪಷ್ಟ ಆದೇಶವಿದೆ ಎಂದು ಹೇಳಿದರು.

ತಂಬಾಕು ಸೇವೆನೆ ಕ್ಯಾನ್ಸರ್ ಗೆ ಕಾರಣವಾಗುತ್ತಿರುವುದು ಗೊತ್ತಿದ್ದರೂ ಕೂಡಾ ಯುವ ಜನತೆ ಇದರ ಹಿಂದೆ ಬಿದ್ದು ತಮ್ಮ ಆರೋಗ್ಯ ಹಾಗೂ ಹಣವನ್ನು ಹಾಳು ಮಾಡಿಕೊಳ್ಳುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಸಾರ್ವಜನಿಕ ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿ ಡಾ.ಮನೋಹರ್ ಮಾತನಾಡಿ, ಕ್ಯಾನ್ಸರ್‌ಗೆ ತುತ್ತಾದ ವ್ಯಕ್ತಿ ತಾನು ಮಾತ್ರ ಸಾಯದೆ ಆತನ ಕುಟುಂಬವನ್ನು ಆರ್ಥಿಕವಾಗಿ ಜರ್ಜರಿತನ್ನಾಗಿಸಿ ಬೀದಿಗೆ ತಳ್ಳಿ ಅವರು ಬದುಕಿದ್ದರೂ ಶವಗಳಂತೆ ಬದುಕುವ ಪರಿಸ್ಥಿತಿಗೆ ತರುತ್ತದೆ ಹಾಗಾಗಿ ತಂಬಾಕು ಹಾಗೂ ಅದರ ಉತ್ಪನ್ನಗಳಿಂದ ದೂರ ಉಳಿದು, ಇತರರಿಗೂ ಅದರ ಬಗ್ಗೆ ತಿಳಿವಳಿಕೆ ಮೂಡಿಸಬೇಕು ಎಂದರು.

ಇಡೀ ಜಗತ್ತಿನಲ್ಲಿ ಅತಿ ಹೆಚ್ಚು ವೆಚ್ಚದಾಯಕ ಚಿಕಿತ್ಸೆಯೆಂದರೆ ಅದು ಕ್ಯಾನ್ಸರ್‌ನ ಚಿಕಿತ್ಸೆಯಾಗಿದೆ ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಪ್ರಧಾನ ಸಿವಿಲ್ ನ್ಯಾಯಾಧೀಶೆ ಜೆ.ಪೂಜಾ, ತಹಶೀಲ್ದಾರ್ ಬಿ.ಎನ್.ಸ್ವಾಮಿ, ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಎ.ನಾರಾಯಣಸ್ವಾಮಿ, ಕಾರ್ಯದರ್ಶಿ ಸಿ.ಜಿ.ಭಾಸ್ಕರ್, ಕ್ಷೇತ್ರ ಶಿಕ್ಷಣಾಧಿಕಾರಿ ನರೇಂದ್ರಕುಮಾರ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ವೆಂಕಟೇಶ್ ಮೂರ್ತಿ,ತಾಲ್ಲೂಕು ಆರೋಗ್ಯ ನಿರೀಕ್ಷಕರಾದ ದೇವರಾಜ್ ಮುಂತಾದವರು ಹಾಜರಿದ್ದರು.

# ಫೆ.28ರಿಂದ ಪುಸ್ತಕ ಮೇಳ ಲಾಂಛನ ವಿನ್ಯಾಸಕ್ಕೆ ಆಹ್ವಾನ

**ಚಾಮರಾಜನಗರ:** ಕರ್ನಾಟಕ ವಿಧಾನಸಭೆ ಸಚಿವಾಲಯದ ವತಿಯಿಂದ ಫೆಬ್ರವರಿ 28 ರಿಂದ ಮಾರ್ಚ್ 3ರವರೆಗೆ ಒಟ್ಟು ನಾಲ್ಕು ದಿನಗಳ ಕಾಲ ಪುಸ್ತಕ ಮೇಳವನ್ನು ಬೆಂಗಳೂರಿನ ವಿಧಾನಸೌಧದ ಆವರಣದಲ್ಲಿ ಆಯೋಜಿಸುತ್ತಿದ್ದು ಸದರಿ ಮೇಳಕ್ಕೆ ಸಂಬಂಧಿಸಿದ ಲಾಂಛನವನ್ನು ವಿನ್ಯಾಸಗೊಳಿಸಲು ಸಾರ್ವಜನಿಕರಿಗೆ ಮುಕ್ತ ಅವಕಾಶ ನೀಡಲಾಗಿದೆ.

ಆಯ್ಕೆಗೊಳ್ಳುವ ಲಾಂಛನದ ವಿನ್ಯಾಸಕರಿಗೆ ಗೌರವ ಪೂರ್ವಕವಾಗಿ ಬಹುಮಾನ ನೀಡಲಾಗುತ್ತದೆ. ಆಸಕ್ತರು ಕಾರ್ಯಕ್ರಮಕ್ಕೆ ಸರಿಹೊಂದುವ ಲಾಂಛನವನ್ನು ವಿನ್ಯಾಸಗೊಳಿಸಿ ತಮ್ಮ ಅಂಚೆ ವಿಳಾಸ ದೂರವಾಣಿ ಸಂಖ್ಯೆ, ಇನ್ನಿತರ ವಿವರಗಳೊಂದಿಗೆ ಕಾರ್ಯದರ್ಶಿಗಳ, ಕರ್ನಾಟಕ ವಿಧಾನಸಭೆ ಸಚಿವಾಲಯ, ಕೊಠಡಿ ಸಂಖ್ಯೆಯ 121, ಮೊದಲನೆ ಮಹಡಿ, ವಿಧಾನಸೌಧ, ಬೆಂಗಳೂರು–560001 ಇವರಿಗೆ ಫೆಬ್ರವರಿ 3ರೊಳಗೆ ಕಳುಹಿಸುವಂತೆ ಕರ್ನಾಟಕ ವಿಧಾನಸಭೆ ಸಚಿವಾಲಯದ ನಿರ್ದೇಶಕರಾದ ಬಿ.ಎಸ್. ಮಹಾಲಿಂಗೇಶ್ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಜ.26ರಂದು ಉಸ್ತುವಾರಿ ಸಚಿವರ ಜಿಲ್ಲಾ ಪ್ರವಾಸ

**ಚಾಮರಾಜನಗರ:** ಪಶುಸಂಗೋಪನೆ, ರೇಷ್ಮೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ನಾಳೆ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ಬೆಳಿಗ್ಗೆ 9 ಗಂಟೆಗೆ ನಗರದ ಡಾ. ಬಿ.ಆರ್ ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಆಯೋಜಿಸಿರುವ 76ನೇ ಗಣರಾಜ್ಯೋತ್ಸವ ದಿನಾಚರಣೆ ಪ್ರಯುಕ್ತ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ನೂತನ ಕೆ.ಡಿ.ಪಿ ಸಭಾಂಗಣದಲ್ಲಿ ಮಲೈಮಹದೇಶ್ವರ ಬೆಟ್ಟದಲ್ಲಿ ನಿಗದಿಯಾಗಿರುವ ಸಚಿವ ಸಂಪುಟ ಸಭೆ ಹಾಗೂ ಚಾಮರಾಜನಗರದಲ್ಲಿ ನಡೆಯಲಿರುವ ಫಲಾನುಭವಿಗಳ ಸಮಾವೇಶ ಕುರಿತು ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸುವರು. ಮಧ್ಯಾಹ್ನ 2 ಗಂಟೆಗೆ ಮೈಸೂರಿಗೆ ತೆರಳುವರು ಎಂದು ಪ್ರಕಟಣೆ ತಿಳಿಸಿದೆ.

# ನಾಳೆ ವಸತಿ ಸಚಿವರಿಂದ ಪತ್ರಕರ್ತರಿಗೆ ಹಕ್ಕುಪತ್ರ ವಿತರಣೆ

**ಕೊಪ್ಪಳ:** ಕಾರ್ಯನಿರತ ಪತ್ರಕರ್ತರ ನಿವೇಶನದ ಬಹುದಿನದ ಕನಸನ್ನು ನಗರಸಭೆ ಈಡೇರಿಸಿದ್ದು ನಾಳೆ ಜನವರಿ 26 ರಂದು ಭಾನುವಾರ ಜಿಲ್ಲಾ ಪತ್ರಕರ್ತರಿಗೆ ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಅವರಿಂದ ನಿವೇಶನದ ಹಕ್ಕುಪತ್ರ ವಿತರಣೆ ಆಗಲಿದೆ.

ಮಧ್ಯಾಹ್ನ 12 ಗಂಟೆಗೆ ನಗರದ ಸಾಹಿತ್ಯ ಭವನದಲ್ಲಿ ನಗರ ಸಭೆಯಿಂದ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಕಾರ್ಯನಿರತ ಪತ್ರಕರ್ತರ ಕುಟುಂಬಗಳಿಗೆ ವಸತಿ ಸಚಿವ ಬಿ ಜೆಡ್ ಜಮೀರ್ ಅಹ್ಮದ್ ಖಾನ್ ಅವರು ಹಕ್ಕು ಪತ್ರ ವಿತರಣೆ ಮಾಡಲಿದ್ದಾರೆ.

ಜನವರಿ 26 ರ ಪೂರ್ವ ನಿಗದಿತ ಕಾರ್ಯಕ್ರಮಗಳ ಜೊತೆಗೆ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಚಿವ ಬಿ ಜೆಡ್ ಜಮೀರ್ ಅಹ್ಮದ್ ಖಾನ್ ಅವರು ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕ ರಾಘವೇಂದ್ರ ಹಿಟ್ನಾಳ್ ಅವರ ಕಾರ್ಯಕ್ರಮಗಳಲ್ಲಿಯೂ ಸಚಿವರು ಭಾಗವಹಿಸಲಿದ್ದಾರೆ.

# ಜ.28ರಂದು ವಿವಿಧ ಹುದ್ದೆಗಳಿಗೆ ನೇರ ಸಂದರ್ಶನ

ಚಾಮರಾಜನಗರ: ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಎಸ್.ಬಿ.ಐ ಲೈಫ್ ಇನ್ಸೂರೆನ್ಸ್ ಮತ್ತು ಸ್ವತಂತ್ರ ಮೈಕ್ರೋ ಫೈನಾನ್ಸ್ ಕಂಪನಿಗೆ ವಿವಿಧ ಹುದ್ದೆಗಳ ನೇಮಕಾತಿಗಾಗಿ ಜನವರಿ 28ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3.30 ಗಂಟೆಯವರೆಗೆ ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನ ನಡೆಸಲಾಗುತ್ತದೆ.

ಚಾಮರಾಜನಗರದ ಎಸ್.ಬಿ.ಐ ಲೈಫ್ ಇನ್ಸೂರೆನ್ಸ್ ಕಂಪನಿಯಲ್ಲಿ ಯುನಿಟ್ ಮ್ಯಾನೇಜರ್ 10 ಹುದ್ದೆಗಳಿದ್ದು, ಯಾವುದೇ ಪದವಿ ಅಥವಾ ಸ್ನಾತಕೋತ್ತರ ಪದವಿ ಅಭ್ಯರ್ಥಿಗಳು ಭಾಗವಹಿಸಬಹುದು. ಫಿನಾನ್ಸಿಯಲ್ ಅಡ್ವೈಸರ್ 10 ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಐ.ಟಿ.ಐ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಭಾಗವಹಿಸಬಹುದು.

ಚಾಮರಾಜನಗರದ ಸ್ವತಂತ್ರ ಮೈಕ್ರೋ ಫೈನಾನ್ಸ್ ಸಂಸ್ಥೆಯ ಫೀಲ್ಡ್ ಆಫಿಸರ್ 25 ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ. ಐ.ಟಿ.ಐ, ಪಿ.ಯು.ಸಿ ಮತ್ತು ಯಾವುದೇ ಪದವಿ ಹೊಂದಿರುವ ಅಭ್ಯರ್ಥಿಗಳು ಭಾಗವಹಿಸಬಹುದು.

ಹೆಚ್ಚಿನ ಮಾಹಿತಿಗಾಗಿ ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಜಿಲ್ಲಾ ಉದ್ಯೋಗಾಧಿಕಾರಿ ಅಥವಾ ದೂ. ಸಂಖ್ಯೆ 08226–224430 ಸಂಪರ್ಕಿಸಿ ಮಾಹಿತಿ ಪಡೆಯುವಂತೆ ಪ್ರಕಟಣೆ ತಿಳಿಸಿದೆ.

# ಜಯಮಂಗಲ ಗ್ರಾಪಂ ಅಧ್ಯಕ್ಷರಾಗಿ ವೆಂಕಟಲಕ್ಷ್ಮಮ್ಮ ಅವಿರೋಧವಾಗಿ ಆಯ್ಕೆ



**ಮಾಲೂರು:**ತಾಲ್ಲೂಕಿನ ಜಯಮಂಗಲ ಗ್ರಾಮ ಪಂಚಾಯತಿ ನೂತನ ಅಧ್ಯಕ್ಷೆಯಾಗಿ ವೆಂಕಟಲಕ್ಷ್ಮಮ್ಮ ಅವರು ಅವಿರೋಧವಾಗಿ ಆಯ್ಕೆಯಾದರು.

ಜಯಮಂಗಲ ಗ್ರಾ.ಪಂ.ಅಧ್ಯಕ್ಷೆಯಾಗಿದ್ದ ವಸಂತ ಅವರು ಅಧ್ಯಕ್ಷೆ ಸ್ಥಾನಕ್ಕೆ ರಾಜೀನಾಮೆ ನೀಡಿದ ಹಿನ್ನಲೆಯಲ್ಲಿ ಚುನಾವಣೆ ನಡೆದು ಯಾರು ನಾಮಪತ್ರ ಸಲ್ಲಿದೇ ವೆಂಕಟಲಕ್ಷ್ಮಮ್ಮ ಅವರು ಒಬ್ಬರೇ ನಾಮ ಪತ್ರ ಸಲ್ಲಿಸಿದ್ದು, ವೆಂಕಟಲಕ್ಷ್ಮಮ್ಮ ಅವರು ಅಧ್ಯಕ್ಷೆಯಾಗಿ ಅವಿರೋಧವಾಗಿ ಅಯ್ಕೆ ಯಾಗಿರುವುದಾಗಿ ಚುನಾವಣಾಧಿಕಾರಿ ಬೈರರೈಡ್ಡಿ ಘೋಷಣೆ ಮಾಡಿದರು.

ನೂತನ ಅಧ್ಯಕ್ಷೆ ವೆಂಕಟಲಕ್ಷ್ಮಮ್ಮ ಮಾತನಾಡಿ, ಗ್ರಾ.ಪಂ.ಅಧ್ಯಕ್ಷೆಯಾಗಿ ಪಕ್ಷಾತೀತವಾಗಿ, ಎಲ್ಲಾ ಸದಸ್ಯರು, ಮುಖಂಡರು ಆಯ್ಕೆ ಮಾಡಿದ್ದಾರೆ. ಅವರ ಮಾರ್ಗದರ್ಶನದಲ್ಲಿ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಿಗೆ ಕುಡಿಯುವ ನೀರು, ಚರಂಡಿ ಸ್ವಚ್ಚತೆ, ವಿದ್ಯುತ್ ದೀಪ ಅಳವಡಿಕೆ ಸೇರಿದಂತೆ ಸಮರ್ಪಕವಾಗಿ ಮೂಲಭೂತ ಸೌಕರ್ಯಗಳ ಕಲ್ಪಿಸಲು ಮುಂದಾಗುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಗ್ರಾ.ಪಂ. ಮುರಳಿಕೃಷ್ಣ, ಮಾಜಿ ಅಧ್ಯಕ್ಷೆ ವಸಂತಮ್ಮ, ಸದಸ್ಯರಾದ ಟಿ.ವಿ.ಶ್ರೀನಿವಾಸ್, ಸವಿತರಾಜಪ್ಪ, ಸೋಮಶೇಖರ್, ಮಂಜುನಾಥ್, ಪಿಡಿಒ ಅಮರೇಶ್ ಬಾಬು, ಬಿಲ್ ಕಲೆಕ್ಟರ್ ರಾಜಪ್ಪ, ನವೀನ್ ,ವಸಂತ್, ಮುಖಂಡ ಗುರುಮೂರ್ತಿ, ನಾಗರಾಜ್ ಸೇರಿದಂತೆ ಹಲವಾರು ಮುಖಂಡರು ಹಾಜರಿದ್ದರು.

# ಕಾಮಗಾರಿ ವೆಚ್ಚ ನಾನೇ ಭರಿಸುವೆ

**ಶಿಡ್ಲಘಟ್ಟ:** ಶ್ರೀಭೂನೀಳಾ ವೆಂಕಟರಮಣಸ್ವಾಮಿ ದೇವಾಲಯದ ಮುಂಭಾಗದಿಂದ ಬೆಟ್ಟದ ಮೇಲೆ ನೆಲೆಸಿರುವ ಶ್ರೀಲಕ್ಷ್ಮೀವೆಂಕಟರಮಣಸ್ವಾಮಿ ದೇವಾಲಯದವರೆಗೂ ರಸ್ತೆ ಅಭಿವೃದ್ಧಿ ಕಾಮಗಾರಿಯ ಸಂಪೂರ್ಣ ವೆಚ್ಚವನ್ನು ತಾನೊಬ್ಬನೇ ಭರಿಸುತ್ತಿರುವೆ ಎಂದು ಎಸ್. ಎನ್.ಕ್ರಿಯಾ ಟ್ರಸ್ಟ್ ನ ಅದ್ಯಕ್ಷ ಹಾಗು ಕಾಂಗ್ರೆಸ್ ಮುಖಂಡರಾದ ಆಂಜಿನಪ್ಪ (ಪುಟ್ಟು) ತಿಳಿಸಿದರು.

ತಾಲ್ಲೂಕಿನ ತಲಕಾಯಲಬೆಟ್ಟದ ಪುರಾಣ ಪ್ರಸಿದ್ಧ ಶ್ರೀ ಭೂನೀಳಾ ವೆಂಕಟರಮಣಸ್ವಾಮಿ ದೇವಾಲಯದ ಬೆಟ್ಟಕ್ಕೆ ನಿರ್ಮಿಸಲಾಗುತ್ತಿರುವ ರಸ್ತೆ ಅಭಿವೃದ್ಧಿ ಈಗಾಗಲೇ ಶೇ.75ರಷ್ಟು ಕಾಮಗಾರಿ ಮುಗಿದಿದ್ದು, ಬಾಕಿ ಕಾಮಗಾರಿಯನ್ನು ಸಹ ಮುಂದಿನ ತಿಂಗಳು ದೇವಾಲಯದ ಜಾತ್ರಾ ಮಹೋತ್ಸವದ ವೇಳೆಗೆ ಸಂಪೂರ್ಣವಾಗಿ ಕೆಲಸ ಮಾಡಿಸಿಕೊಡುತ್ತೇನೆ ಎಂದು ಹೇಳಿದರು.

ಬೆಟ್ಟದ ಮೇಲೆ ನೆಲೆಸಿರುವ ಶ್ರೀಲಕ್ಷ್ಮೀ ವೆಂಕಟರಮಣಸ್ವಾಮಿ ದೇವರ ದರ್ಶನಕ್ಕೆ ಮೆಟ್ಟಿಲಿನ ವ್ಯವಸ್ಥೆ ಮೂಲಕ ಭಕ್ತಾದಿಗಳು ನಡೆದುಕೊಂಡು ಪೂಜೆಗೆ ತೆರಳುತ್ತಿದ್ದರು,ವಯಸ್ಸಾದ ಹಿರಿಯರು ಮೇಲೆ ಹೋಗಿ ದೇವರ ದರ್ಶನ ಪಡೆಯಬೇಕಾದರೆ ನಡೆದುಕೊಂಡು ಹೋಗಲು ಆಗುವುದಿಲ್ಲ, ಆದ್ದರಿಂದ ದೇವಾಲಯದ ಭಕ್ತಾದಿಗಳ ಸಂಕಲ್ಪದಿಂದ ರಸ್ತೆ ಅಭಿವೃದ್ಧಿ ನಿರ್ಮಾಣ ನಡೆಯುತ್ತಿದೆ.

ಬೆಟ್ಟಕ್ಕೆ ರಸ್ತೆ ನಿರ್ಮಿಸಲು ಕಳೆದ 23 ದಿನಗಳಿಂದ ಕಾಮಗಾರಿ ನಡೆಯುತ್ತಿದೆ ಅದರ ಭಾಗವಾಗಿ ಆ ಭಗವಂತನ ವಿಷಯದಲ್ಲಿ ನಮ್ಮದು ಸಹಾ ಅಳಿಲು ಸೇವೆ ಇರಲೆಂದು ರಸ್ತೆ ಮಾಡಲು ಸಹಾಯ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಈ ಪುಣ್ಯ ಕ್ಷೇತ್ರವು ಪ್ರವಾಸಿ ಸ್ಥಳವಾಗಿ ಮಾರ್ಪಾಡಾಗಿ ಇನ್ನಷ್ಟು ಅಭಿವೃದ್ಧಿ ಕಾಣಲಿ ಎಂಬುದು ನನ್ನ ಆಶಯ ಎಂದರು.

# ಆಧಿಪರಾಶಕ್ತಿ ಸಿದ್ಧರ ಪೀಠ 2 ಸಾವಿರ ವರ್ಷಗಳ ಇತಿಹಾಸವಿದೆ

**ಶಿಡ್ಲಘಟ್ಟ:** ತಮಿಳುನಾಡಿನ ಮೇಲ್ಮರುವತ್ತೂರಿನ ಅಧಿಪರಾಶಕ್ತಿ ಸಿದ್ಧರ ಪೀಠವು ಸುಮಾರು 2 ಸಾವಿರ ವರ್ಷಗಳ ಇತಿಹಾಸ ಹೊಂದಿದ್ದು, 21 ಸಿದ್ಧ ಪುರುಷರು ಮತ್ತು ಮಹಿಳೆಯರು ಜೀವಂತ ಸಮಾಧಿಯಾಗಿದ್ದರು ಎನ್ನುವ ನಂಬಿಕೆ ಇದೆ ಎಂದು ಶಾಸಕರಾದ ಬಿ.ಎನ್. ರವಿಕುಮಾರ್ ಅವರು ಸ್ಥಳ ಮಹಿಮೆಯ ಬಗ್ಗೆ ವಿವರಿಸಿದರು.



ತಾಲ್ಲೂಕಿನ ಅಪ್ಪೇಗೌಡನಹಳ್ಳಿ ಗೇಟ್ ಬಳಿಯ ಶ್ರೀಬಯಲಾಂಜನೇಯಸ್ವಾಮಿ ದೇವಾಲಯದ ಬಳಿ ತಮಿಳುನಾಡಿನ ಮೇಲ್ಮರುವತ್ತೂರಿನ ಪುಣ್ಯಕ್ಷೇತ್ರ ಅಧಿಪರಾಶಕ್ತಿ ಓಂ ಶಕ್ತಿ ಅಮ್ಮನವರ ದೇವಾಲಯಕ್ಕೆ ಮಾಲೆ ಧರಿಸಿದ 500 ಕ್ಕೂ ಹೆಚ್ಚು ಮಹಿಳೆಯರ ಯಾತ್ರೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಶಬರಿಮಲೆ ದೇವಸ್ಥಾನಕ್ಕೆ ಮಾಲೆ ಧರಿಸುವ ಪದ್ಧತಿಯಂತೆ ಈ ದೇವಾಲಯಕ್ಕೂ ಭಕ್ತರು ಮಾಲೆ ಧರಿಸುತ್ತಾರೆ, ಇಂತಹ ಆಧ್ಯಾತ್ಮಿಕ ಸ್ಥಳಕ್ಕೆ ನಮ್ಮ ಕ್ಷೇತ್ರದ ನೂರಾರು ಮಹಿಳೆಯರು ಶ್ರದ್ಧೆಯಿಂದ ವ್ರತ ಕೈಗೊಂಡು ಹೋಗುತ್ತಿರುವುದು ಇಷ್ಟಾರ್ಥ ಸಿದ್ದಿಗೆ ಸಾಕ್ಷಿ, ಮಾತೆಯರು ತಮ್ಮ ಕುಟುಂಬದ ಜತೆಗೆ ನಾಡಿನಲ್ಲಿ ಸಮೃದ್ಧ ಮಳೆ, ಬೆಳೆ, ಮತ್ತು ಜನಜೀವನದ ಸುಖಕ್ಕಾಗಿ ದೇವರ ಅನುಗ್ರಹ ಕೋರಬೇಕು ಎಂದು ತಿಳಿಸಿದರು.

ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಅಪ್ಪೇಗೌಡನಹಳ್ಳಿ ಕೆ. ಲಕ್ಷ್ಮೀನಾರಾಯಣರೆಡ್ಡಿ ಮಾತನಾಡಿ, ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಶ್ರದ್ಧಾಭಕ್ತಿಯಿಂದ ಮೇಲ್ಮರುವತ್ತೂರಿನ ಆದಿ ಪರಾಶಕ್ತಿ ತಾಯಿಯ ಆಶೀರ್ವಾದ ಪಡೆಯಲು ಭಾಗವಹಿಸುತ್ತಿರುವುದು ಮುಂದಿನ ಪೀಳಿಗೆಯವರಿಗೂ ಮಾದರಿಯಾಗಿದೆ, ಮಹಿಳೆಯರ ಭಕ್ತಿ ಮತ್ತು ಶ್ರದ್ಧೆ ನಮ್ಮ ಊರಿನ ಮತ್ತು ನಾಡಿನ ಕಲ್ಯಾಣಕ್ಕೆ ಮಾರ್ಗದರ್ಶಕವಾಗಲಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಬಂಕ್ ಮುನಿಯಪ್ಪ,ಮುಖಂಡರಾದ ಎ.ಎಂ.ತ್ಯಾಗರಾಜ್, ಭೈರಾರೆಡ್ಡಿ, ಮುನಿರೆಡ್ಡಿ,ಮುನೀಂದ್ರ, ಪ್ರಸನ್ನ,, ಸುದೀಪ್, ದ್ಯಾವಪ್ಪ ಇನ್ನಿತರರು ಪಾಲ್ಗೊಂಡಿದ್ದರು.

# 76ನೇ ಗಣರಾಜ್ಯೋತ್ಸವ ಕಾರ್ಯಕ್ರಮ ನಾಳೆ

**ಚಾಮರಾಜನಗರ:** ಜಿಲ್ಲಾಡಳಿತದ ವತಿಯಿಂದ 76ನೇ ಗಣರಾಜ್ಯೋತ್ಸವ ಕಾರ್ಯಕ್ರಮವನ್ನು ಜನವರಿ 26ರಂದು ಬೆಳಿಗ್ಗೆ 9 ಗಂಟೆಗೆ ನಗರದ ಡಾ. ಬಿ.ಆರ್ ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ವೆಂಕಟೇಶ್ ಅವರು ಧ್ವಜಾರೋಹಣ ನೆರವೇರಿಸುವರು. ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ.ಪುಟ್ಟರಂಗಶೆಟ್ಟಿ ಅವರು ಅಧ್ಯಕ್ಷತೆ ವಹಿಸುವರು. ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಶಾಸಕರಾದ ಎ.ಆರ್.ಕೃಷ್ಣಮೂರ್ತಿ, ಹೆಚ್.ಎಂ.ಗಣೇಶ್ ಪ್ರಸಾದ್, ಎಂ.ಆರ್.ಮಂಜುನಾಥ, ಡಾ.ಡಿ.ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು ಜಿ.ಮಾದೇಗೌಡ, ಕೆ. ವಿವೇಕಾನಂದ, ಕಾವೇರಿ ಜಲಾನಯನ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಮರಿಸ್ವಾಮಿ, ನಗರಸಭೆ ಅಧ್ಯಕ್ಷರಾದ ಎಸ್. ಸುರೇಶ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ವಿ. ಚಂದ್ರು, ಚಾಮರಾಜನಗರ–ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮದ್ ಅಸ್ಗರ್, ನಗರಸಭೆ ಉಪಾಧ್ಯಕ್ಷರಾದ ಮಮತ, ಸದಸ್ಯರಾದ ಚಂದ್ರಶೇಖರ್ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

# ಹರವೆಯಲ್ಲಿ ನಡೆದ ಕಾನೂನು ಅರಿವು ಕಾರ್ಯಕ್ರಮ

**ಚಾಮರಾಜನಗರ:** ಬಾಲಕಾರ್ಮಿಕ ಪದ್ಧತಿ ಸಮಾಜಕ್ಕೆ ಮಾರಕವಾಗಿದ್ದು ಇದನ್ನು ಸಂಪೂರ್ಣವಾಗಿ ಹೋಗಲಾಡಿಸಲು ಎಲ್ಲರ ಸಹಕಾರ ಅತ್ಯಗತ್ಯ ಎಂದು ಜಿಲ್ಲಾ ವಕೀಲರ ಸಂಘದ ನಿಕಟ ಪೂರ್ವ ಅಧ್ಯಕ್ಷರಾದ ಉಮ್ಮತ್ತೂರು ಇಂದುಶೇಖರ್ ಅವರು ಹೇಳಿದರು.

ತಾಲ್ಲೂಕಿನ ಹರವೆ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಕಾರ್ಮಿಕ ಇಲಾಖೆ, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಆಸರೆ ಚಾರಿಟಬಲ್ ಟ್ರಸ್ಟ್ ಸಹಯೋಗದಲ್ಲಿ ನಡೆದ ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಮಕ್ಕಳು ದೇಶದ ಸಂಪತ್ತಾಗಿದ್ದು ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯಲ್ಲಿ ದೈಹಿಕ ಹಾಗೂ ಮಾನಸಿಕವಾಗಿ ಬೆಳೆಯಬೇಕು. ಪ್ರಬುದ್ಧರಾಗದ ಮಕ್ಕಳ ದೈಹಿಕ ದುಡಿಮೆಯಿಂದ ಅವರ ಜೀವನದ ಮೇಲೂ ತೀವ್ರತರ ಪರಿಣಾಮ ಬೀರಲಿದೆ. ಈ ಹಿನ್ನಲೆಯಲ್ಲಿ ಮಕ್ಕಳನ್ನು 18ನೇ ವಯಸ್ಸಿನವರೆಗೆ ಯಾವುದೇ ದುಡಿಮೆಗೆ ದೂಡದೆ ಶಿಕ್ಷಣ ಕೊಡಿಸುವ ಕೆಲಸವನ್ನು ಮಾಡಬೇಕಾಗಿದೆ ಎಂದರು.

ಬಾಲಕಾರ್ಮಿಕರನ್ನು ದುಡಿಸಿಕೊಳ್ಳಲು ನೇಮಕ ಮಾಡಿಕೊಳ್ಳುವುದು ಅಪರಾಧವಾಗಿದೆ. ಇತ್ತೀಚಿನ ದಿನಗಳಲ್ಲಿ ಪ್ರಕರಣಗಳು ಕಡಿಮೆಯಾಗಿದ್ದರೂ ಸಹ ಅಲ್ಲಲ್ಲಿ ಕಂಡು ಬರುತ್ತಿವೆ. ಇಂತಹ ಪ್ರಕರಣಗಳು ಕಂಡು ಬಂದರೆ ದೂರು ನೀಡಬೇಕು ಎಂದು ಇಂದುಶೇಖರ್ ಅವರು ತಿಳಿಸಿದರು.

ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕ ಎಂ. ಮಹೇಶ್ ಮಾತಾನಾಡಿ ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆ ಮಾಡುವ ಉದ್ದೇಶದಿಂದ ಜಿಲ್ಲೆಯಾದ್ಯಂತ ಜಾಗೃತಿ ಕಾರ್ಯಕ್ರಮಗಳನ್ನು ವ್ಯಾಪಕವಾಗಿ ಆಯೋಜಿಸಲಾಗುತ್ತಿದೆ. ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗಾಗಿ ಸರ್ಕಾರವು ಸಾಕಷ್ಟು ಯೋಜನೆಗಳನ್ನು ಜಾರಿಗೊಳಿಸಿದೆ ಎಂದರು.

ಆಸರೆ ಟ್ರಸ್ಟ್ ಕಾರ್ಯದರ್ಶಿ ಟಿ.ಜೆ. ಸುರೇಶ್ ಮಾತನಾಡಿ ಮಕ್ಕಳನ್ನು ಬಾಲ ಕಾರ್ಮಿಕ ಪದ್ಧತಿಗೆ ದೂಡುತ್ತಿರುವ ಮಾಹಿತಿ ತಿಳಿದ ಕೂಡಲೇ ಸಾರ್ವಜನಿಕರು ಸಂಬಂಧಪಟ್ಟ ಇಲಾಖೆಯವರ ಗಮನಕ್ಕೆ ತಂದು ಮಕ್ಕಳನ್ನು ಮುಕ್ತಗೊಳಿಸಿ ಮುಖ್ಯವಾಹಿನಿಗೆ ತರುವಲ್ಲಿ ಶ್ರಮಿಸಬೇಕು ಎಂದು ತಿಳಿಸಿದರು.

ಶಾಲೆಯ ಪ್ರಭಾರ ಪ್ರಾಂಶುಪಾಲರಾದ ಎಸ್. ದೀಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತಾನಾಡಿದರು.

ಹಿರಿಯ ಕಾರ್ಮಿಕ ನಿರೀಕ್ಷಕರಾದ ವಿ.ಎಲ್. ಪ್ರಸಾದ್, ವಕೀಲರಾದ ಮಲ್ಲು, ಶಿಕ್ಷಕರಾದ ಕೆ.ಎನ್. ರಾಜೇಶ್, ಹರೀಶ್ ಕುಮಾರ್ ವಿ, ನಾಮದೇವಗುರುವ, ಸಿ.ಎಂ.ಮಹದೇವಸ್ವಾಮಿ, ಎಂ. ಜ್ಯೋತಿ, ಟಿ. ಶಶಿಕುಮಾರ್, ಎಸ್.ಅಂಬಿಕಾ, ಮಹೇಶ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಜಿಲ್ಲಾಡಳಿತದಿಂದ ಸಿದ್ಧರಾಮೇಶ್ವರ ಜಯಂತಿ ಆಚರಣೆ

# ವಚನಗಳ ಮೂಲಕ ನೀಡಿದ ವಿಚಾರಗಳು ಸಾರ್ವಕಾಲಿಕ



**ಚಿಕ್ಕಬಳ್ಳಾಪುರ:** 12ನೇ ಶತಮಾನದಲ್ಲಿದ್ದ ಅನಿಷ್ಟ ಪದ್ಧತಿಗಳ ವಿರುದ್ಧ ಹೋರಾಡಿದ ವಚನಕಾರರಲ್ಲಿ ಶಿವಯೋಗಿ ಸಿದ್ಧರಾಮೇಶ್ವರರು ಪ್ರಮುಖರು. ಅವರು ವಚನಗಳ ಮೂಲಕ ನೀಡಿದ ವಿಚಾರಗಳು ಸಾರ್ವಕಾಲಿಕವಾಗಿವೆ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅವರು ತಿಳಿಸಿದರು.

ನಗರದ ಒಕ್ಕಲಿಗರ ಕಲ್ಯಾಣ ಮಂಟಪದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ "ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ"ಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಪ್ರತಿಯೊಬ್ಬರೂ ಅವರ ಆದರ್ಶಗಳನ್ನು ಜೀವನದಲ್ಲಿ ಪಾಲಿಸಬೇಕು 12ನೇ ಶತಮಾನದ ಬಸವಣ್ಣ, ಅಲ್ಲಮಪ್ರಭು, ಹಡಪದ ಹಪ್ಪಣ್ಣ ಸೇರಿದಂತೆ ಅನೇಕ ವಚನಕಾರರು ಸಮಾಜದ ಸುಧಾರಣೆಗೆ ಶ್ರಮಿಸಿದರು. ಸಿದ್ದರಾಮೇಶ್ವರರು ಉತ್ತಮ ಸಾಹಿತಿಯಾಗಿದ್ದರು. ಅವರು ರಚಿಸಿರುವ ಎಲ್ಲ ವಚನಗಳ ಬಗ್ಗೆ ಎಲ್ಲರೂ ತಿಳಿದುಕೊಳ್ಳಬೇಕು ಎಂದರು. ನಗರಸಭೆ ಅಧ್ಯಕ್ಷ ಗಜೇಂದ್ರ ಅವರು ಮಾತನಾಡಿ ಸಮಾಜದ ಎಲ್ಲಾ ವರ್ಗದವರು ಸಿದ್ದರಾಮೇಶ್ವರರ ವಚನಗಳನ್ನು ಹಾಗೂ ಜೀವನವನ್ನು ಅಧ್ಯಯನ ಮಾಡುವ ಮೂಲಕ ಅವರ ವಚನಗಳಿಂದ ಪ್ರೇರಣೆಯನ್ನು ಪಡೆಯಬೇಕು. ನಮ್ಮ ಜೀವನದಲ್ಲಿ ಅವರ ಆದರ್ಶಗಳನ್ನು ಅನುಸರಿಸಿದರೆ ನಮಗೆ ಹಾಗೂ ಸಮಾಜಕ್ಕೂ ಒಳಿತು ಆಗಲಿದೆ. ಇವರ ಆದರ್ಶಗಳು ಇಂದಿನ,ಮುಂದಿನ ಯುವಪೀಳಿಗೆಗಳಿಗೆ ಮಾದರಿಯಾಗಬೇಕು" ಎಂದು ಹೇಳಿದರು. ಕಾರ್ಯಕ್ರಮಕ್ಕೂ ಮುನ್ನ ಜಯಂತ್ಯುತ್ಸವದ ಪ್ರಯುಕ್ತ ಶಿವಯೋಗಿ ಸಿದ್ದರಾಮೇಶ್ವರ ಬೃಹತ್ ಭಾವಚಿತ್ರದ ಮೆರವಣಿಗೆಯು ಪಲ್ಲಕ್ಕಿಗಳು ಹಾಗೂ ಜಾನಪದ ಕಲಾ ತಂಡಗಳೊಂದಿಗೆ ಡಾ.ಬಿ.ಆರ್.ಅಂಬೇಡ್ಕರ್ ಭವನದ ಮುಂಭಾಗದಿಂದ ಒಕ್ಕಲಿಗರ ಕಲ್ಯಾಣ ಮಂಟಪದವರೆಗೆ ಸಾಗಿತು. ಮೆರವಣಿಗೆಯಲ್ಲಿ ಡೊಳ್ಳು ಕುಣಿತ, , ವೀರಗಾಸೆ ಸೇರಿದಂತೆ ಜಾನಪದ ಕಲಾತಂಡಗಳು ಭಾಗವಹಿಸಿದ್ದವು.

ಕಾರ್ಯಕ್ರಮದಲ್ಲಿ ಸಮುದಾಯದ ವಿದ್ಯಾರ್ಥಿಗಳಿಗೆ ಸನ್ಮಾನ ಮಾಡಲಾಯಿತು. ಈ ಸಂದರ್ಭದಲ್ಲಿ ನಗರ ಸಭೆ ಉಪಾಧ್ಯಕ್ಷ ನಾಗರಾಜು, ಉಪವಿಭಾಗಾಧಿಕಾರಿ ಡಿ.ಹೆಚ್. ಅಶ್ವಿನ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಅತಿಕ್ ಪಾಷಾ,ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಡಿ.ಎಂ ರವಿಕುಮಾರ್, ತಹಶೀಲ್ದಾರ್ ಅನಿಲ್, ಸಮುದಾಯದ ಮುಖಂಡರಾದ ನಾರಾಯಣಸ್ವಾಮಿ, ಕೆ.ವಿ ವಿಜಯ್ ಕುಮಾರ್, ವೈ.ಶಂಕರ್, ಗುರ್ರಪ್ಪ, ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

### ಶಾಸಕ ಸಂಸದರ ಗೈರು

ಸಿದ್ಧರಾಮೇಶ್ವರ ಜಯಂತಿಗೆ ಶಾಸಕ, ಸಚಿವ, ಸಂಸದರೇ ಮೊದಲಾಗಿ ಯಾವೊಬ್ಬ ಜನಪ್ರತಿನಿಧಿಯೂ ಬಾರದ ಹಿನ್ನೆಲೆಯಲ್ಲಿ ಭೋವಿ ಸಮಾಜದ ಮುಖಂಡರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಘಟನೆ ನಗರದ ಒಕ್ಕಲಿಗರ ಕಲ್ಯಾಣ ಮಂಟಪದಲ್ಲಿ ನಡೆಯಿತು.

ಜಿಲ್ಲಾಡಳಿತದ ವತಿಯಿಂದ ಗುರುವಾರ ಏರ್ಪಡಿಸಿದ್ದ ಸಿದ್ಧರಾಮೇಶ್ವರ ಜಯಂತಿಯ ವೇದಿಕೆ ಕಾರ್ಯಕ್ರಮದ ನಂತರ ಮಾಧ್ಯಮದೊಂದಿಗೆ ಮಾತನಾಡಿದ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ಎಂ.ವಿ.ಕೃಷ್ಣಪ್ಪ ಪಕ್ಷಾತೀತವಾಗಿ ಜನಪ್ರತಿನಿಧಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲಾಡಳಿತ ಮತ್ತು ಭೋವಿ ಸಮುದಾಯದ ಸಹಯೋಗದಲ್ಲಿ ನಡೆದ ಸಿದ್ಧರಾಮೇಶ್ವರರ ಜಯಂತಿ ಅತ್ಯಂತ ವೈಭವಯುತವಾಗಿ ನಡೆದಿದೆ.ಮುತ್ತೆ ದೆಯರ 200 ಪೂರ್ಣಕುಂಭ ಮತ್ತು ಹತ್ತಾರು ಪಲ್ಲಕ್ಕಿಗಳೊಂದಿಗೆ, ಜಾನಪದ ಕಲಾತಂಡಗಳ ಪ್ರದರ್ಶನ ಸಹಿತ ಅಂಬೇಡ್ಕರ್ ಭವನದಿಂದ ಒಕ್ಕಲಿಗರ ಕಲ್ಯಾಣ ಮಂಟಪದವರೆಗೆ ಮೆರವಣಿಗೆಯಲ್ಲಿ ಸಾಗಿ ಬಂದ ನಂತರ ಒಕ್ಕಲಿಗರ ಕಲ್ಯಾಣ ಮಂಟಪದಲ್ಲಿ ವೇದಿಕೆ ಕಾರ್ಯಕ್ರಮ ಅತ್ಯಂತ ಯಶಸ್ವಿಯಾಗಿ ಕಾರ್ಯಕ್ರಮ ಮೂಡಿಬಂದಿದೆ. ಸಾವಿರಾರು ಮಂದಿಯ ಸಾಕ್ಷಿಯಲಿ ನಡೆದ ಸಿದ್ಧರಾಮೇಶ್ವರರ ಜಯಂತಿಗೆ ಜನಪ್ರತಿನಿಧಿಗಳು ಗೈರು ಹಾಜರಾಗಿದ್ದಾರೆ. ಇವರ ಈನಡೆ ಸಮುದಾಯದ ಮೇಲೆ ಇವರಿಗಿರುವ ಪ್ರೀತಿ ಕಾಳಜಿಯನ್ನು ತೋರಿಸುತ್ತಿದೆ ಎಂದು ಕಿಡಿಕಾರಿದರು.

ಚಿಕ್ಕಬಳ್ಳಾಪುರ ತಾಲೂಕಿನಲ್ಲಿ 20 ಸಾವಿರ, ಪಾರ್ಲಿಮೆಂಟ್ ಕ್ಷೇತ್ರದಲ್ಲಿ 80 ಸಾವಿರದಷ್ಟು ಬೋವಿ ಸಮುದಾಯವಿದೆ.ಇಷ್ಟಿದ್ದರೂ ಸಣ್ಣ ಸಮುದಾಯ ಎಂದು ಉದಾಸೀನ ಮಾಡಿ ಬರದೇ ಇರುವುದು ತರವಲ್ಲ. ಏಕೆಂದರೆ ಜಯಂತಿಗೂ ಪೂರ್ವದಲ್ಲಿ ಶಾಸಕ, ಸಚಿವ, ಸಂಸದರಿಗೆ ಖುದ್ದಾಗಿ ಹೋಗಿ ಸಮುದಾಯದ ಮುಖಂಡರೆಲ್ಲಾ ಕಾರ್ಯಕ್ರಮಕ್ಕೆ ಬರುವಂತೆ ಆಹ್ವಾನ ಮಾಡಿದ್ದೇವೆ. ಬರುವುದಾಗಿ ಹೇಳಿ ಕೈಕೊಟ್ಟಿರುವುದು ತುಂಬಾ ಬೇಸರವನ್ನುಂಟು ಮಾಡಿದೆ.ಇದರ ಪರಿಣಾಮವನ್ನು ಮುಂದಿನ ದಿನಗಳಲ್ಲಿ ಕಾಣುತ್ತಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬೇಸರದಲ್ಲಿ ಹೇಳುವುದಾದರೆ ನಮ್ಮದು ಸಣ್ಣ ಜನಾಂಗ ಅಂತ ಅವರು ಬಂದಿಲ್ಲ. ಬೇರೆಲ್ಲಾ ಸಮುದಾಯದ ಜಯಂತಿಗಳಿಗೆ ಮೊದಲೇ ಬಂದು ಕೂರುವ ಜನಪ್ರತಿನಿಧಿಗಳು ಸಿದ್ಧರಾಮೇಶ್ವರರ ಜಯಂತಿಗೆ ಬರದೇ ಅಂತರ ಕಾಪಾಡಿಕೊಂಡಿರುವುದು ನೋವಿನ ಸಂಗತಿ.ಇದರ ಮುಂದಿನ ದಿನಗಳಲ್ಲಿ ಸಮುದಾಯದ ಮುಖಂಡರೆಲ್ಲಾ ಒಂದೆಡೆ ಕೂತುಕೊಂಡು ಚರ್ಚಿಸಿ ಒಳ್ಳೆಯ ತೀರ್ಮಾನ ಮಾಡುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ಸಮುದಾಯದ ಮುಖಂಡರು ಹಾಜರಿದ್ದರು.

# ಕರ್ನಾಟಕ ರಾಜ್ಯ ಮೀಸಲು ಪೋಲಿಸ್‌ನ 12ನೇ ಪಡೆ ರಾಜ್ಯದಲ್ಲಿಯೇ ಮುಂಚೂಣಿಯಲ್ಲಿದೆ



**ಕೊರಟಗೆರೆ:** ಕರ್ನಾಟಕ ರಾಜ್ಯ ಮೀಸಲು ಪೋಲಿಸ್‌ನ 12ನೇ ಪಡೆ ರಾಜ್ಯದಲ್ಲಿಯೇ ದೈಹಿಕ ಆರೋಗ್ಯದಲ್ಲಿ ಮುಂಚೂಣಿಯಲ್ಲಿದ್ದು ಅಭಿವೃದ್ಧಿ ಪತದತ್ತ ಸಾಗುತ್ತಿದೆ ಎಂದು ಪಡೆಯಕಮಾಂಡೆಂಟ್ ಹಂಜಾ ಹುಸೇನ್ ತಿಳಿಸಿದರು.

ಕೊರಟಗೆರೆ ತಾಲ್ಲೂಕಿನ ತುಂಬುಗಾನ ಹಳ್ಳಿಯ 12ನೇ ಕೆ.ಎಸ್.ಆರ್.ಪಿ.ಕವಾಯತು ಮೈದಾನದಲ್ಲಿ ಕರ್ನಾಟಕರಾಜ್ಯ ಪೋಲೀಸ್ ಇಲಾಖೆಯ 50ನೇ ವರ್ಷದ ಸುವರ್ಣ ಮಹೋತ್ಸವದ ಅಂಗವಾಗಿ ಪದಕ ಪ್ರದಾನ ಪದಕ ಕಾರ್ಯಕ್ರಮದ ಅದ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪೋಲೀಸ್ ಇಲಾಖೆ ಸಮಾಜದಲಿ ತಮ್ಮದೇ ಆದಗೌರವವನ್ನು ಪಡೆದಿರುತ್ತದೆ.

ದೇಶದಲ್ಲಿ ಯೋಧರಿಗೆ ಮತ್ತು ಪೋಲೀಸರಿಗೆ ಪದಕಗಳನ್ನು ನೀಡಲಾಗುತ್ತದೆ, ನಮ್ಮ ಪಡೆಯಲ್ಲಿ ಡಾ.ಭಾಗೀರತಿ ಕನ್ನಡತಿ ಇವರಿಂದ ಆರೋಗ್ಯ ಶಿಕ್ಷಣವನ್ನು, ಯೋಗ ಶಿಕ್ಷಣವನ್ನು ನೀಡಿ ಪೋಲೀಸರಲ್ಲಿ ಮಾನಸಿಕ ಧೈರ್ಯವನ್ನು ತುಂಬಲಾಗಿದೆ. ನಮ್ಮ ಮೀಸಲು ಪಡೆಯ 2 ಕಂಪನಿಗಳ ಸುಮಾರು 180 ಪೋಲೀಸರು ಕರ್ನಾಟಕ ಸೇರಿದಂತೆ ತಮಿಳುನಾಡು, ಕೇರಳ, ತೆಲಂಗಾಣ, ಬಿಹಾರ, ಹರಿಯಾಣಗಳಲ್ಲಿ ಚುನಾವಣೆ ಸಂದರ್ಭದಲ್ಲಿ ಸೇವೆ ಸಲ್ಲಿಸಿವೆ ಸಮಾಜದ ಶಾಂತಿ ಸುವ್ಯವಸ್ಥೆಗೆ ಪೋಲೀಸರ ಸೇವೆ ಸಾಕಷ್ಟು ಇದೆಎಂದರು.

ರಾಜ್ಯ ವಾಣಿಜ್ಯ ತೆರಿಗೆ ಇಲಾಖೆಯ ಉಪಆಯುಕ್ತ ಮಹಮ್ಮದ್‌ರಫೀಕ್‌ಪಾಷ ಮಾತನಾಡಿ, ಕೆ.ಎಸ್.ಆರ್.ಪಿ ಪಡೆ ಸಮಸ್ತ ಕರ್ನಾಟಕದ ಶಾಂತಿಗೆ, ರಾಷ್ಟ್ರೀಯ ಭಾವೈಕ್ಯತೆಗೆ ಭದ್ರ ಬುನಾದಿಯನ್ನು ಹಾಕುತ್ತಿದೆ ಪೋಲೀಸ್ ಇಲಾಖೆಯ ಕೆಲಸ ಬಹಳ ಶ್ರೇಷ್ಟವಾದ ಕೆಲಸವಾಗಿದ್ದು ತ್ಯಾಗ ಮತ್ತು ಬಲಿದಾನದ ಪ್ರತೀಕಗಳಲ್ಲಿ ಸೇರಿಕೊಂಡಿದೆ ಹಾಗಾಗಿ ಪೋಲೀಸ್‌ಇ ಲಾಖೆಯ ಹುದ್ದೆಯನ್ನು ಆರಿಸಿಕೊಂಡಿರುವ ತಮ್ಮೆಲ್ಲರಿಗೂ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

ತುಮಕೂರು ಜಿಲ್ಲಾ ಹೆಚ್ಚುವರಿ ಪೋಲೀಸ್ ವರಿಷ್ಠಾಧಿಕಾರಿ ಅಬ್ದುಲ್‌ಖಾದರ್ ಮಾತನಾಡಿ ಪೋಲೀಸ್ ಇಲಾಖೆಯಲ್ಲಿ ಒತ್ತಡ ಹೆಚ್ಚಾಗಿರುತ್ತದೆ, ನಮ್ಮಗಳ ಕರ್ತವ್ಯ ಸಂದರ್ಭದಲ್ಲಿ ಯಾವುದೇ ನಿಗದಿತ ಸಮಯ ಇರುವುದಿಲ್ಲ ಆದ್ದರಿಂದ ಪೋಲೀಸರು ತಮ್ಮ ಒತ್ತಡಗಳನ್ನು ಕಡಿಮೆ ಮಾಡಿಕೊಳ್ಳಲು ಯೋಗದೊಂದಿಗೆ ಇತರ ಹವ್ಯಾಸಗಳಾದ ಓದು, ಬರಹ, ಕ್ರೀಡೆ, ದೇಹದಾಢ್ಯತೆ ಗಟ್ಟಿಮಾಡಿಕೊಳ್ಳುವ ವ್ಯಾಯಾಮ, ಹಾಡು ಕಲಿಕೆ ಯಾವುದಾದರು ಒಂದನ್ನು ಕರ್ತವ್ಯ ನಂತರದ ಬಿಡುವಿನ ವೇಳೆಯಲ್ಲಿ ಮಾಡಿಕೊಂಡರೆ ಸಂಪೂರ್ಣ ಮಾನಸಿಕ ಸಮತೋಲನ ಹೊಂದಬಹುದು, ಪೋಲೀಸರು ಕುಟುಂಬದ ಕಡೆ ಗಮನ ಹರಿಸಿ ಮಕ್ಕಳನ್ನು ವಿದ್ಯಾವಂತರನ್ನಾಗಿಸುವ ಕಡೆಯೂ ಗಮನ ಹರಿಸಬೇಕುಎಂದರು.

ಈ ಸಂದರ್ಭದಲ್ಲಿ ಮೀಸಲು ಪಡೆಯ ಪಥ ಸಂಚಲನವನ್ನು ನಡೆಸಲಾಯಿತು ಹಾಗೂ ಹಲವು ಪೋಲೀಸರಿಗೆ ಪದಕಗಳನ್ನು ಪ್ರದಾನ ಮಾಡಿ, ಪ್ರಶಂಸನಾ ಪತ್ರಗಳನ್ನು ನೀಡಲಾಯಿತು, ಕಾರ್ಯಕ್ರಮದಲ್ಲಿ ಕೆ.ಎಸ್. ಆರ್.ಪಿ ಪಡೆಯ ಸಹಾಯಕ ಕಮಾಂಡೆಂಟ್ ಡಾ.ನವೀನ್‌ಕುಮಾರ್, ಡೆಪ್ಯೂಟ್ ಕಮಾಂಡೆಂಟ್ ನಿಸ್ಸಾರ್ ಅಹಮ್ಮದ್ ಸೇರಿದಂತೆ ಹಲವು ಅಧಿಕಾರಿಗಳು ಇತರರು ಭಾಗವಹಿಸಿದ್ದರು.

# ತಾಲೂಕು ಆದಿ ಕರ್ನಾಟಕ ಅಭಿವೃದ್ಧಿ ಸಂಘದಲ್ಲಿ 1.92 ಕೋಟಿ ರೂ ಅವ್ಯವಹಾರ



**ಚಾಮರಾಜನಗರ:** ತಾಲೂಕು ಆದಿ ಕರ್ನಾಟಕ ಅಭಿವೃದ್ಧಿ ಸಂಘದಲ್ಲಿ ಹಣಕಾಸು ವ್ಯವಹಾರಕ್ಕೆ ಸಂಬಂಧಿಸಿದಂತೆ ಅವ್ಯವಹಾರವಾಗಿರುವ ಬಗ್ಗೆ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಜಂಟಿ ನಿಬಂಧಕರಿಗೆ ವರದಿ ಸಲ್ಲಿಸಿದ್ದಾರೆ ಎಂದು ಮಾಜಿ ಜಿಲ್ಲಾ ಪಂಚಾಯಿತಿ ಉಪಾಧ್ಯಕ್ಷ ಹಾಗೂ ದಲಿತ ಮುಖಂಡ ಅಯ್ಯನಪುರ ಶಿವಕುಮಾರ್ ಹೇಳಿದರು.

ಚಾಮರಾಜನಗರದಲ್ಲಿ ಮಾತನಾಡಿದ ಅಯ್ಯನಪುರ ಶಿವಕುಮಾರ್, ಆದಿ ಕರ್ನಾಟಕ ಅಭಿವೃದ್ಧಿ ಸಂಘದಲ್ಲಿ ನಡೆದಿರುವ ಅವ್ಯವಹಾರದ ಬಗ್ಗೆ ಕಲಂ 25ರ ವಿಚಾರಣೆ ನಡೆಸ ಲಾಗಿತ್ತು. ಇದರ ಅನ್ವಯ ಈಗಾಗಲೇ ಸಹಾಯಕ ನಿಬಂಧಕರು ವರದಿ ಸಲ್ಲಿಸಿದ್ದು 1,92,56,026 ರೂ. ಅವ್ಯವಹಾರವಾಗಿರುವುದು ಕಂಡುಬಂದಿದ್ದು ಆಯಾ ಅವಧಿಯಲ್ಲಿ ಕಾರ್ಯನಿ

ರ್ವಹಿಸಿದ ಆಡಳಿತ ಮಂಡಳಿ ಅಧ್ಯಕ್ಷರು, ಖಜಾಂಚಿ, ಕಾರ್ಯ ದರ್ಶಿ ಹಾಗೂ ಆಡಳಿತ ಮಂ ಡಳಿ ಸದಸ್ಯರು ಜವಾಬ್ದಾರ ರಾಗಿರುತ್ತಾರೆ ಎಂದು ವರದಿಯಲ್ಲಿ ಉಲ್ಲೇಖಿಸಿದ್ದಾರೆ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಿಂದ 151 ತಿಂಗಳಿಗೆ 74.31 ಲಕ್ಷ ಬಾಡಿಗೆ ಬಂದಿದೆ. ಆದರೆ ಇದನ್ನು ಆಡಿಟ್ ವರದಿಯಲ್ಲಿ ಸೇರಿಸಿಲ್ಲ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 8.75 ಲಕ್ಷ ಬಾಡಿಗೆ ಬಂದಿದ್ದು ಇದನ್ನು ಆಡಿಟ್ನಲ್ಲಿ ಸೇರಿಸಿಲ್ಲ. ಸಮಾಜ ಕಲ್ಯಾಣ ಇಲಾಖೆಯಿಂದ ಹಾಸ್ಟೆಲ್ನಲ್ಲಿ ಮಕ್ಕಳಿದ್ದಾರೆ ಎಂದು 2008 ರಿಂದ 2017ರ ತನಕ 14.97 ಲಕ್ಷ ರೂ.ಗಳ ಅನುದಾನ ಪಡೆಯಲಾಗಿದೆ. ಇದನ್ನು ನಗದು ಪುಸ್ತಕದಲ್ಲಿ ಸೇರಿಸಿಲ್ಲ ಎಂದರು. ಸಂಘದಲ್ಲಿ ಗುರುತರವಾದ ಅವ್ಯವಹಾರಗಳು ಕಂಡುಬಂದಿದ್ದು ಸಂಘದ ಆಡಳಿತ ಮಂಡಳಿಯು ಸಂಘದ ಉದ್ದೇಶಗಳನ್ನು ಸಮರ್ಪಕವಾಗಿ ಈಡೇರಿಸುವಲ್ಲಿ ವಿಫಲವಾಗಿದ್ದು ಸಂಘದ ಹಾಗೂ ಸದಸ್ಯರ ಹಿತದೃಷ್ಟಿಯಿಂದ ಆಡಳಿತ ಮಂಡಳಿಯ ವಿರುದ್ಧ ನಿಯಮಾನುಸಾರ ಕ್ರಮಕೈಗೊಳ್ಳುವುದು ಹಾಗೂ ಸಂಘದಲ್ಲಿ ಹಣಕಾಸಿನ ವಿಷಯದಲ್ಲಿ ಅವ್ಯವಹಾರವಾಗಿರುವುದು ಕಂಡುಬಂದಿರುವುದರಿಂದ ನಿಯಮಾನುಸಾರ ಆಡಳಿತ ಮಂಡಳಿಯ ಸ್ಥಾನದಲ್ಲಿ ಅಧಿನಿಯಮದ ರೀತ್ಯಾ ಆಡಳಿತಾಧಿಕಾರಿಯನ್ನು ನೇಮಿಸುವುದು ಸೂಕ್ತವಾಗಿರುತ್ತದೆ ಎಂದು ವರದಿಯಲ್ಲಿ ಅಭಿಪ್ರಾಯಪಡಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಆರ್.ಮಹದೇವ್, ನಲ್ಲೂರು ಸೋಮೇಶ್ವರ್, ನಾಗಯ್ಯ, ಮಹದೇವಸ್ವಾಮಿ, ಚೆನ್ನಬಸವಯ್ಯ, ಚೆನ್ನಂಜಯ್ಯ, ಗೋವಿಂದರಾಜು ಇದ್ದರು.

# ಮನ್ಮುಲ್ ನಿರ್ದೇಶಕ ಸ್ಥಾನಕ್ಕೆ ನಾಮಪತ್ರ ಸಲ್ಲಿಕೆ



**ಕೆ.ಆರ್.ಪೇಟೆ:** ಮಂಡ್ಯ ಹಾಲು ಒಕ್ಕೂಟದ ಚುನಾವಣೆಯ ಅಂಗವಾಗಿ ಫೆ 2 ರಂದು ನಡೆಯಲಿರುವ ಆಡಳಿತ ಮಂಡಳಿಯ ನಿರ್ದೇಶಕ ಸ್ಥಾನಕ್ಕೆ ಇಂದು ಜೆಡಿಎಸ್ ಹಾಗೂ ಬಿಜೆಪಿ ಬಂಬಲಿತ ಅಭ್ಯರ್ಥಿಗಳಾದ ಶಾಸಕ ಹೆಚ್.ಟಿ. ಮಂಜು ಹಾಗೂ ಬೋರವೆಲ್ ಮಹೇಶ್ ಮಂಡ್ಯದ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಚುನಾವಣಾಧಿಕಾರಿ ಶಿವಾನಂದಮೂರ್ತಿಯವರಿಗೆ ತಮ್ಮ. ಉಮೇದುವಾರಿಕೆ ಸಲ್ಲಿಸಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ಮಂಜು ರಾಜಕಾರಣ ಮತದಾರರ ಆಶೋತ್ತರಗಳಿಗೆ ಅನುಗುಣವಾಗಿರಬೇಕೇ ವಿನಹ ಹೊಡೆದು, ಬಡಿದು, ಬೈದು ಆಕ್ರೋಶದ ನುಡಿಗಳನ್ನು ಆಡುವಂಥದ್ದಲ್ಲ. ನನ್ನ ಕ್ಷೇತ್ರದ ಜನತೆ ಅದನ್ನು ಇಷ್ಟಪಡುವುದೂ ಇಲ್ಲ. ಮತದಾರರನ್ನು ಪ್ರೀತಿಯಿಂದ, ಅವರ ಭಾವನೆಗಳನ್ನು ಅರ್ಥಮಾಡಿಕೊಂಡು ಮನವೊಲಿಸುವ ಪದ್ಧತಿ ನಮ್ಮದು. ಕ್ಷೇತ್ರದ ಜನತೆ ಹೊಡಿಬಡಿ ಸಂಸ್ಕೃತಿಯ ವ್ಯಕ್ತಿಗಳಿಗೆ ಈ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಲಿದ್ದಾರೆ. ಮತದಾರರಿಗೆ ಅವಾಚ್ಯ ಶಬ್ದಗಳನ್ನು ಬಳಸಿ ನಿಂದಿಸಿರುವುದು, ಕೊಲೆ ಬೆದರಕೆ ಹಾಕಿರುವುದರ ಬಗ್ಗೆ ಲಿಖಿತ ದೂರು ನೀಡಲಾಗಿದೆ. ಸರ್ಕಾರ ಕೂಡಲೇ ಈ ಬಗ್ಗೆ ತನಿಖೆ ನಡೆಸಬೇಕು. ಸರ್ಕಾರ ತನ್ನ ಅಧಿಕಾರಿಗಳನ್ನು ಬಳಸಿಕೊಂಡು ಸಹಕಾರ ಕ್ಷೇತ್ರವನ್ನು ಹತ್ತಿಕ್ಕುವ ಕೆಲಸ ಮಾಡುತ್ತಿದೆ. ಇದು ಹೀಗೆಯೇ ಮುಂದುವರಿದರೆ ಮತ್ತು ಸರ್ಕಾರಿ ಅಧಿಕಾರಿಗಳೇ ಸರ್ಕಾರದ ಅಣತಿಯಂತೆ ನಡೆದರೆ ಸಹಕಾರಿ ಕ್ಷೇತ್ರದ ಮತದಾರರೇ ಸರ್ಕಾರದ ವಿರುದ್ದ ಕಾನೂನನ್ನು ಕೈಗೆ ತೆಗೆದುಕೊಳ್ಳುವ ಕಾಲ ದೂರವಿಲ್ಲ.

ಜೆಡಿಎಸ್ ಮತ್ತು ಬಿಜೆಪಿ ಬೆಂಬಲಿತ ಎಂದು ಸುಳ್ಳುಹೇಳಿಕೊಂಡು ಮತದಾರರಿಗೆ ವಂಚಿಸುತ್ತಿರುವುದನ್ನು ಮತದಾರರು ಅರ್ಥಮಾಡಿಕೊಂಡಿದ್ದಾರೆ. ಜೆಡಿಎಸ್ ಎಂದು ಹೇಳಿಕೊಳ್ಳುವ ಈ ಇಬ್ಬರೂ ಈ ಅಗತ್ಯ ಬಿದ್ದಾಗಲೆಲ್ಲಾ ಜಿಲ್ಲಾ ಉಸ್ತುವಾರಿ ಸಚಿವರ ಬಾಗಿಲು ಬಡಿಯುವ ಹಾಗೂ ಮತದಾರರಿಗೆ ಫೋನ್ ಕರೆ ಮಾಡಿ ಇವರಿಗೆ ಮತ ಹಾಕುವಂತೆ ಧಮಕಿ ಹಾಕಿಸುವ ಇವರುಗಳು ಯಾವ ಕಾಂಗ್ರೆಸ್ ಪಕ್ಷದ ಏಜೆಂಟ್‌ಗಳಂತೆ ಕೆಲಸ ಮಾಡುತ್ತಿದ್ದಾರೆ ಎಂಬುದು ತಾಲ್ಲೂಕಿನ ಎಲ್ಲಾ ಜನತೆಗೆ ತಿಳಿದಿದೆ. ಆದ್ದರಿಂದ ಮತದಾರ ಬಂಧುಗಳು ತಾಲ್ಲೂಕಿನಲ್ಲಿ ನೆಮ್ಮದಿ, ಶಾಂತಿಯುತವಾಗಿ ಚುನಾವಣೆಗಳು ನಡೆಯಲು, ಜೆಡಿಎಸ್ ಹಾಗೂ ಬಿಜೆಪಿ ಬೆಂಬಲಿತ ಅಭ್ಯರ್ಥಿಗಳಾದ ನನಗೆ ಹಾಗೂ ಮಹೇಶ್ ರವರಿಗೆ ಮತ ನೀಡಿ ಗೆಲುವು ತಂದುಕೊಡಬೇಕು ಎಂದು ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ಮನ್ಮುಲ್ ಅಭ್ಯರ್ಥಿ ನಾಟನಹಳ್ಳಿಮಹೇಶ್. ರಾಜ್ಯ ಮಾರಾಟ ಮಹಾಮಂಡಳದ ನಿರ್ದೇಶಕ ಪುಟ್ಟಸ್ವಾಮಿಗೌಡ, ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಜಾನಕೀರಾಮು. ಎಪಿಎಂಸಿ ಮಾಜಿ ಅಧ್ಯಕ್ಷ ಐನೋರಹಳ್ಳಿಮಲ್ಲೇಶ್ ಸೇರಿದಂತೆ ನೂರಾರು ಜೆಡಿಎಸ್ ಕಾರ್ಯಕರ್ತರು ಹಾಜರಿದ್ದರು.

# ಪೌರ ಕಾರ್ಮಿಕರಿಗೆ ಸಮವಸ್ತ್ರ ಪೂರೈಕೆ



**ಕೆ.ಆರ್.ಪುರ:** ಜನ ಸೇವೆಯೇ ಜನಾರ್ಧನನ ಸೇವೆ ಎಂದು ಅರಿತಿದ್ದ ಮೃತ ಮಗ ದಿ. ಚಂದ್ರಶೇಖರ್ ಮನದಾಸೆಯಂತೆ ತಾಯಿ ಪ್ರೇಮಮ್ಮ ಸೇವಾ ಕಾರ್ಯಗಳನ್ನು ಮಾಡಲು ಪ್ರರಂಭಿಸಿದ್ದಾರೆ.

ಮಹದೇವಪುರ ಕ್ಷೇತ್ರದ ಕಾಡುಬಿಸನಹಳ್ಳಿ ಗ್ರಾಮದಲ್ಲಿ ಶಾಸಕ ಅರವಿಂದ ಲಿಂಬಾವಳಿ ಆತ್ಮೀಯರಾದ ದಿ. ಚಂದ್ರಶೇಖರ್ ರೆಡ್ಡಿ ಅವರ ಜನ್ಮದಿನ ಅಂಗವಾಗಿ ಪೌರ ಕಾರ್ಮಿಕರಿಗೆ ಸಮವಸ್ತ್ರ, ಸ್ಥಳೀಯರಿಗೆ ಅನ್ನದಾಸೋಹ, ಆಶ್ರಮಕ್ಕೆ ಅಗತ್ಯ ವಸ್ತುಗಳ ಪೂರೈಕೆ ಮಾಡಲಾಯಿತು.

ದಿ. ಚಂದ್ರಶೇಖರ್ ಅವರ ಕನಸಿನ ಕೂಸಾಗಿದ್ದ ಶ್ರೀ ಅಭಯ ಆಂಜನೇಯಸ್ವಾಮಿ ದೇವಸ್ಥಾನವನ್ನು 3 ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗುತ್ತಿದೆ ಎಂದು ತಿಳಿಸಿದರು.

ಇದೇವೇಳೆ ಪೌರಕಾರ್ಮಿಕರಿಗೆ ವಿಶೇಷ ಸಮವಸ್ತ್ರಗಳನ್ನು ನೀಡಿದರು, ಮಕ್ಕಳ ಆಶ್ರಮಕ್ಕೆ ಅಗತ್ಯ ವಸ್ತುಗಳ ಪುರೈಕೆ, ಸಾವಿರಾರು ಜನರಿಗೆ ಅನ್ನದಸೋಹ ಸಹ ಮಾಡಲಾಯಿತು. ಕಾರ್ಯಕ್ರಮದಲ್ಲಿ ಸ್ಥಳೀಯ ಮುಖಂಡರಾದ ಬಾಬುರೆಡ್ಡಿ, ಮುನಿಕೃಷ್ಣ, ಮಂಜು ನಾಥ್ ಗೌಡ, ಮೂರ್ತಿ, ಆಶ್ವತ್ ರೆಡ್ಡಿ, ಅಂಬರೀಶ್ ಗುಣ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ನೀರು ಕಾಯಿಸಲು ಇಟ್ಟಿದ್ದ ತೆಂಗಿನ ಮಟ್ಟೆಗೆ ಬೆಂಕಿ: ಮನೆ ಭಸ್ಮ

**ಚಾಮರಾಜನಗರ:** ಸ್ನಾನಕ್ಕೆಂದು ನೀರು ಕಾಯಿಸಲು ಹಚ್ಚಿದ್ದ ಬೆಂಕಿಯು ತೆಂಗಿನ ಮಟ್ಟೆ ರಾಶಿಗೆ ವ್ಯಾಪಿಸಿ ಮನೆಯೇ ಹೊತ್ತಿ ಉರಿದ ಘಟನೆ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಕೊಡಗಾಪುರದಲ್ಲಿ ಗುರುವಾರ ರಾತ್ರಿ ನಡೆದಿದೆ. ಗುಂಡ್ಲುಪೇಟೆ ತಾಲೂಕಿನ ಕೊಡಗಾಪುರ ಗ್ರಾಮದ ವಿನೋದ್ ಎಂಬು ವವರ ಮನೆಯಲ್ಲಿ ಘಟನೆ ಸಂಭವಿಸಿದೆ. ನೀರು ಕಾಯಿಸಲು ಬೆ0ಕಿ ಹ0ಚಿದ್ದ ವೇಳೆ ಹತ್ತಿರದಲ್ಲೇ ಇದ್ದ ತೆಂಗಿನಕಾಯಿ ಮಟ್ಟೆ ರಾಶಿಗೂ ಬೆ0ಕಿ ಹೊತ್ತಿಕೊ0ಡು ಬಳಿಕ ಮನೆಯೇ ಹೊತ್ತಿ ಉರಿದು ನಾಶವಾಗಿದೆ. ವಿಷಯ ತಿಳಿದ ಅಗ್ನಿಶಾಮಕ ಸಿಬ್ಬಂದಿ ಹಾಗೂ ಸ್ಥಳೀಯರು ಬೆಂಕಿ ನಂದಿಸಿ ಹೆಚ್ಚಿನ ಅನಾಹುತ ತಪ್ಪಿಸಿದ್ದಾರೆ. ಮನೆಯಲ್ಲಿದ್ದ ಸರಕುಗಳು ಬೆಂಕಿಗೆ ಸಂಪೂರ್ಣವಾಗಿ ಆಹುತಿಯಾಗಿದೆ. ಬೇಗೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಹೊಳವನಹಳ್ಳಿ: ನಿರ್ದೇಶಕರ ಅವಿರೋಧ ಆಯ್ಕೆ



**ಕೊರಟಗೆರೆ:** ಹೊಳವನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿರ್ದೇಶಕರ ಚುನಾವಣೆಯನ್ನ 12 ಜನ ನಿರ್ದೇಶಕರ ಆಯ್ಕೆಗಾಗಿ ಏರ್ಪಡಿಸಲಾಗಿದ್ದು ಆಯ್ಕೆ ಪ್ರಕ್ರಿಯೆಯಲ್ಲಿ ಎಲ್ಲಾ ಸ್ಥಾನಗಳನ್ನ ಗ್ರಾಮದ ಮುಖಂಡರ ಒಮ್ಮತದಿಂದ ಅವಿರೋಧಆಯ್ಕೆ ಮಾಡಲಾಯಿತು.

ಕೊರಟಗೆರೆತಾಲೂಕಿನ ಹೊಳವನಹಳ್ಳಿ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನೂತನ ನಿರ್ದೇಶಕರಾಗಿ ಸಾಮಾನ್ಯ ವರ್ಗದಿಂದ ರಂಗರಾಜು, ಶಿವಕುಮಾರ್, ಸುರೇಶ್, ಮನ್ಸೂರ್ ಪಾಷ, ಮಲ್ಲಿಕಾರ್ಜುನಯ್ಯ, ಆಯ್ಕೆಯಾದರೆ, ಮಹಿಳಾ ಮೀಸಲು ಕ್ಷೇತ್ರದಿಂದ ನರಸಮ್ಮ, ಲತಾ, ಹಿಂದುಳಿದ ಎ ಕ್ಷೇತ್ರದಿಂದರವಿಕುಮಾರ್, ಹಿಂದುಳಿದ ಬಿ.ಕ್ಷೇತ್ರದಿಂದ ಮರುಡಪ್ಪ, ಪರಿಶಿಷ್ಟ ವರ್ಗದಿಂದ ಕೇಶವಮೂರ್ತಿ, ಪರಿಶಿಷ್ಟ ಜಾತಿಯಿಂದ ಜಯರಾಮು ಹಾಗೂ ಸಾಲಗಾರರಲ್ಲದ ಸಾಮಾನ್ಯ ಕ್ಷೇತ್ರದಿಂದ ಸ್ವಾತಿ ಅವರನ್ನ ಹೊಳವನಹಳ್ಳಿ, ಕರಕಲಘಟ್ಟ ದುಗ್ಗೇನಹಳ್ಳಿ, ಶಾಂತಲಿಂಗಯ್ಯನಪಾಳ್ಯ, ಕ್ಯಾಮೇನಹಳ್ಳಿ ಗ್ರಾಮದ ಮುಖಂಡರ ಒಮ್ಮತದಿಂದ ಅವಿರೋಧ ಆಯ್ಕೆ ಮಾಡಲಾಯಿತು ಎಂದು ಚುನಾವಣಾಧಿಕಾರಿ ಗುರುರಾಜು ತಿಳಿಸಿದ್ದಾರೆ.

ತುಮಕೂರು ಡಿಸಿಸಿ ಬ್ಯಾಂಕ್ ನಿರ್ದೇಶಕಎಸ್. ಹನುಮಾನ್ ಮಾತನಾಡಿ ಗ್ರಾಮೀಣ ಭಾಗದ ರೈತರಿಗೆ ನೆರವು ನೀಡುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಭಿವೃದ್ಧಿಗಾಗಿ ಹೊಳವನಹಳ್ಳಿ ಸೇರಿದಂತೆಇದಕ್ಕೆ ಸಂಬಂಧಿಸಿದ ಗ್ರಾಮಗಳ ಮುಖಂಡರ ಸಹಕಾರದಿಂದ ಹಾಗೂ ಡಿಸಿಸಿ ಬ್ಯಾಂಕ್‌ಜಿಲ್ಲಾ ಅಧ್ಯಕ್ಷರಾದ ಕೆ.ಎನ್.ರಾಜಣ್ಣ ಅವರ ಆದೇಶದಂತೆಎಲ್ಲಾ ವರ್ಗದ ಕ್ಷೇತ್ರಗಳಿಗೆ ಅವಿರೋಧ ಮಾಡಿರುವುದು ಸಂತಸತಂದಿದೆ. ಮುಂದಿನ ದಿನಗಳಲ್ಲಿ ಸಂಘದಅಭಿವೃದ್ಧಿಗಾಗಿ ಸದಾ ನಿಮ್ಮಜೊತೆ ಇರುತ್ತೇನೆ. ಎಲ್ಲಾ ನಿರ್ದೇಶಕರಿಗೆ ಅಭಿನಂದನೆಗಳು ಎಂದು ತಿಳಿಸಿದರು.

ಕೊರಟಗೆರೆ ಡಿಸಿಸಿ ಬ್ಯಾಂಕ್‌ಮೇಲ್ವಾಚರಕರಾದ ಬೋರಣ್ಣ ಮಾತನಾಡಿ ಒಂದು ಸಹಕಾರ ಸಂಘ ಅಭಿವೃದ್ಧಿಆಗಬೇಕಾದರೆ ಸ್ಥಳೀಯ ಮುಖಂಡರು ರೈತರು ವರ್ತಕರು, ಹಾಗೂ ಸಾರ್ವಜನಿಕರ ಸಹಕಾರ ಅಗತ್ಯವಾದುದ್ದು, ಡಿಸಿಸಿ ಬ್ಯಾಂಕ್ ಜಿಲ್ಲಾ ಅಧ್ಯಕ್ಷರಾದ ಕೆ.ಎನ್.ರಾಜಣ್ಣ ಅವರು ರೈತರಿಗಾಗಿ ಅನೇಕ ಯೋಜನೆಗಳನ್ನ ಜಾರಿಗೆತಂದಿದ್ದು, ಸಾಕಷ್ಟು ರೈತರಿಗೆ ಅನುಕೂಲ ಪಡೆದುಕೊಳ್ಳುತ್ತಿದ್ದಾರೆ ಎಂದು ಹೇಳಿದರು.

ಇದೆ ಸಂದರ್ಭದಲ್ಲಿ ಬ್ಲಾಕ್‌ಕಾಂಗ್ರೆಸ್ ಅಧ್ಯಕ್ಷ ಆಶ್ವಥ್ ನಾರಾಯಣ್, ಗ್ರಾಪಂ ಸದಸ್ಯ ಶಂಶಾದ್ ಅಲಿ, ರವಿಕುಮಾರ್, ಮುಖಂಡರಾದ ಮೋಹನ್, ರಂಗನಾಥ್, ಸುರೇಶ್, ಕೇಶವಮೂರ್ತಿ, ಜಯರಾಮು, ಮಲ್ಲಿಕಾರ್ಜುನಯ್ಯ, ನಾಸೀರ್, ಉಮೇಶ್, ಮನ್ಸೂರ್ ಪಾಷ, ಶಿವಣ್ಣ, ರಂಗರಾಜು, ಮರುಡಪ್ಪ, ಮೋಹನ್, ಜಯರಾಜ್, ಮಕ್ತಿಯಾರ್, ರವಿಕುಮಾರ್, ಸೇರಿದಂತೆ ಇತರರು ಇದ್ದರು.

# ಖಜಾಂಚಿ ಹುದ್ದೆ ಮಹಿಳೆಯರಿಗೆ ಮೀಸಲಿರಿಸಿ ಸುಪ್ರೀಂ ಆದೇಶ

ನವದೆಹಲಿ: ಬೆಂಗಳೂರಿನ ವಕೀಲರ ಸಂಘದ ಆಡಳಿತ ಮಂಡಳಿಯಲ್ಲಿನ ಖಜಾಂಚಿ ಹುದ್ದೆಯನ್ನು ಮಹಿಳಾ ವಕೀಲರಿಗೆ ಮೀಸಲಿಡುವಂತೆ ಸುಪ್ರೀಂ ಕೋರ್ಟ್ ಆದೇಶಿಸಿದೆ.

ಬೆಂಗಳೂರಿನ ವಕೀಲ ಸಂಘದ ಆಡಳಿತ ಮಂಡಳಿಯಲ್ಲಿ ಮಹಿಳಾ ವಕೀಲರಿಗೆ ಶೇ.33ರಷ್ಟು ಮೀಸಲಾತಿ ನೀಡುವಂತೆ ಕೋರಿ ಕರ್ನಾಟಕ ಮಹಿಳಾ ವಕೀಲರ ಒಕ್ಕೂಟ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಹಾಗೂ ಎನ್.ಕೋಟೀಶ್ವರ್ ಸಿಂಗ್ ಅವರಿದ್ದ ಪೀಠ ಈ ಆದೇಶ ನೀಡಿದೆ. ಸಂಘದ ಆಡಳಿತ ಮಂಡಳಿಯಲ್ಲಿ ವಕೀಲೆಯರ ಪ್ರಾತಿನಿಧ್ಯ ಇರುವಂತೆ ನೋಡಿಕೊಳ್ಳಬೇಕು ಎಂದೂ ಸುಪ್ರೀಂ ಹೇಳಿದೆ.

ಸಂವಿಧಾನದ 142ನೇ ವಿಧಿಯ ಅಡಿ ತನ್ನ ಅಧಿಕಾರವನ್ನು ಚಲಾಯಿಸಿದ ಪೀಠ, ಫೆಬ್ರವರಿ 2ರಂದು ಬೆಂಗಳೂರಿನ ವಕೀಲರ ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಿಗದಿಯಾಗಿದ್ದು, ಹಾಗೂ ನಾಮನಿರ್ದೇಶನ ಪ್ರಕ್ರಿಯೆ ಮುಗಿದಿರುವುದನ್ನು ಗಮನಿಸಿತು.



142ನೇ ವಿಧಿಯಡಿ ವಿವಿಧ ಚುನಾಯಿತ ವಕೀಲರ ಸಂಸ್ಥೆಗಳಲ್ಲಿ ಮಹಿಳಾ ಮೀಸಲಾತಿಯನ್ನು ಒದಗಿಸುವುದಕ್ಕೆ ಇದು ಸರಿಯಾದ ಸಮಯವಾಗಿದೆ. ಸಂವಿಧಾನದ 142 ನೇ ವಿಧಿಯ ಅಡಿ ನಮ್ಮ ಅಧಿಕಾರಗಳನ್ನು ಚಲಾಯಿಸುವುದು ಸೂಕ್ತ ಎಂದು ನಾವು ಭಾವಿಸುತ್ತೇವೆ ಎಂದು ಹೇಳಿದ ಪೀಠ, ಖಜಾಂಚಿ ಹುದ್ದೆಯನ್ನು ಮಹಿಳಾ ಅಭ್ಯರ್ಥಿಗಳಿಗೆ ಮಾತ್ರ ಮೀಸಲಿಡಬೇಕು ಎಂದು ಹೇಳಿದೆ. ಸಂಘದ ಮಹಿಳಾ ಅಭ್ಯರ್ಥಿಗೆ ಸ್ಥಾನಗಳನ್ನು ನಿಗದಿಪಡಿಸುವ ಜ್ಞಾಪಕ ಪತ್ರ ಮತ್ತು ಬೈ-ಲಾಗಳಲ್ಲಿ ಯಾವುದೇ ಸ್ಪಷ್ಟ ನಿಬಂಧನೆಗಳಿಲ್ಲ ಎನ್ನುವುದನ್ನು ಪೀಠ ಗಮನಿಸಿದೆ.

ನ್ಯಾಯಮೂರ್ತಿ ಕಾಂತ್ ನೇತೃತ್ವದ ಪೀಠ, ಚುನಾವಣೆಯ ಮೇಲ್ವಿಚಾರಣೆಗೆ ರಚಿಸಲಾದ ಉನ್ನತಾಧಿಕಾರ ಸಮಿತಿ ಹಾಗೂ ವಕೀಲರ ಸಂಘದ ಆಡಳಿತ ಮಂಡಳಿಗೆ ಚುನಾವಣೆ ನಡೆಸುವ ಮುಖ್ಯ ಚುನಾವಣಾ ಅಧಿಕಾರಿಗೆ, ನಾಮಪತ್ರಗಳನ್ನು ಆಹ್ವಾನಿಸುವ ದಿನಾಂಕವನ್ನು ವಿಸ್ತರಿಸುವಂತೆ ನಿರ್ದೇಶಿಸಿದೆ. ಮಾತ್ರವಲ್ಲದೇ ಸಾಧ್ಯ ಇದ್ದರೆ ಚುನಾವಣೆಯನ್ನೂ ಕೆಲವು ದಿನಗಳವರೆಗೆ ಮುಂದೂಡಬೇಕು ಎಂದು ಹೇಳಿದೆ.

ಇದೇ ವೇಳೆ, ವಕೀಲರ ಸಂಘದ ಆಡಳಿತ ಮಂಡಳಿಯಲ್ಲಿ ಯುವ ವಕೀಲರ ಹೆಚ್ಚಿನ ಭಾಗವಹಿಸುವಿಕೆಗೆ ಅವಕಾಶ ನೀಡಲು 10 ವರ್ಷಗಳ ಅನುಭವದ ಮಾನದಂಡವನ್ನು ಸಡಿಲಿಸುವಂತೆ ವಕೀಲರು ಪೀಠಕ್ಕೆ ಒತ್ತಾಯಿಸಿದರು. ಈ ವಾದವನ್ನು ಒಪ್ಪಿಕೊಂಡ ಪೀಠವು, ದೆಹಲಿ ಹೈಕೋರ್ಟ್ ಬಾರ್ ಅಸೋಸಿಯೇಷನ್ ಚುನಾವಣೆ ಪ್ರಕರಣದಲ್ಲಿ ಜಾರಿಗೆ ತರಲು ಆದೇಶಿಸಿದ್ದಂತೆ, ಡಿಸೆಂಬರ್ 19 ರಂದು ತನ್ನ ಅವಧಿಯನ್ನು ಪೂರ್ಣಗೊಳಿಸಿದ ಬೆಂಗಳೂರಿನ ವಕೀಲರ ಸಂಘದಲ್ಲಿಯೂ ಒಂದು ವ್ಯವಸ್ಥೆ ಜಾರಿಗೆ ತರಲು ಆದೇಶಿಸಿತು.

ದೆಹಲಿ ಹೈಕೋರ್ಟ್ ಬಾರ್ ಅಸೋಸಿಯೇಷನ್ ಪ್ರಕರಣದಲ್ಲಿ ನೀಡಿದಂತೆ ಬೆಂಗಳೂರು ವಕೀಲರ ಸಂಘದಲ್ಲಿಯೂ ಮಹಿಳಾ ಮೀಸಲಾತಿಯ ನಿರ್ದೇಶನಗಳನ್ನು ಜಾರಿಗೆ ತರುವಂತೆ ಕೋರಿ ಮಹಿಳಾ ವಕೀಲರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ಈ ಆದೇಶ ನೀಡಿದೆ.

ಕಳೆದ ವರ್ಷ, ಸುಪ್ರೀಂ ಕೋರ್ಟ್ ಖಜಾಂಚಿ ಹುದ್ದೆ ಸೇರಿದಂತೆ ಮಹಿಳಾ ವಕೀಲರಿಗೆ ಸ್ಥಾನಗಳನ್ನು ಕಾಯ್ದಿರಿಸುವಂತೆ ನಿರ್ದೇಶನ ನೀಡಿತ್ತು. ಇತ್ತೀಚೆಗೆ, ಸುಪ್ರೀಂ ಕೋರ್ಟ್ ದೆಹಲಿ ಮಾರಾಟ ತೆರಿಗೆ ಬಾರ್ ಅಸೋಸಿಯೇಷನ್ ಮತ್ತು ದೆಹಲಿ ತೆರಿಗೆ ಬಾರ್ ಅಸೋಸಿಯೇಷನ್‌ನ ಕಾರ್ಯಕಾರಿ ಸಮಿತಿಯಲ್ಲಿ ಖಜಾಂಚಿ ಹುದ್ದೆ ಮತ್ತು ಮಹಿಳಾ ವಕೀಲರಿಗೆ ಶೇ. 30 ರಷ್ಟು ಸ್ಥಾನಗಳನ್ನು ಕಾಯ್ದಿರಿಸುವಂತೆ ನಿರ್ದೇಶನ ನೀಡಿತ್ತು. ಜನವರಿ 20 ರಂದು ಸುಪ್ರೀಂ ಕೋರ್ಟ್ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ ಬಾರ್ ಅಸೋಸಿಯೇಷನ್ ಚುನಾವಣೆಯಲ್ಲಿ ಮಹಿಳಾ ವಕೀಲರಿಗೆ ಶೇ.33 ರಷ್ಟು ಸ್ಥಾನಗಳನ್ನು ಮೀಸಲಿಡುವಂತೆ ನಿರ್ದೇಶನ ನೀಡಿತ್ತು.

## ಗಣರಾಜ್ಯೋತ್ಸವಕ್ಕೆ ಮುನ್ನ ಕಣಿವೆ ರಾಜ್ಯದಲ್ಲಿ ಗುಂಡಿನ ಸದ್ದು

**ಜಮ್ಮು:** ಇಂದು ಮುಂಜಾನೆ ಜಮ್ಮು ಮತ್ತು ಕಾಶ್ಮೀರದ ಕಥುವಾದಲ್ಲಿ ಸೇನೆ ಮತ್ತು ಭಯೋತ್ಪಾದಕರ ನಡುವೆ ಎನ್‌ಕೌಂಟರ್ ಆರಂಭವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಭಯೋತ್ಪಾದಕರ ಶೋಧ ಕಾರ್ಯಾಚರಣೆ ವೇಳೆ ಈ ಗುಂಡಿನ ಚಕಮಕಿ ನಡೆದಿದೆ.

ಮಧ್ಯರಾತ್ರಿ 1.20ರ ಸುಮಾರಿಗೆ ಶಂಕಿತ ಭಯೋತ್ಪಾದಕರ ಚಲನವಲನವು ಬಟೋಡ್ ಪಂಚಾಯತ್‌ನಲ್ಲಿ ಪತ್ತೆಯಾಗಿದೆ ಎಂದು ತಾತ್ಕಾಲಿಕ ಸೇನಾ ಕ್ಯಾಂಪ್ ಆಗಿದ್ದ ಯೋಧರಿಗೆ ತಲುಪಿದೆ. ಈ ಬೆನ್ನಲ್ಲೇ ಅವರು ಶೋಧಕ್ಕೆ ಮುಂದಾಗಿದ್ದಾರೆ. ಈ ಸಂದರ್ಭದಲ್ಲಿ ಸೇನೆ ಮತ್ತು ಭಯೋತ್ಪಾದಕರ ನಡುವೆ ಸುಮಾರು ಒಂದೂವರೆ ಗಂಟೆಗಳ ಕಾಲ ಪರಸ್ಪರ ಗುಂಡಿನ ಚಕಮಕಿ ನಡೆದಿದೆ.

ಆದಾಗ್ಯೂ ಎರಡು ಕಡೆಯಲ್ಲಿ ಯಾವುದೇ ಅಪಾಯ ಸಂಭವಿಸಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದು, ಈ ವೇಳೆ ಮೂವರು ಭಯೋತ್ಪಾದಕರು ಹತ್ತಿರದ ಅರಣ್ಯದಲ್ಲಿ ಓಡಿಹೋಗಿದ್ದಾರೆ ಎಂದು ತಿಳಿಸಿದರು.

ಭಯೋತ್ಪಾದಕರ ಮಟ್ಟಹಾಕಲು ಸೇನಾ ತಂಡಗಳು ಕಾರ್ಡೋನ್ ಮತ್ತು ಶೋಧ ಕಾರ್ಯಾಚರನೆಯನ್ನು ನಡೆಸಿದ್ದು, ಈ ಕುರಿತು ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ.

# ಬ್ಯಾಂಕ್ ದರೋಡೆ ಪ್ರಕರಣ: ತಮಿಳುನಾಡಿನ ನೆಲ್ಲೈಯಲ್ಲಿ 15 ಕೆಜಿ ಚಿನ್ನಾಭರಣ ವಶ

**ತಮಿಳುನಾಡು:** ಮಂಗಳೂರು ಸಹಕಾರಿ ಬ್ಯಾಂಕ್‌ನಲ್ಲಿ ನಡೆದ ದರೋಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ನೆಲ್ಲೈ ಮೂಲದ ಮೂವರನ್ನು ಬಂಧಿಸಲಾಗಿದ್ದು, ಅವರಿಂದ 15 ಕೆಜಿ ಚಿನ್ನಾಭರಣ ವಶಪಡಿಸಿಕೊಳ್ಳಲಾಗಿದೆ.

ಮಂಗಳೂರಿನ ಉಳ್ಳಾಲ ಪೊಲೀಸ್ ಠಾಣೆ ವ್ಯಾಪ್ತಿಯ ಕೆ.ಸಿ ರೋಡ್‌ನಲ್ಲಿರುವ ಕೃಷಿ ಸಹಕಾರಿ ಬ್ಯಾಂಕ್‌ಗೆ ಇದೇ ತಿಂಗಳ 17ರಂದು ಬೆಳಗ್ಗೆ 11.30ರ ಸುಮಾರಿಗೆ ಮುಸುಕುಧಾರಿ ತಂಡವೊಂದು ಪಿಸ್ತೂಲ್ ಹಾಗೂ ಚಾಕುಗಳೊಂದಿಗೆ ನುಗ್ಗಿತ್ತು. ಅಲ್ಲಿದ್ದ ಬ್ಯಾಂಕ್ ನೌಕರರನ್ನು ಬೆದರಿಸಿ ಸುಮಾರು 4 ಕೋಟಿ ರೂ ಮೌಲ್ಯದ ಚಿನ್ನಾಭರಣ ಹಾಗೂ ನಗದನ್ನು ದೋಚಿ ಪರಾರಿಯಾಗಿದ್ದರು. ಈ ಬಗ್ಗೆ ಮಾಹಿತಿ ಪಡೆದ ಉಳ್ಳಾಲ ಪೊಲೀಸರು ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದರು. ನಂತರ ಆರೋಪಿಗಳ ಬಂಧನಕ್ಕೆ 6ಕ್ಕೂ ಹೆಚ್ಚು ವಿಶೇಷ ತಂಡಗಳನ್ನು ರಚಿಸಿ ತಮಿಳುನಾಡು, ಕೇರಳ, ಮಹಾರಾಷ್ಟ್ರ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಶೋಧ ಕಾರ್ಯ ನಡೆಸಲಾಗಿತ್ತು.

ಮೂವರ ಬಂಧನ : ನೆಲ್ಲೈ ಜಿಲ್ಲೆಯ ಕಳಕ್ಕಾಡು ಸಮೀಪದ ಪದ್ಮನೇರಿ ಗ್ರಾಮದ ಮುರುಗಂಡಿ (36) ಮತ್ತು ಜೋಶುವಾ ಎಂಬಿಬ್ಬರನ್ನು ಈ ದರೋಡೆ ಪ್ರಕರಣಕ್ಕೆ ಸಂಬಂಧಿಸಿದಂತೆ 2 ದಿನಗಳ ಹಿಂದೆ ಮಂಗಳೂರು ವಿಶೇಷ ಪೊಲೀಸರು ಬಂಧಿಸಿದ್ದರು.




ಅವರನ್ನು ಅಂಬಾಸಮುದ್ರಂ ಕ್ರಿಮಿನಲ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಹಾಜರುಪಡಿಸಿ ನಂತರ ಮಂಗಳೂರಿಗೆ ಕರೆದೊಯ್ಯಲಾಗಿತ್ತು. ಅವರಿಂದ 2 ಕೆಜಿ ಚಿನ್ನ, 3 ಲಕ್ಷ ರೂ ನಗದು, ಮುಂಬೈ ನೋಂದಣಿ ಸಂಖ್ಯೆಯ ಕಾರು, ಎರಡು ದೇಶಿ ನಿರ್ಮಿತ ಬಂದೂಕುಗಳು ಮತ್ತು 3 ಗುಂಡುಗಳನ್ನು ವಶಪಡಿಸಿಕೊಳ್ಳಲಾಗಿತ್ತು.

ನೆಲ್ಲೈ ಜಿಲ್ಲೆಯವರಾದ ಕಣ್ಣನ್ ಮಣಿ ಎಂಬುವವರನ್ನೂ ಪೊಲೀಸರು ಬಂಧಿಸಿದ್ದಾರೆ. ಈ ಮೂವರು ಹೆಚ್ಚುವರಿ ಚಿನ್ನಾಭರಣಗಳನ್ನು ನೆಲ್ಲೈಯಲ್ಲಿ ಬಚ್ಚಿಟ್ಟಿರುವುದಾಗಿ ಕರ್ನಾಟಕ ವಿಶೇಷ ಪೊಲೀಸರಿಗೆ ನೀಡಿದ ಹೇಳಿಕೆಯಲ್ಲಿ ತಿಳಿಸಿದ್ದರು.

**15 ಕೆಜಿ ಚಿನ್ನಾಭರಣ ವಶ:** ಹೀಗಾಗಿ ನಿನ್ನೆ ಇನ್ಸ್‌ಪೆಕ್ಟರ್ ರಾಜೇಂದ್ರನ್ ನೇತೃತ್ವದ ಪೊಲೀಸರ ತಂಡ ನೆಲ್ಲೈಗೆ ಆಗಮಿಸಿದ್ದರು. ಮುರುಗಂಡಿ ಅವರ ಮನೆಯಲ್ಲಿ ಬಚ್ಚಿಟ್ಟಿದ್ದ ಸುಮಾರು 15 ಕೆಜಿ ಚಿನ್ನಾಭರಣವನ್ನು ವಶಪಡಿಸಿಕೊಂಡಿದ್ದಾರೆ. ಈ ಸಂಬಂಧ ಮುರುಗಂಡಿ ಅವರ 65 ವರ್ಷದ ತಂದೆ ಷಣ್ಮುಗ ಸುಂದರಂ ಅವರನ್ನು ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ.

ಈ ಪ್ರಕರಣದಲ್ಲಿ ಬಂಧಿತರಾಗಿರುವ ಮೂವರೂ ನೆಲ್ಲೈ ಜಿಲ್ಲೆಯವರಾಗಿದ್ದು, ಹಲವು ವರ್ಷಗಳಿಂದ ಅವರು ಮುಂಬೈನಲ್ಲಿ ನೆಲೆಸಿದ್ದರು. ವಿಶೇಷ ಪೊಲೀಸರು ಮೊದಲು ಮುಂಬೈನಲ್ಲಿ ಕಣ್ಣನ್ ಮಣಿಯನ್ನು ಬಂಧಿಸಿದರು. ಆತ ನೀಡಿದ ಮಾಹಿತಿ ಮೇರೆಗೆ ನೆಲ್ಲೈಯಲ್ಲಿ ತಲೆಮರೆಸಿಕೊಂಡಿದ್ದ ಮುರುಗಂಡಿ ಹಾಗೂ ಜೋಶುವಾ ಇಬ್ಬರನ್ನೂ ಬಂಧಿಸಿದ್ದಾರೆ.

ಈ ಪ್ರಕರಣದಲ್ಲಿ ರಾಜಸ್ಥಾನ, ಉತ್ತರಪ್ರದೇಶದಂತಹ ಇತರ ರಾಜ್ಯಗಳ ಹಲವರು ಭಾಗಿಯಾಗಿದ್ದಾರೆ ಎಂದು ತಿಳಿದುಬಂದಿದೆ.

## ವಲಸಿಗರ ಬಗ್ಗೆ ಉಪರಾಷ್ಟ್ರಪತಿ ಕಳವಳ

**ಲಕ್ನೋ:** ದೇಶ ವಿರೋಧಿ ಚಟುವಟಿಕೆಗಳಲ್ಲಿ ತೊಡಗಿರುವ ಜನರು ಮತ್ತು ಸಂಸ್ಥೆಗಳ ವಿರುದ್ಧ ನಿಲ್ಲುವಂತೆ ಉಪರಾಷ್ಟ್ರಪತಿ ಜಗದೀಪ್ ಧನಕರ್ ದೇಶದ ಯುವಕರಿಗೆ ಕರೆ ನೀಡಿದ್ದಾರೆ. ನಮ್ಮ ಆರೋಗ್ಯ ರಕ್ಷಣೆ, ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರಗಳಿಗೆ ಗಂಭೀರವಾದ ಸವಾಲುಗಳನ್ನು ಒಡ್ಡುವ ಕೋಟ್ಯಂತರ ಅಕ್ರಮ ನಿರಾಶ್ರಿತರು ಭಾರತದಲ್ಲಿದ್ದಾರೆ ಎಂದು ಲಕ್ನೋದಲ್ಲಿ ಉತ್ತರ ಪ್ರದೇಶದ 76ನೇ ಸಂಸ್ಥಾಪನಾ ದಿನಾಚರಣೆಯನ್ನುದ್ದೇಶಿಸಿ ಅವರು ಮಾತನಾಡಿದ್ದಾರೆ.


ಅಕ್ರಮ ವಲಸೆ ಗಂಭೀರ ಕಳವಳದ ವಿಷಯವಾಗಿದೆ. ಏಕೆಂದರೆ, ಅವರು ಈಗ ಚುನಾವಣಾ ಪ್ರಕ್ರಿಯೆಗಳ ಮೇಲೆ ಪ್ರಭಾವ ಬೀರಲು ಪ್ರಯತ್ನಿಸುತ್ತಿದ್ದಾರೆ. ಜಗತ್ತಿನಾದ್ಯಂತ, ಅಭಿವೃದ್ಧಿ ಹೊಂದಿದ ರಾಷ್ಟ್ರಗಳು ಅಂತಹ ಸಮಸ್ಯೆಗಳನ್ನು ಪರಿಹರಿಸುತ್ತಿವೆ ಮತ್ತು ಭಾರತವೂ ಅದರ ಸ್ಥಿರತೆ ಮತ್ತು ಘನತೆಗಾಗಿ ತ್ವರಿತವಾಗಿ ಕಾರ್ಯನಿರ್ವಹಿಸಬೇಕು ಎಂದು ಅವರು ಹೇಳಿದ್ದಾರೆ.

ಭಾರತವನ್ನು ದುರ್ಬಲಗೊಳಿಸಲು ಕೆಲಸ ಮಾಡುವ ಮತ್ತು ರಾಷ್ಟ್ರವಿರೋಧಿ ಅಂಶಗಳೊಂದಿಗೆ ಕೈಜೋಡಿಸುವ ಶಕ್ತಿಗಳನ್ನು ಎದುರಿಸುವುದು ಮತ್ತು ತಟಸ್ಥಗೊಳಿಸುವುದು ಅತ್ಯಗತ್ಯ ಎಂದು ಉಪರಾಷ್ಟ್ರಪತಿ ಜಗದೀಪ್ ಧನಖರ್ ಮನವಿ ಮಾಡಿದ್ದಾರೆ. "ಯುವಕರು ಅಂತಹ ಬೆದರಿಕೆಗಳನ್ನು ಪರಿಣಾಮಕಾರಿಯಾಗಿ ಎದುರಿಸಲು ತಮ್ಮ ಅಗಾಧ ಶಕ್ತಿಯನ್ನು ಬಳಸಬೇಕು" ಎಂದು ಅವರು ಹೇಳಿದ್ದಾರೆ. ಫೆ.1ರಂದು ಮಹಾ ಕುಂಭ ಮೇಳದಲ್ಲಿ ಭಾಗವಹಿಸಲು ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ಆಹ್ವಾನವನ್ನು ಸ್ವೀಕರಿಸುವುದಾಗಿ ಉಪರಾಷ್ಟ್ರಪತಿ ಜಗದೀಪ್ ಧನಖರ್ ಘೋಷಿಸಿದ್ದಾರೆ. ಅವರು ತಮ್ಮ ಕುಟುಂಬದೊಂದಿಗೆ ಪ್ರಯಾಗರಾಜ್‌ನಲ್ಲಿರುವ ತ್ರಿವೇಣಿ ಸಂಗಮದಲ್ಲಿ ಸ್ನಾನ ಮಾಡುವುದಾಗಿ ಹೇಳಿದ್ದಾರೆ.



## ಸನ್ಯಾಸತ್ವ ಸ್ವೀಕರಿಸಿದ ಬಾಲಿವುಡ್ ನಟಿ ಮಮತಾ ಕುಲಕರ್ಣಿ

**ಪ್ರಯಾಗ್‌ರಾಜ್:** ಒಂದು ಕಾಲದಲ್ಲಿ ಬಾಲಿವುಡ್ ನಟಿಯಾಗಿ ಗುರುತಿಸಿಕೊಂಡಿದ್ದ ಮಮತಾ ಕುಲಕರ್ಣಿ ಇದೀಗ ಸನ್ಯಾಸತ್ವದ ಹಾದಿ ತುಳಿದಿದ್ದಾರೆ. ಅವರು ಸನ್ಯಾಸ ದೀಕ್ಷೆ ಸ್ವೀಕರಿಸಿದ್ದುಮ, ಇದರ ಅಂಗವಾಗಿ ಸಂಗಮ್‌ನಲ್ಲಿ ಕುಟುಂಬ ಸದಸ್ಯರಿಗೆ ಪಿಂಡದಾನ ಮಾಡಿದರು. ಈ ಪ್ರಕ್ರಿಯೆ ಕಾರ್ಯಗಳನ್ನು ಪೂರೈಸಿದ್ದ ನಟಿಗೆ ಕಿನ್ನರ್ ಅಖಾರದಲ್ಲಿ ಸನ್ಯಾಸ ದೀಕ್ಷೆ ನೀಡಲಾಯಿತು.



ಅಖಾರದ ಆಚಾರ್ಯ ಮಹಾಮಂಡಲೇಶ್ವರ ಡಾ. ಲಕ್ಷ್ಮೀನಾರಾಯಣ ತ್ರಿಪಾಠಿ ಅವರು ಮಮತಾ ಕುಲಕರ್ಣಿ ಅವರನ್ನು ಅಖಾರಕ್ಕೆ ಸೇರಿಸಿಕೊಂಡು, ಮಹಾಮಂಡಲೇಶ್ವರ ಬಿರುದು ನೀಡಿದ್ದಾರೆ. ಇನ್ಮುಂದೆ ಅವರನ್ನು ಶ್ರೀ ಯಮಾಯಿ ಮಮತಾ ನಂದ ಗಿರಿ ಎಂದು ಕರೆಯಲಾಗುತ್ತದೆ. ದೀಕ್ಷೆ ಪಡೆದ ಅವರಿಗೆ ಆಚಾರ್ಯ ಮಹಾಮಂಡಲೇಶ್ವರರ ಪ್ರಕಾರ ವೃಂದಾವನದಲ್ಲಿರುವ ಆಶ್ರಮದ ಜವಾಬ್ದಾರಿಯನ್ನು ನೀಡಲಾಗಿದ್ದು, ಇನ್ಮುಂದೆ ಅವರು ತಮ್ಮ ಸಂಪೂರ್ಣ ಜೀವನವನ್ನು ಸನಾತನ ಧರ್ಮದ ಪ್ರಚಾರಕ್ಕಾಗಿ ಮೀಸಲಿಡಲಿದ್ದಾರೆ.

**ಯಾರು ಈ ಮಮತಾ ಕುಲಕರ್ಣಿ:** ಮಮತಾ ಕುಲಕರ್ಣಿ 90ರ ದಶಕದಲ್ಲಿ ಬಾಲಿವುಡ್‌ನಲ್ಲಿ ಖ್ಯಾತ ನಟಿಯಾಗಿ ಮಿಂಚಿದ್ದರು. ಮಹಾಕುಂಭ ಮೇಳದಲ್ಲಿ ಅವರು ಸನ್ಯಾಸ ದೀಕ್ಷೆ ಪಡೆದಿರುವುದನ್ನು ಸ್ವತಃ ಕಿನ್ನರ್ ಆಚಾರ್ಯ ಮಹಾಮಂಡಲೇಶ್ವರ ಲಕ್ಷ್ಮೀ ನಾರಾಯಣ ತ್ರಿಪಾಠಿ ದೃಢಪಡಿಸಿದ್ದಾರೆ.

ಈ ಕುರಿತು ಮಾಹಿತಿ ನೀಡಿದ ಅವರು, ಸನಾತನ ಧರ್ಮದಲ್ಲಿ ನಂಬಿಕೆ ಇಟ್ಟಿರುವ ಚಿತ್ರನಟಿ ಮಮತಾ ಕುಲಕರ್ಣಿ ಅವರು ಇನ್ನು ಮುಂದೆ ಶ್ರೀ ಯಮಾಯಿ ಮಮತಾ ನಂದ ಗಿರಿ ಎಂದು ಕರೆಯಲ್ಪಡಲಿದ್ದಾರೆ. ಅವರ ಪಿಂಡಾನ್ ಮತ್ತು ಕೂದಲು ಕತ್ತರಿಸುವುದು ಸೇರಿದಂತೆ ಇತರ ಆಚರಣೆಗಳು ಸಂಗಮ ದಡದಲ್ಲಿ ನಡೆದಿದ್ದು, ಅವರ ಪಟ್ಟಾಭಿಷೇಕ ಕೂಡ ನೇರವೇರಿದೆ ಎಂದು ತಿಳಿಸಿದರು.

**ಸನಾತನದ ಧರ್ಮದಲ್ಲಿ ನಂಬಿಕೆ:** ಕಳೆದ ರಾತ್ರಿ ಮಮತಾ ಕುಲಕರ್ಣಿ ಅವರು ಜುನಾ ಅಖಾರದ ಸ್ತ್ರೀ ಮಹಾಮಂಡಲೇಶ್ವರರೊಂದಿಗೆ ತಮ್ಮನ್ನು ಭೇಟಿಯಾಗಲು ಬಂದಿದ್ದರು. ಅವರಿಗೆ ಸನಾತನ ಧರ್ಮದಲ್ಲಿ ಅತೀವ ನಂಬಿಕೆ ಇದ್ದು, ಈ ಮೊದಲು ಜುನಾ ಅಖಾರದ ಮಹಾಮಂಡಲೇಶ್ವರನೊಂದಿಗೆ ಇದ್ದರು. ಇದೀಗ ಜುನಾ ಅಖಾರದೊಂದಿಗೆ ಸನಾತನದ ಹಾದಿಯಲ್ಲಿ ಮುಂದುವರಿಯಲು ಬಯಸಿದ್ದಾರೆ. ಅವರ ಒಲವನ್ನು ಕಂಡು ಅವರನ್ನು ಮಹಾ ಮಂಡಲೇಶ್ವರಿಯಾಗಿ ಮಾಡಲು ನಿರ್ಧರಿಸಲಾಯಿತು ಎಂದರು.

# ಡೊನಾಲ್ಡ್ ಟ್ರಂಪ್ ಆದೇಶಕ್ಕೆ ನ್ಯಾಯಾಧೀಶರಿಂದ ತಾತ್ಕಾಲಿಕ ತಡೆ

ಸಿಯಾಟಲ್, ಅಮೆರಿಕ: ಯುಎಸ್‌ಗೆ ವಲಸೆ ಹೋಗಿ ವಾಸ ಮಾಡುತ್ತಿರುವ ಪೋಷಕರ ಅಮೆರಿಕದಲ್ಲಿ ಹುಟ್ಟಿದ ಮಕ್ಕಳಿಗೆ ಪೌರತ್ವ ನಿರಾಕರಿಸುವ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಕಾರ್ಯಕಾರಿ ಆದೇಶವನ್ನು ಫೆಡರಲ್ ನ್ಯಾಯಾಧೀಶರು ಗುರುವಾರ ತಾತ್ಕಾಲಿಕವಾಗಿ ತಡೆಹಿಡಿದಿದ್ದಾರೆ. ಆದೇಶವನ್ನು ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿಯ ಮೊದಲ ವಿಚಾರಣೆಯ ಸಮಯದಲ್ಲಿ ಇದು "ಅಸಂವಿಧಾನಿಕ" ಎಂದು ಹೇಳಿದ್ದಾರೆ.

ಸಂವಿಧಾನದ 14ನೇ ತಿದ್ದುಪಡಿ ಪ್ರಕಾರ ಅಮೆರಿಕದ ನೆಲದಲ್ಲಿ ಜನಿಸಿದವರಿಗೆ ಪೌರತ್ವದ ಭರವಸೆ ನೀಡುತ್ತದೆ. ಆದರೆ ಕಾನೂನುಬಾಹಿರ ವಲಸೆಯನ್ನು ತಡೆಯುವ ನಿಟ್ಟಿನಲ್ಲಿ, ವಲಸಿಗರ ಮಕ್ಕಳಿಗೆ ಸಹಜವಾಗಿ ಬರುತ್ತಿದ್ದ ಜನ್ಮತಃ ಪೌರತ್ವವನ್ನು ತಡೆಯುವ ನಿಟ್ಟಿನಲ್ಲಿ ಟ್ರಂಪ್, ಎರಡನೇ ಅವಧಿಗೆ ಪ್ರಮಾಣವಚನ ಸ್ವೀಕರಿಸಿದ ಬಳಿಕ ಈ ಕಾರ್ಯಕಾರಿ ಆದೇಶ ಹೊರಡಿಸಿದ್ದಾರೆ.

ಈ ಆದೇಶದ ಪ್ರಕಾರ, ಪೋಷಕರು ಅಕ್ರಮವಾಗಿ ಅಮೆರಿಕದಲ್ಲಿ ನೆಲೆಸಿದ್ದರೆ, ಫೆಬ್ರವರಿ 19 ರ ನಂತರ ಅವರಿಗೆ ಜನಿಸಿದ ಮಕ್ಕಳಿಗೆ ಇಲ್ಲಿನ ಪೌರತ್ವ ದೊರೆಯುವುದಿಲ್ಲ. ಅಂತಹ ಮಕ್ಕಳಿಗೆ ಪೌರತ್ವವನ್ನು ಗುರುತಿಸುವ ಯಾವುದೇ ಕಾಗದ ಪತ್ರ ನೀಡುವುದನ್ನು ಅಥವಾ ಯಾವುದೇ ರಾಜ್ಯದ ದಾಖಲೆಯನ್ನು ಸ್ವೀಕರಿಸುವುದನ್ನು ನಿಷೇಧಿಸುತ್ತದೆ.

ಟ್ರಂಪ್ ಅವರ ಈ ಆದೇಶದಿಂದ ಕಾನೂನು ಬದ್ಧವಾಗಿ ನೆಲಸಿರುವ ವಲಸಿಗರಲ್ಲಿ ಹಲವು



ಗೊಂದಲಗಳು ಉಂಟಾಗಿವೆ. ಅಷ್ಟೇ ಅಲ್ಲ ಇದು ಅನೇಕ ಕಾನೂನು ತೊಡಕುಗಳಿಗೂ ಕಾರಣವಾಗಿದೆ. ಈಗ ಉಂಟಾಗಿರುವ ಗೊಂದಲಗಳನ್ನು ಪರಿಹರಿಸಿಕೊಳ್ಳಲು ವಲಸಿಗರ ಹಕ್ಕುಗಳ ರಕ್ಷಣಾ ಗುಂಪುಗಳು ಅಮೆರಿಕದ ವಿವಿಧ ಕೋರ್ಟ್‌ಗಳ ಮೆಟ್ಟಿಲು ಹತ್ತಿದ್ದಾರೆ. ಟ್ರಂಪ್ ಅವರ ಆದೇಶವನ್ನು ಪ್ರಶ್ನಿಸಿ 22 ರಾಜ್ಯಗಳಲ್ಲಿ ಪ್ರಶ್ನಿಸಲಾಗುತ್ತಿದೆ. ವಾಷಿಂಗ್ಟನ್, ಅರಿಝೋನಾ, ಒರೆಗಾನ್ ಮತ್ತು ಇಲಿನಾಯಿಸ್ ಕೋರ್ಟ್ ಗಳಲ್ಲಿ ಈ ಸಂಬಂಧ ವಿಚಾರಣೆ ನಡೆಯುತ್ತಿದೆ.

ಇದು ಅಸಾಂವಿಧಾನಿಕ ಆದೇಶ ಎಂದ ಕೋರ್ಟ್; ಈ ಅರ್ಜಿಯ ವಿಚಾರಣೆ ನಡೆಸಿದ ಅಮೆರಿಕದ ವಾಷಿಂಗ್ಟನ್ ಜಿಲ್ಲಾ ನ್ಯಾಯಾಧೀಶ ಜಾನ್ ಕೊಘೆನರ್, "ನಾನು ನಾಲ್ಕು ದಶಕಗಳಿಂದ ಪೀಠದಲ್ಲಿದ್ದು, ಈ ರೀತಿಯಾಗಿ ಸ್ಪಷ್ಟವಾಗಿ ನಿರೂಪಿಸಿರುವ ಇಂತಹ ಮತ್ತೊಂದು ಕೇಸ್ ನನಗೆ ನೆನಪಿಲ್ಲ. ಇದು ಸ್ಪಷ್ಟವಾಗಿ ಅಸಾಂವಿಧಾನಿಕ ಆದೇಶ" ಎಂದು ಹೇಳಿದರು.

ನ್ಯಾಯಾಧೀಶ ಕೊಘೆನರ್ ಅವರು ಸರ್ಕಾರಿ ಪರ ವಕೀಲ ಬ್ರೆಟ್ ಶುಮೇಟ್ ಅವರಿಗೆ, ನೀವು ಅಧ್ಯಕ್ಷರ ಆದೇಶವನ್ನು ಸಾಂವಿಧಾನಿಕ ಎಂದು ವೈಯಕ್ತಿಕವಾಗಿ ನಂಬುತ್ತೀರಾ ಎಂದು ಕೇಳಿದರು. "ಇದು ಸಾಂವಿಧಾನಿಕ ಆದೇಶ ಎಂದು ಬಾರ್‌ನ ಸದಸ್ಯರು ಹೇಗೆ ಹೇಳುತ್ತಾರೆ ಎಂಬುದನ್ನು ಅರ್ಥಮಾಡಿಕೊಳ್ಳುವುದು ನನಗೆ ಕಷ್ಟವಾಗಿದೆ" ಎಂದು ಅವರು ಹೇಳಿದರು.

ಆಗ ಶುಮೇಟ್ ಅವರು, ಈ ಹಿಂದೆ ಅಧ್ಯಕ್ಷರುಗಳು ಜಾರಿಗೊಳಿಸಿದ್ದ ಕಾರ್ಯನಿರ್ವಾಹಕ ಆದೇಶಕ್ಕೆ ಯಾವುದೇ ಮೊಕದ್ದಮೆ ಹೂಡಿರಲಿಲ್ಲ. ಈಗ ಆದೇಶವು ಜಾರಿಗೆ ಬರುವ ಮೊದಲು 14 ದಿನಗಳ ತಾತ್ಕಾಲಿಕ ತಡೆಯಾಜ್ಞೆ ನೀಡಲು ಯಾವುದೇ ಸಕಾರಣ ಇಲ್ಲ, ಏಕೆಂದರೆ ಅಮೆರಿಕ ಸಂವಿಧಾನದ 14 ನೇ ತಿದ್ದುಪಡಿ ಅನ್ವಯವೇ ಕಾನೂನು ಬದ್ಧವಾಗಿ ಈ ಆದೇಶ ಮಾಡಲಾಗಿದೆ ಎಂದು ಪ್ರತಿಪಾದಿಸಿದರು.

ಇದೇ ಅನಿಸಿಕೆಯನ್ನು ಕಾನೂನು ಇಲಾಖೆ ಕೂಡಾ ವಿಚಾರಣೆ ಬಳಿಕ ಹೇಳಿದೆ: "ಯುಎಸ್ ಸಂವಿಧಾನದ 14ನೇ ತಿದ್ದುಪಡಿಯನ್ನು ಸರಿಯಾಗಿ ಅರ್ಥೈಸುತ್ತದೆ" ಎಂದು ಹೇಳಿರುವ ಅಧ್ಯಕ್ಷರ ಕಾರ್ಯನಿರ್ವಾಹಕ ಆದೇಶವನ್ನು "ಬಲವಾಗಿ ಸಮರ್ಥಿಸಿಕೊಳ್ಳುತ್ತದೆ" ಎಂದು ನ್ಯಾಯಾಂಗ ಇಲಾಖೆ ನಂತರ ನೀಡಿದ ತನಮ್ಮ ಹೇಳಿಕೆಯಲ್ಲಿ ತಿಳಿಸಿದೆ.

ವಾದ-ಪ್ರತಿವಾದ ಆಲಿಸಿದ ನ್ಯಾಯಾದೀಶರು ಅಧ್ಯಕ್ಷರ ಆದೇಶಕ್ಕೆ ತಾತ್ಕಾಲಿಕ ತಡೆ ನೀಡಿ, ವಿಚಾರಣೆಯನ್ನ ಫೆಬ್ರವರಿ 6ಕ್ಕೆ ಮುಂದೂಡಿದರು.

## ರಾಷ್ಟ್ರೀಯ ಮತದಾರರ ದಿನಾಚರಣೆ ಪ್ರಯುಕ್ತ ಪ್ರತಿಜ್ಞಾವಿಧಿ ಬೋಧಿಸಿದ ಪೌರಾಯುಕ್ತ




**ಮುಳಬಾಗಿಲು:** ಮುಳಬಾಗಿಲು ನಗರಸಭೆ ಅವರಣದಲ್ಲಿ ಭಾರತ ಚುನಾವಣಾ ಆಯೋಗದ ಸೂಚನೆಯಂತೆ ಹಾಗೂ ಪೌರಾಯುಕ್ತರಾದ ವಿ.ಶ್ರೀಧರ್ ರವರ ನೇತೃತ್ವದಲ್ಲಿ ರಾಷ್ಟ್ರೀಯ ಮತದಾರರ ದಿನಚರಣೆಯ ಅಂಗವಾಗಿ ಮತದಾನದಾರರ ಪ್ರತಿಜ್ಞಾ ವಿಧಿ ಭೋದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಪ್ರತಿಜ್ಞಾ ವಿಧಿ ಬೋಧಿಸಿ ಮಾತನಾಡಿದ ಪೌರಾಯುಕ್ತರು, ವಿಶ್ವದಲ್ಲೇ ಅತಿ ದೊಡ್ಡ ಪ್ರಜಾಪ್ರಭುತ್ವ ಹಾಗೂ ಅತ್ಯುತ್ತಮ ಸಂವಿಧಾನ ಹೊಂದಿರುವುದು ನಮ್ಮ ಭಾರತ ದೇಶ, ಸಂವಿಧಾನದ ಪ್ರಕಾರ 18 ವರ್ಷದ ಪ್ರತಿಯೊಬ್ಬ ವ್ಯಕ್ತಿಯೂ ಮತದಾನಕ್ಕೆ ಅರ್ಹತೆ ಪಡೆದಿರುತ್ತಾರೆ,ಹಾಗೂ ಮತದಾನ ಪ್ರತಿಯೊಬ್ಬ ನಾಗರಿಕ ಆದ್ಯ ಕರ್ತವ್ಯವಾಗಿರುತ್ತದೆ, ಈ ನಿಟ್ಟಿನಲ್ಲಿ ಮುಳಬಾಗಿಲು ನಗರಸಭೆಯು ಕಡ್ಡಾಯ ಮತದಾನದ ಕುರಿತು ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ಎಂದು ತಿಳಿಸಿದ್ದರು, ಸದರಿ ಕಾರ್ಯಕ್ರಮದಲ್ಲಿ ನಗರಸಭೆಯ ಕಂದಾಯಾಧಿಕಾರಿಗಳಾದ ತ್ಯಾಗ ರಾಜ್, ಹಿರಿಯ ಆರೋಗ್ಯ ನಿರೀಕ್ಷಿಕರಾದ ವಿ.ಪ್ರತಿಭ, ಕಿರಿಯ ಆರೋಗ್ಯ ನಿರೀಕ್ಷಕರಾದ ಶಿವರೆಡ್ಡಿ , ಡಿ.ಸಿ.ಬಿ ಸುಬ್ರಮಣಿ , ಪ್ರಶಾಂತ್ ಹಾಗೂ ಎಲ್ಲಾ ಅಧಿಕಾರಿ / ಸಿಬ್ಬಂದಿ ವರ್ಗದವರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

## ಜ.31ರಂದು ಗ್ರಾಮೀಣ ಕ್ರೀಡಾಕೂಟ

ಚಾಮರಾಜನಗರ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2024-25ನೇ ಸಾಲಿನ ಯಳಂದೂರು ತಾಲೂಕುಮಟ್ಟದ ಗ್ರಾಮೀಣ ಕ್ರೀಡಾಕೂಟವನ್ನು ಜ.31ರಂದು ಯಳಂದೂರಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಏರ್ಪಡಿಸಲಾಗಿದೆ.


ಪುರುಷರಿಗೆ ವಾಲಿಬಾಲ್ (10 ಜನ), ಕಬ್ಬಡ್ಡಿ (10 ಜನ), ಹಗ್ಗ ಜಗ್ಗಾಟ (7 ಜನ) ಹಾಗೂ ಮಹಿಳೆಯರಿಗೆ ಕಬ್ಬಡ್ಡಿ (10 ಜನ), ಖೋ-ಖೋ (10 ಜನ), ಹಗ್ಗ ಜಗ್ಗಾಟ (7 ಜನ) ಸ್ಪರ್ಧೆಗಳನ್ನು ನಡೆಸಲಾಗುತ್ತದೆ. ಕ್ರೀಡಾಕೂಟದಲ್ಲಿ ಗ್ರಾಮೀಣ ಪ್ರದೇಶದ ಶಾಲಾ-ಕಾಲೇಜು ವಿದ್ಯಾರ್ಥಿಗಳು, ಯುವಕ-ಯುವತಿ ಸಂಘಗಳು ಮತ್ತು ಪುರುಷ-ಮಹಿಳಾ ಸಂಘಗಳ ಸ್ಪರ್ಧಿಗಳು ಭಾಗವಹಿಸಬಹುದು.

ಕ್ರೀಡಾಪಟುಗಳು ಕ್ರೀಡಾಕೂಟದ ದಿನದಂದು ಬೆಳಿಗ್ಗೆ 9 ಗಂಟೆಗೆ ಸಂಘಟಕರಲ್ಲಿ ವರದಿ ಮಾಡಿಕೊಳ್ಳಬೇಕು. ಭಾಗವಹಿಸುವ ಕ್ರೀಡಾಪಟುಗಳಿಗೆ ಮಧ್ಯಾಹ್ನದ ಉಪಹಾರ ಹಾಗೂ ವಿಜೇತರಿಗೆ ನಗದು ಬಹುಮಾನ, ಪ್ರಶಸ್ತಿ ಪತ್ರ, ಮೆಡಲ್, ಟ್ರೋಫಿಗಳನ್ನು ನೀಡಲಾಗುವುದು. ಕ್ರೀಡಾಕೂಟದಲ್ಲಿ ಭಾಗವಹಿಸುವವರು ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ತರಬೇಕು. ತಾಲೂಕುಮಟ್ಟದಲ್ಲಿ ವಿಜೇತರಾದ ಕ್ರೀಡಾಪಟುಗಳು ಇಲಾಖೆ ವತಿಯಿಂದ ನೀಡುವ ಗುರುತಿನ ಚೀಟಿಯನ್ನು ಪಡೆದು ಇತ್ತೀಚಿನ ಭಾವಚಿತ್ರ ಹಾಗೂ ಬ್ಯಾಂಕ್ ಪಾಸ್ ಪುಸ್ತಕದ ಜೆರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ಲಗತ್ತಿಸಿ ಜಿಲ್ಲಾಮಟ್ಟದ ಕ್ರೀಡಾಕೂಟಕ್ಕೆ ತರಬೇಕು. ವಿಜೇತರಾದ ಕ್ರೀಡಾ ತಂಡಕ್ಕೆ ವಾಲಿಬಾಲ್, ಖೋ-ಖೋ, ಕಬ್ಬಡಿಗೆ ಪ್ರಥಮ 4 ಸಾವಿರ ರೂ., ದ್ವಿತೀಯ 2 ಸಾವಿರ ರೂ., ಹಗ್ಗ ಜಗ್ಗಾಟ ಪ್ರಥಮ 3 ಸಾವಿರ ರೂ., ದ್ವಿತೀಯ 2 ಸಾವಿರ ರೂ. ನೀಡಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಚೇರಿ ಸಂಪರ್ಕಿಸಬಹುದು ಅಥವಾ ದೂ.ಸಂ 08226-224932, ಮೊ.ಸಂ 9916466659, 9844160841, 9945615695, 9880211027 ಸಂಪರ್ಕಿಸುವಂತೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಿಎಲ್‌ಡಿಬ್ಯಾಂಕ್ ಅಧ್ಯಕ್ಷ, ಉಪಾಧ್ಯಕ್ಷ ಗಾದಿ ಕೈ ವಶ

**ಮಾಲೂರು:** ಪಿ.ಎಲ್.ಡಿ.ಬ್ಯಾಂಕ್ ಅಧ್ಯಕ್ಷ ರಾಗಿ ಬಾಳಿಗಾನಹಳ್ಳಿ ಶ್ರೀನಿವಾಸ್, ಉಪಾಧ್ಯಕ್ಷರಾಗಿ ವೆಂಕಟೇಶ್ ಅವರು ಅವಿರೋಧವಾಗಿ ಆಯ್ಕೆಯಾದರು.



ಪಟ್ಟಣದ ಪಿ.ಎಲ್.ಡಿ.ಬ್ಯಾಂಕ್ ಸಭಾಂಗಣದಲ್ಲಿ ನಡೆದ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಗಳಿಗೆ ಚುನಾವಣೆ ನಿಗಧಿಯಾಗಿ ಅಧ್ಯಕ್ಷ ಸ್ಥಾನಕ್ಕೆ ಬಾಳಿಗಾನಹಳ್ಳಿ ಶ್ರೀನಿವಾಸ್, ಉಪಾಧ್ಯಕ್ಷ ಸ್ಥಾನಕ್ಕೆ ವೆಂಕಟೇಶ್ ಅವರ ಮಾತ್ರ ನಾಮಪತ್ರ ಸಲ್ಲಿಸಿದ್ದು, ಬೇರೆ ಯಾರು ನಾಮಪತ್ರ ಸಲ್ಲಿಸದ ಕಾರಣ ಅಧ್ಯಕ್ಷ ರಾಗಿ ಬಾಳಿಗಾನಹಳ್ಳಿ ಶ್ರೀನಿವಾಸ್, ಉಪಾಧ್ಯಕ್ಷರಾಗಿ ವೆಂಕಟೇಶ್ ಅವರು ಅವರು ಅವಿರೋಧವಾಗಿ ಆಯ್ಕೆಯಾಗಿರುವುದಾಗಿ ಚುನಾವಣಾಧಿಕಾರಿ ಘೋಷಣೆ ಮಾಡಿದರು.

ಶಾಸಕ ಕೆ.ವೈ.ನಂಜೇಗೌಡ ಅವರು ನೂತನ ಅಧ್ಯಕ್ಷ, ಉಪಾಧ್ಯಕ್ಷರಿಗೆ ಅಭಿನಂದಿಸಿ ಮಾತನಾಡಿ, 32 ವರ್ಷಗಳ ಇತಿಹಾಸದಲ್ಲಿ ಪಿ.ಎಲ್.ಡಿ ಬ್ಯಾಂಕ್ ಅಧಿಕಾರವನ್ನು ಕಾಂಗ್ರೆಸ್ ಪಕ್ಷ ಹಿಡಿಯುವ ಮೂಲಕ ಇತಿಹಾಸ ವಾಗಿದೆ. ಅವಿರೋಧವಾಗಿ ಆಯ್ಕೆಯಾಗಲು ಪಕ್ಷಾತೀತವಾಗಿ ಸಹಕಾರ ನೀಡಿದ್ದಾರೆ. ನೂತನವಾಗಿ ಅಧ್ಯಕ್ಷ, ಉಪಾಧ್ಯಕ್ಷರು ಬ್ಯಾಂಕ್ ಗೆ ಬರುವ ರೈತರಿಗೆ, ಸಾರ್ವಜನಿಕರಿಗೆ ಗೌರವಯುವಾಗಿ ಸೇವೆ ಸಲ್ಲಿಸಿ ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲು ಶ್ರಮವಹಿಸುವಂತೆ ಸೂಚಿಸಿ ಶುಭಾ ಹಾರೈಸಿದರು.

32 ವರ್ಷಗಳ ಇತಿಹಾಸದಲ್ಲಿ ಪಿ.ಎಲ್.ಡಿ.ಬ್ಯಾಂಕ್ ಅಧ್ಯಕ್ಷ, ಉಪಾಧ್ಯಕ್ಷ ಗಾದಿ ಕೈ ವಶವಾಗುತ್ತಿದ್ದಂತೆ ಕಾಂಗ್ರೆಸ್ ಕಾರ್ಯಕರ್ತರು, ಮುಖಂಡರು ಪಟಾಕಿ ಸಿಡಿಸಿ, ಸಿಹಿ ಹಂಚಿ ಮೆರವಣಿಗೆ ಮಾಡುವ ಮೂಲಕ ವಿಜಯೋತ್ಸವ ಅಚರಿಸಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ಸದಸ್ಯರಾದ ಅಂಜನಿಸೋಮಣ್ಣ, ಎಂ.ಎಸ್.ಪ್ರದೀಪ್ ರೆಡ್ಡಿ, ಡಿಸಿಸಿ ಅಧ್ಯಕ್ಷ ಸಿ.ಲಕ್ಷ್ಮೀನಾರಾಯಣ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಜಿ.ಮಧುಸೂದನ್, ಯೋಜನಾ ಪ್ರಾಧಿಕಾರದ ಅಧ್ಯಕ್ಷ ನಯೀಮ್, ದರಖಾಸ್ತು ಸಮಿತಿ ಅಧ್ಯಕ್ಷ ಸಂತೇಹಳ್ಳಿ ನಾರಾಯಣಸ್ವಾಮಿ, ಸ್ಥಾಯಿ ಸಮಿತಿ ಅಧ್ಯಕ್ಷ ಎ.ರಾಜಪ್ಪ, ವಿಜಯಲಕ್ಷ್ಮಿ, ಮುಖಂಡರಾದ ರಮೇಶ್ ಗೌಡ, ಎಂ.ವಿ.ಹನುಮಂತಪ್ಪ, ಎಟ್ಟಕೋಡಿ ವೀರಭದ್ರಪ್ಪ,ಎಂ.ಆಂಜಿ, ನಾಗಪುರ ನವೀನ್, ಬನಹಳ್ಳಿ ಸತೀಶ್, ದೊಡ್ಡಮಲ್ಲೆ ಹರೀಶ್ ಗೌಡ, ಕೆ.ವೈ.ಈರಣ್ಣ, ಶಬ್ಬೀರ್, ತನ್ವೀರ್, ಮಾಸ್ತಿ ಪ್ರವೀಣ್, ಮಾದನಹಟ್ಟಿ ರವಿಕುಮಾರ್, ಕುಮಾರ್, ಗೋಪಾಲ್ ಕೃಷ್ಣ, ಕಾಕಪ್ಪ, ಹರೀಶ್ ಎನ್.ಗೌಡ, ಅಭಿ, ಸಂದೀಪ್, ಸೇರಿದಂತೆ ಹಲವಾರು ಮುಖಂಡರು ಹಾಜರಿದ್ದರು.



# ಬಾಳೆ ಎಲೆಯಲ್ಲಿ ಊಟ.. ಜಾಹ್ನವಿ!

ದಿವಂಗತ ನಟಿ ಶ್ರೀದೇವಿಯವರ ಪುತ್ರಿ ಜಾನ್ವಿ ಕಪೂರ್, ಕಾಲೇಜು ಶಿಕ್ಷಣ ಮುಗಿಸಿ ಬಾಲಿವುಡ್‌ಗೆ ನಾಯಕಿಯಾಗಿ ಪಾದಾರ್ಪಣೆ ಮಾಡಿದರು. ಮೊದಲ ಚಿತ್ರ ವಿಮರ್ಶಾತ್ಮಕವಾಗಿ ಮತ್ತು ಗಳಿಕೆಯ ದೃಷ್ಟಿಯಿಂದ ಉತ್ತಮ ಪ್ರತಿಕ್ರಿಯೆ ಪಡೆಯಿತು. ನಂತರ, ತಮ್ಮ ನಟನಾ ಕೌಶಲ್ಯವನ್ನು ಸಾಬೀತುಪಡಿಸಲು ಹಲವು ಚಿತ್ರಗಳಲ್ಲಿ ನಟಿಸಿದರು. ಕುಂಜನ್ ಸಕ್ಸೇನಾ, ಗುಡ್ ಲಕ್ ಜೆರಿ ಮುಂತಾದ ಚಿತ್ರಗಳು ಅವರನ್ನು ಮುಂದಿನ ಹಂತಕ್ಕೆ ಕೊಂಡೊಯ್ದವು.

ಬಾಲಿವುಡ್‌ನಲ್ಲಿ 5 ಕೋಟಿಗೂ ಹೆಚ್ಚು ಸಂಭಾವನೆ ಪಡೆಯುವ ಯುವ ನಟಿ ಜಾನ್ವಿ ಕಪೂರ್, ಕಳೆದ ವರ್ಷ ದಕ್ಷಿಣ ಭಾರತದ ಚಿತ್ರರಂಗಕ್ಕೂ ಪಾದಾರ್ಪಣೆ ಮಾಡಿದರು. ಜೂನಿಯರ್ ಎನ್.ಟಿ.ಆರ್. ನಟಿಸಿದ 'ದೇವರ' ಚಿತ್ರದ ಮೂಲಕ ತೆಲುಗಿಗೆ ಕಾಲಿಟ್ಟರು. ಅವರ ಸುಂದರ ನೋಟ ಮತ್ತು ನೃತ್ಯಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು. ಜೂನಿಯರ್ ಎನ್.ಟಿ.ಆರ್ ಜೊತೆಗಿನ ಜೋಡಿ ಅನೇಕ ಅಭಿಮಾನಿಗಳನ್ನು ಆಕರ್ಷಿಸಿತು.

ಈ ಚಿತ್ರದ ಎರಡನೇ ಭಾಗ ಈ ವರ್ಷ ಅಥವಾ ಮುಂದಿನ ವರ್ಷ ಬಿಡುಗಡೆಯಾಗಲಿದೆ ಎನ್ನಲಾಗಿದೆ. ದೇವರ ಚಿತ್ರದ ನಂತರ, ರಾಮ್ ಚರಣ್ ಜೊತೆ ಖಅ 16 ಚಿತ್ರದಲ್ಲೂ ನಟಿಸುತ್ತಿದ್ದಾರೆ. ಈ ಚಿತ್ರವನ್ನು ಬೂಜಿ ಬಾಬು ಸನಾ ನಿರ್ದೇಶಿಸಲಿದ್ದಾರೆ. ಚಿತ್ರೀಕರಣ ಮಾರ್ಚ್‌ನಲ್ಲಿ ಆರಂಭವಾಗುವ ನಿರೀಕ್ಷೆಯಿದೆ.

ಜಾನ್ವಿ ಕಪೂರ್ ಅವರ ಚಿತ್ರರಂಗದ ಜೀವನ ಒಂದು ಕಡೆ ಯಶಸ್ವಿಯಾಗಿ ಸಾಗುತ್ತಿರುವಾಗ, ತಮ್ಮ ವೈಯಕ್ತಿಕ ಜೀವನದ ಬಗ್ಗೆ ಮನಬಿಚ್ಚಿ ಮಾತನಾಡಿದ್ದಾರೆ. ಮದುವೆ, ಮಕ್ಕಳು ಕುರಿತು ಜಾಹ್ನವಿ ಕಪೂರ್ ಮಾತನಾಡಿದ್ದಾರೆ. ಜಾಹ್ನವಿ ಕಪೂರ್ ಬಯಕೆ ನೋಡಿ ಅಭಿಮಾನಿಗಳು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಇತ್ತೀಚೆಗೆ, ಬಾಲಿವುಡ್ ನಿರ್ದೇಶಕ ಕರಣ್ ಜೋಹರ್ ಅವರ ಕಾರ್ಯಕ್ರಮದಲ್ಲಿ ಭಾಗವಹಿಸಿದ ಜಾನ್ವಿ ಕಪೂರ್, ಮದುವೆಯ ಬಗ್ಗೆ ಕುತೂಹಲಕಾರಿ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದಾರೆ. ತಿರುಪತಿಯಲ್ಲಿ ಮದುವೆಯಾಗಬೇಕೆಂಬುದು ತಮ್ಮ ಆಸೆ. ಗಂಡ ಮತ್ತು 3 ಮಕ್ಕಳೊಂದಿಗೆ ತಿರುಪತಿಯಲ್ಲಿ ನೆಲೆಸಬೇಕು ಎಂದಿದ್ದಾರೆ. ಪತಿ ಮಕ್ಕಳೊಂದಿಗೆ ಸಮಯ ಕಳೆಯಲು ಬಯಸುತ್ತೇನೆ ಎಂದಿದ್ದಾರೆ.

ಪ್ರತಿದಿನ ಬಾಳೆ ಎಲೆಯಲ್ಲಿ ಊಟ ಮಾಡಿ, ಗೋವಿಂದನನ್ನು ಗೋವಿಂದ ಎಂದು ಕರೆಯುವ ಆಸೆ ಇದೆ ಎಂದು ಜಾನ್ವಿ ಕಪೂರ್ ಹೇಳಿದ್ದಾರೆ. ಇದರಿಂದ ಜಾನ್ವಿಗೆ ವೆಂಕಟೇಶ್ವರ ಸ್ವಾಮಿಯ ಮೇಲೆ ಎಷ್ಟು ಭಕ್ತಿ ಇದೆ ಎಂದು ತಿಳಿಯುತ್ತದೆ. ಕಳೆದ ಕೆಲವು ವರ್ಷಗಳಿಂದ ಜಾನ್ವಿ ಕಪೂರ್ ತಮ್ಮ ಪ್ರಿಯತಮರೊಂದಿಗೆ ತಿರುಮಲೆಗೆ ಭೇಟಿ ನೀಡಿ ಪೂಜೆ ಸಲ್ಲಿಸುತ್ತಿರುವುದು ಗಮನಾರ್ಹ.




# ಬಿಗ್ ಡೀಲ್‌ಗೆ 'ಕೈ' ಹಾಕಿದ ಸುದೀಪ್

ಕಿಚ್ಚ ಸುದೀಪ್ ಹೋಸ್ಟ್ ಮಾಡುತ್ತಿರುವ 'ಬಿಗ್ ಬಾಸ್ ಸೀಸನ್ 11' ಫಿನಾಲೆಗೆ ದಿನಗಣನೆ ಶುರುವಾಗಿದ್ದು, . ಇನ್ನೇನು ಇದೇ ವಾರಾಂತ್ಯಕ್ಕೆ ಬಿಗ್ ಬಾಸ್ ಶೋ ಮುಕ್ತಾಯಗೊಳ್ಳಲಿದೆ. ಈ ಸೀಸನ್ ಮೂಲಕ ಬಿಗ್ ಬಾಸ್ ಜೊತೆಗಿನ ಕಿಚ್ಚನ ಸಂಬಂಧವೂ ಮುಕ್ತಾಯ ಆಗ್ತಾ ಇದೆ.

ಈ ಬಗ್ಗೆ ಸ್ವತಃ ಕಿಚ್ಚ ಸುದೀಪ್ ಅಧಿಕೃತವಾಗಿ ಸ್ಟೇಟ್‌ಮೆಂಟ್ ಕೊಟ್ಟಾಗಿದೆ. ಇದೇ ವೇಳೆ ನಟ ಕಿಚ್ಚ ಸುದೀಪ್ ಅವರು ತಮ್ಮ ಪೈಲ್ವಾನ್ ಚಿತ್ರದ ನಟನೆಗಾಗಿ 2019ರ ಶ್ರೇಷ್ಠ ನಟ ಪ್ರಶಸ್ತಿ ಪಡೆದಿದ್ದಾರೆ.

ನಟ ಕಿಚ್ಚ ಸುದೀಪ್ ಈಗಾಗ್ಲೇ ಇದು ನನ್ನ ಕೊನೆಯ ಬಿಗ್ ಬಾಸ್ ಸೀಸನ್ ಅಂತ ಹೇಳಿದ್ರು. ಶೋ ನಡೀತಿರೋವಾಗಲೇ ವಿದಾಯದ ಮಾತನಾಡಿದ್ರು. ಇದೀಗ ಒನ್ಸ್ ಅಗೈನ್ ಫೈನಲ್‌ಗೆ ಕೆಲವೇ ದಿನ ಬಾಕಿ ಇರೋವಾಗ ಮತ್ತೊಮ್ಮೆ ಕಿಚ್ಚ ಸೋಷಿಯಲ್ ಮಿಡಿಯಾದಲ್ಲಿ ಪೋಸ್ಟ್ ಹಾಕಿ ಬಿಗ್ ಬಾಸ್‌ಗೆ ಅಧಿಕೃತವಾಗಿ ಗುಡ್ ಬೈ ಹೇಳಿದ್ದಾರೆ. ಈ ಮೂಲಕ ನಟ ಕಿಚ್ಚ ಸುದೀಪ್ ಅವರ ಬಿಗ್ ಬಾಸ್ ಜರ್ನಿ ಅಧಿಕೃತ ಅಂತ್ಯ ಕಾಣಲಿದೆ.

ಅಲ್ಲಿಗೆ ಈ ವಾರಾಂತ್ಯಕ್ಕೆ ನಡೆಯಲಿರೋ ಫಿನಾಲೆಯು ಕಿಚ್ಚನ ಕೊನೆ ಫಿನಾಲೆ ಆಗಲಿದೆ. ಮುಂದಿನ ದಿನಗಳಲ್ಲಿ ಬಿಗ್ ಬಾಸ್ ಮುಂದುವರೆಯಬಹುದು.. ಬೇರೇ ನಿರೂಪಕರು ಬಂದು ಬಿಗ್ ಬಾಸ್ ಶೋ ನಡೆಸಿಕೊಡಬಹುದು. ಆದ್ರೆ ಕಿಚ್ಚ ಅಂತೂ ಇನ್ಮುಂದೆ ಈ ವೇದಿಕೆ ಮೇಲೆ ಕಾಣಿಸಿಕೊಳ್ಳಲ್ಲ ಅನ್ನೋದು ಫಿಕ್ಸ್.

ಸುದೀಪ್ ಇಲ್ಲದೇ ಹೋಗಿದ್ದಲ್ಲಿ ಬಹುಶಃ ಬಿಗ್ ಬಾಸ್ ಕಾರ್ಯಕ್ರಮ ಕನ್ನಡದಲ್ಲಿ ಇಷ್ಟು ಜನಪ್ರೀಯತೆ ಪಡೆಯೋದು ಸಾಧ್ಯನೇ ಇರಲಿಲ್ಲ. ಸುದೀಪ್ ಬಿಗ್ ಕೇವಲ ಬಾಸ್ ಶೋಗೆ ವಾರಕ್ಕೊಮ್ಮೆ ಬರೋ ವಿಸಿಟಿಂಗ್ ಆಂಕರ್ ಅಲ್ಲ. ಅಥವಾ ಸೆಲೆಬ್ರಿಟಿ ಜಡ್ಜ್ ಅಲ್ಲ. ಇದು ತನ್ನದೇ ಶೋ. ಇದಕ್ಕೆ ತಾನೇ ಜವಾಬ್ದಾರ ಅನ್ನೋ ರೀತಿಯಲ್ಲಿ ಹೆಗಲ ಮೇಲೆ ಹೊತ್ತು ಈ ಶೋನ ನಡೆಸಿಕೊಂಡು ಬಂದವರು ಸುದೀಪ್.

ಕಂಟೆಸ್ಟೆಂಟ್ ಗಳು ಅದೆಷ್ಟೇ ಕಂಟೆಂಟ್ ಕೊಟ್ಟರೂ ಏನೇ ವೀಕ್ಷಕವರ್ಗವನ್ನು ಹುಟ್ಟುಹಾಕಿದ್ರೂ ಬಿಗ್ ಬಾಸ್ ನ ಮೂಲ ಶಕ್ತಿಯಾಗಿದ್ದವರು ಸುದೀಪ್. ಕಂಟೆಸ್ಟೆಂಟ್‌ಗಳು ಅದೆಂಥಾ ಕಿರಿಕ್ ಮಾಡಿದ್ರೂ, ಪ್ರತಿವಾರದ ಎಲ್ಲ ಕಿರಿಕ್‌ಗಳನ್ನ ವಾರದ ಕೊನೆಯಲ್ಲಿ ತಮ್ಮ ಮಾತುಗಾರಿಕೆಯ ಮೂಲಕ ಅಳಿಸಿಹಾಕಿ, ಮತ್ತೆ ಮರುವಾರಕ್ಕೆ ವೀಕ್ಷಕವರ್ಗವನ್ನ ರೆಡಿಮಾಡ್ತಾ ಇದ್ದದ್ದು ಸುದೀಪ್.

ಇಂಥಾ ಸುದೀಪ್ ಇಲ್ಲದ ಬಿಗ್ ಬಾಸ್‌ನ ಊಹಿಸೋದು ಕೂಡ ಕಷ್ಟ. ಸುದೀಪ್ ಎತ್ತರ, ಧ್ವನಿ, ಆ ಚಾರ್ಮ್, , ಮಾತಿನ ವೈಖರಿ, ಆಟಿಟ್ಯೂಡ್, ಇಷ್ಟುವರ್ಷದ ಬಿಗ್ ಬಾಸ್ ಅನುಭವ... ಇದನ್ನೆಲ್ಲ ಸರಿಗಟ್ಟೋಕೆ ಯಾರಿಂದಾನೂ ಖಂಡಿತ ಸಾಧ್ಯ ಇಲ್ಲ. ಹಾಗಂತ ಶೋ ನಿಲ್ಲಿಸೋಕಂತೂ ಸಾಧ್ಯ ಇಲ್ಲ ಅಲ್ವಾ..? ಶೋ ಮಸ್ಟ್ ಗೋ ಆನ್.. ಸೋ ಬಿಗ್ ಹೋಸ್ಟ್ ಅಗಲಿಕ್ಕೆ ಹೊಸ ತಾರೆಯರ ಹುಡುಕಾಟ ಶುರುವಾಗಿದೆ.

ಒಟ್ಟಾರೆ ಸುದೀಪ್ ಇನ್ಮುಂದೆ ಬಿಗ್ ಬಾಸ್‌ನಲ್ಲಿ ಕಾಣಸಿಗೋದಿಲ್ಲ. ಆದ್ರೆ ಬಿಗ್ ಬಾಸ್‌ನಿಂದ ಸುದೀಪ್ ಸಂಪಾದಿಸಿರೋ ಹಣ ಮತ್ತು ಕೀರ್ತಿ ಎರಡೂ ಲೆಕ್ಕವಿಲ್ಲದಷ್ಟು... ಹೀಗೆ ಲೆಕ್ಕಕ್ಕೆ ಸಿಗದಷ್ಟು ಸಂಪಾದಿಸಿದ್ರೂ ಕಿಚ್ಚ ಬಿಗ್ ಬಾಸ್‌ನಿಂದ ದೂರವಾಗ್ತಾ ಇದ್ದಾರೆ ಅಂದ್ರೆ ಖಂಡಿತ ಇದಕ್ಕಿಂದ ಬಿಗ್ ಡೀಲ್‌ಗೆ ಕಿಚ್ಚ ಸುದೀಪ್ ಅವರು ಕೈ ಹಾಕಿದ್ದಾರೆ ಎಂದೇ ಅರ್ಥ..! ಹಾಗಿದ್ದರೆ ಅದೇನು? ಸದ್ಯದಲ್ಲೇ ಆ ಸಂಗತಿ ರಿವೀಲ್ ಆಗಲಿದೆ ಕಾದು ನೋಡಿ!

# ನಮ್ಮದನ್ನೇ (!....?) ಬಳಸಿ


ಸೌತ್ ಹಾಗು ನಾರ್ತ್ ಎಂಬ ಬೇಧವಿಲ್ಲದೇ ಎರಡೂ ಕಡೆಗಳಲ್ಲಿ ಮಿಂಚಿರುವ ಬ್ಯೂಟಿ ನಟಿ ತಮನ್ನಾ ಭಾಟಿಯಾ. ಎಸ್‌ಎಸ್ ರಾಜಮೌಳಿ ನಿರ್ದೇಶನದ ಬಾಹುಬಲಿ ಸಿನಿಮಾ ಮೂಲಕ ಜಗತ್ಪ್ರಸಿದ್ಧಿ ಪಡೆದಿರುವ ತಮನ್ನಾ ಅವರು ಇಂದಿಗೂ ಕೂಡ ತಮ್ಮ ಚರ್ಮದ ಕಾಂತಿ ಹಾಗೂ ಫಿಟ್‌ನೆಸ್ ಉಳಿಸಿಕೊಂಡಿದ್ದಾರೆ. ಮಿಲ್ಕಿ ಬ್ಯೂಟಿ ಎಂದೇ ಸಿನಿಪ್ರೇಕ್ಷಕರಿಂದ ಕರೆಸಿಕೊಳ್ಳುವ ನಟಿ ತಮನ್ನಾ ಭಾಟಿಯೂ ಈ ವಯಸ್ಸಿನಲ್ಲೂ ಚರ್ಮದ ಕಾಂತಿ ಹಾಗೇ ಉಳಿಸಿಕೊಂಡಿದ್ದಾರೆ ಹೇಗೆ?

ಈ ಬಗ್ಗೆ ಸ್ವತಃ ತಮನ್ನಾ ಹೇಳಿಕೊಂಡಿದ್ದಾರೆ. ಮೊಟ್ಟಮೊದಲನೆಯದಾಗಿ ಅವರು ತಮ್ಮ ಆಹಾರದ ವಿಷಯದಲ್ಲಿ ಸಾಕಷ್ಟು ಜಾಗ್ರತೆ ವಹಿಸುತ್ತಾರಂತೆ. ಜೊತೆಗೆ, ಜೇನತುಪ್ಪ, ಶ್ರೀಗಂಧ ಹಾಗೂ ಕಾಫಿಯನ್ನು ಮಿಕ್ಸ್ ಮಾಡಿ ತಮ್ಮ ಚರ್ಮಕ್ಕೆ ಲೇಪಿಸಿಕೊಳ್ಳುತ್ತಾರೆ. ಜೊತೆಗೆ, ಮೊಸರು ಹಾಗೂ ಕಡಲೆಹಿಟ್ಟು ಅವರ ರೆಗ್ಯುಲರ್ ಪೇಸ್‌ಪ್ಯಾಕ್‌ನಲ್ಲಿ ಬಳಕೆ ಆಗುತ್ತದೆ. ಗುಲಾಬಿ ನೀರು, ಅಂದರೆ ರೋಸ್ ವಾಟರ್‌ನಿಂದ ಆಗಾಗ ಮುಖ ತೊಳೆಯುವುದನ್ನು ನಟಿ ತಮನ್ನಾ ಮರೆಯುವುದೇ ಇಲ್ಲವಂತೆ. ಇಷ್ಟೇ ಆಗಿದ್ದರೆ ಹೇಳಲೇಬೇಕಾದ ಅಗತ್ಯವಿರಲಿಲ್ಲ. ಆದರೆ ಇವೆಲ್ಲವುಗಳಿಗಿಂತ ಭಿನ್ನವಾಗಿ ಮತ್ತೊಂದು ಟಿಪ್ಸ್ ಹೇಳಿದ್ದಾರೆ ನಟಿ ತಮನ್ನಾ ಭಾಟಿಯಾ.

ಅದನ್ನು ತಿಳಿದರೆ ಕೆಲವರು ಮೂಗು ಮುರಿಯಬಹುದು, ಇನ್ನೂ ಕೆಲವರು ಅಸಹ್ಯ ಪಡಬಹುದು. ಆದರೆ, ತಮನ್ನಾ ಅದನ್ನು ತಾವು ಮಾಡುವುದಾಗಿ ಹೇಳಿಕೊಂಡಿದ್ದಾರೆ. ಅದನ್ನು ಹುಡುಕಿಕೊಂಡು ಅಂಗಡಿಗೆ ಹೋಗಬೇಕಾಗಿಲ್ಲ, ಅಡುಗೆಮನೆಯನ್ನೂ ಜಾಲಾಡಬೇಕಿಲ್ಲ! ಯಾರನ್ನೂ ಕಾಡಬೇಕಿಲ್ಲ ಬೇಡಬೇಕಿಲ್ಲ! ಹಾಗಿದ್ದರೆ ಅದೇನು? ಹೌದು, ನಟಿ ತಮನ್ನಾ ಭಾಟಿಯಾ ಹೇಳಿರುವ ಸೌಂದರ್ಯ ಸಲಹೆ ಎಲ್ಲರ ಬಳಿಯೂ ಇರುವಂಥದ್ದು.

ಹೊಳೆಯುವ, ಕಾಂತಿ ಹೊಂದಿರುವ ಚರ್ಮದ ಒಡತಿ ತಮನ್ನಾ ಬೆಳಿಗ್ಗೆ ಎದ್ದ ಕೂಡಲೇ ತಮ್ಮ ಎಂಜಲನ್ನು ಮುಖಕ್ಕೆ ಹಚ್ಚಿಕೊಳ್ಳುತ್ತಾರಂತೆ. 'ಬೆಳಿಗ್ಗೆ ಬೆಳಿಗ್ಗೆ ಮುಖಕ್ಕೆ ಉಗುಳು ಹಚ್ಚುವುದು ಕೆಲವರಿಗೆ ವಿಚಿತ್ರ ಎನಿಸಬಹುದು. ಆದರೆ ಅಪ್ಲೈ ಮಾಡಿ ನೋಡಿ, ಅದರ ಪ್ರಯೋಜನ ಪಡೆದ ಬಳಿಕ ನೀವೇ ಆಶ್ಚರ್ಯ ಪಡುತ್ತೀರಿ. ಅಷ್ಟಕ್ಕೂ ನಮ್ಮದೇ ಎಂಜಲು ತಾನೇ?' ಎಂದಿದ್ದಾರೆ ನಟಿ ತಮನ್ನಾ.

ನಟಿ ತಮನ್ನಾ ಭಾಟಿಯಾ ಹೇಳಿಕೆಗೆ ಕೆಲವರು ಮುಸಿಮುಸಿ ನಕ್ಕಿದ್ದರೆ ಇನ್ನು ಕೆಲವರು ಥ್ಯಾಂಕ್ಸ್ ಹೇಳಿದ್ದಾರೆ. ಹಲವರು 'ನಮ್ಮದೇ ಎಂಜಲು ಹಚ್ಚಿ ನೋಡಲು ಸಮಸ್ಯೆಯೇನು? ಖಂಡಿತ ನೀವು ಹೇಳಿದ ಟಿಪ್ಸ್ ಫಾಲೋ ಮಾಡಿ ನೋಡ್ತೀವಿ ರಿಸಲ್ಟ್ ..' ಎಂದಿದ್ದಾರೆ. ಒಟ್ಟಿನಲ್ಲಿ, ತಮನ್ನಾ ಸೌಂದರ್ಯಕ್ಕೆ ಮಾರು ಹೋಗದವರು ಕಡಿಮೆ. ಆದರೆ, ಅವರು ಹೇಳಿರುವ ಟಿಪ್ಸ್ ಫಾಲೋ ಮಾಡಿದ್ರೆ ಅವರಂತೆ ಚರ್ಮ ಲಕಲಕ ಹೊಳೆಯುತ್ತಾ? ಗೊತ್ತಿಲ್ಲ, ಟ್ರೈ ಮಾಡಿ ನೋಡಿ..





# ಅವ್ರೇ ಹೊಸ ಪಾರ್ಟನರ್, ಆವತ್ತು ಮದ್ವೆ..!

> ಸೂಕ್ತ ವ್ಯಕ್ತಿ, ಪೂರಕವಾದ ಸಮಯ ಕೂಡಿ ಬಂದರೆ, ನನ್ನ ಜೀವನದಲ್ಲಿ ಅದು ಬರಬೇಕು ಎಂದಿದ್ದರೆ ಖಂಡಿತ ಆ ಕಾಲ ಬರುತ್ತದೆ. ಆಗ ನಾನು ಅದಕ್ಕೆ 'ಯೆಸ್' ಎನ್ನಬಹುದು.

ಸಿಂಗರ್, ನಟ ಹಾಗೂ ಮ್ಯೂಸಿಕ್ ಡೈರೆಕ್ಟರ್ ಚಂದನ್ ಶೆಟ್ಟಿ ಮದುವೆ ಬಗ್ಗೆ ಸಹಜವಾಗಿಯೇ ಎಲ್ಲರಿಗೂ ಕುತೂಹಲ ಇದ್ದೇ ಇದೆ. 2020ರಲ್ಲಿ ನಟಿ, ಬಿಗ್ ಬಾಸ್ ಸಹಸ್ಪರ್ಧಿ ನಿವೇದಿತಾ ಗೌಡ ಜೊತೆ ಲವ್ ಆಗಿ ಮದುವೆ ಆಗಿದ್ದರು ಚಂದನ್ ಶೆಟ್ಟಿ. ಆದರೆ, ಅವರಿಬ್ಬರಲ್ಲಿ ಹೊಂದಾಣಿಕೆ ಆಗದೇ 2024ರಲ್ಲಿ ಇಬ್ಬರೂ ಪರಸ್ಪರ ಸಮ್ಮತಿ ಮೇರೆಗೆ ಡಿವೋರ್ಸ್ ಪಡೆದುಕೊಂಡಿದ್ದಾರೆ. ಅಂದಿನಿಂದ ಇಂದಿವರೆಗೂ ಚಂದನ್ ಶೆಟ್ಟಿ ಮತ್ತೆ ಮದುವೆ ಆಗ್ತಾರಾ ಎಂಬ ಪ್ರಶ್ನೆ ಅವರನ್ನು ಬಿಟ್ಟು ಉಳಿದ ಹಲವರನ್ನು ಕಾಡುತ್ತಲೇ ಇದೆ.

ಬರೀ ಪ್ರಶ್ನೆ ಮಾತ್ರವಲ್ಲ, ಹೋದಲ್ಲಿ ಬಂದಲ್ಲಿ ಮರುಮದುವೆ ಬಗ್ಗೆ ತಮಗೆ ಪ್ರಶ್ನೆ ಬರುತ್ತಲೇ ಇರುತ್ತದೆ ಎಂಬುದನ್ನು ಸ್ವತಃ ಚಂದನ್ ಶೆಟ್ಟಿಯವರೇ ಬಾಯ್ಬಿಟ್ಟಿದ್ದಾರೆ. 'ವಿಚ್ಛೇದನ ಪಡೆದುಕೊಂಡು ಮತ್ತೆ ಸಿಂಗಲ್ ಆದ ದಿನದಿಂದಲೂ ತಮಗೆ ಆಗಾಗ ಈ ಪ್ರಶ್ನೆ ಎದುರಾಗುತ್ತಲೇ ಇದೆ' ಎಂದಿದ್ದಾರೆ ಚಂದನ್ ಶೆಟ್ಟಿ. ಆದರೆ, ಈ ಬಗ್ಗೆ ಅವರು ಅದೇನು ಉತ್ತರ ಕೊಡುತ್ತಾರೆ? ಸದ್ಯ ಆ ಬಗ್ಗೆ ಏನಂತ ನಿರ್ಧಾರ ಮಾಡಿದ್ದಾರೆ? ಇಲ್ಲಿದೆ ನೋಡಿ ಉತ್ತರ..

ಹೌದು, ಚಂದನ್ ಶೆಟ್ಟಿಯವರು ಮತ್ತೆ ಸಿಂಗಲ್ ಆಗಿ ಒಂದು ವರ್ಷವಾಗುತ್ತ ಬಂತು.. ಸದ್ಯಕ್ಕೆ ಅವರು ಮತ್ತೆ ಮದುವೆ ಆಗಿಲ್ಲ. ಈ ಬಗ್ಗೆ ಚಂದನ್ 'ಸದ್ಯ ನಾನು ಕೆಲಸಗಳಲ್ಲಿ ಬಹಳಷ್ಟು ಬ್ಯುಸಿ ಆಗಿದ್ದಾನೆ, ಕೆಲಸಗಳ ಮಧ್ಯೆ ಸಿಗುವ ಅಲ್ಪಸ್ವಲ್ಪ ರಜಾಗಳನ್ನು ನಾನು ವಿಭಿನ್ನ ರೀತಿಯಲ್ಲಿ ಕಳೆಯುತ್ತಿದ್ದೇನೆ. ಅಂದರೆ, ನಾನಿನ್ನೂ ನೋಡಿರದ ಜಾಗಗಳಿಗೆ ಹೋಗುವುದು, ನನ್ನ ಡ್ರೀಮ್ ಟ್ರಿಪ್ ಮಾಡುವುದು, ಹೊಸಹೊಸ ಸಾಹಸಗಳಲ್ಲಿ ತೊಡಗಿಸಿಕೊಳ್ಳುವುದು ಇತ್ಯಾದಿ..

ಈಗಲೂ ಅಷ್ಟೇ, ನಾನು ಬೆಂಗಳೂರಿನಿಂದ ಹಿಮಾಚಲ ಪ್ರದೇಶಕ್ಕೆ ಕಾರ್‌ನಲ್ಲಿ ಟೂರ್ ಮಾಡುತ್ತಿದ್ದೇನೆ. ಈಗಾಗಲೇ 3000 ಕೀಮೀ ಕ್ರಮಿಸಿ ನಾಗ್ಪುರ ದಾಟಿ, ಆಗ್ರಾಕ್ಕೆ ಬಂದಾಗಿದೆ. ಇಲ್ಲಿಯ ಪ್ರಕೃತಿ ಸೌಂದರ್ಯ, ಇಲ್ಲಿನ ಜನತೆಯ ಜೀವನ ಕ್ರಮ ಹೀಗೆ ಹತ್ತು ಹಲವು ಸಂಗತಿಗಳ ಕಡೆ ಗಮನಗೊಟ್ಟು ನೋಡುತ್ತಿದ್ದೇನೆ. ನೋಡಿರುವ ಪ್ರಪಂಚಕ್ಕಿಂತ ನಾನು ನೋಡದಿರುವ, ನೋಡಬೇಕಾದ ಪ್ರಪಂಚವೇ ಜಾಸ್ತಿ ಇದೆ ಎಂಬ ಅರಿವು ನನ್ನಲ್ಲಿ ಮೂಡುತ್ತಿದೆ. ಸಿಕ್ಕ ಸಮಯವನ್ನು ಜೀವನದ ಅನುಭವ ಹೆಚ್ಚಿಸಿಕೊಳ್ಳಲು ಬಯಸುತ್ತಿದ್ದೇನೆ.

ಮದುವೆ ಬಗ್ಗೆ ಹೇಳಬೇಕು ಎಂದರೆ, '2020ರಲ್ಲಿ ಇದ್ದ ನನ್ನ ಮೆಂಟಾಲಿಟಿ ಬದಲಾಗಿದೆ. ಜೀವನದ ಕೆಲವು ಘಟನೆಗಳಿಗೆ ಕಾರಣಗಳನ್ನು ಹುಡುಕುತ್ತ, ಹುಳುಕುಗಳನ್ನು ಕೆದಕುತ್ತ ಕೂರುವುದನ್ನು ಈಗ ನಿಲ್ಲಿಸಿಬಿಟ್ಟಿದ್ದೇನೆ. 'Life has its Own Plan' ಅಂತಾರಲ್ಲ ಹಾಗೆ, ಜೀವನದಲ್ಲಿ ಮುಖ್ಯವಾದ ಘಟನೆಗಳು ಸಮಯ ಬಂದಾಗ ನಡೆಯಲು ಬಿಡಬೇಕು ಎಂಬ ಅರಿವು ನನ್ನಲ್ಲಿ ಮೂಡಿದೆ.

ನನ್ನ ಕೆಲಸಗಳಲ್ಲಿ, ನನ್ನ ಮಹತ್ವಾಕಾಂಕ್ಷೆಗಳಲ್ಲಿ, ನನಸಾಗದ ಕೆಲವು ಕನಸುಗಳನ್ನು ಈಡೇರಿಸಿಕೊಳ್ಳುವುದರಲ್ಲಿ ಸದ್ಯಕ್ಕೆ ನಾನು ತೊಡಗಿಸಿಕೊಂಡಿದ್ದೇನೆ. ಸೂಕ್ತ ವ್ಯಕ್ತಿ, ಪೂರಕವಾದ ಸಮಯ ಕೂಡಿ ಬಂದರೆ, ನನ್ನ ಜೀವನದಲ್ಲಿ ಅದು ಬರಬೇಕು ಎಂದಿದ್ದರೆ ಖಂಡಿತ ಆ ಕಾಲ ಬರುತ್ತದೆ. ಆಗ ನಾನು ಅದಕ್ಕೆ 'ಯೆಸ್' ಎನ್ನಬಹುದು. ಅದು ಬಿಟ್ಟರೆ, ಮದುವೆ ಬಗ್ಗೆ ನಾನು ಸದ್ಯ ಆಗಬೇಕು ಅಂತಾಗಲಿ, ಆಗಬಾರದು ಅಂತಾಗಲೀ ಯಾವುದೇ ನಿರ್ಧಾರ ತೆಗೆದುಕೊಂಡಿಲ್ಲ.

ಸೂಕ್ತ ಹುಡುಗಿ ಸಿಕ್ಕಾಗ ಅವ್ರೇ ನನ್ನ ಹೊಸ ಪಾರ್ಟನರ್, ಆವತ್ತೇ ನನ್ನ ಮದುವೆ ಬಗ್ಗೆ ನಿರ್ಧಾರ.. ಸದ್ಯಕ್ಕೆ ಭವಿಷ್ಯದ ಬಗ್ಗೆ ಯೋಚಿಸುವ, ಕಲ್ಪಿಸಿಕೊಳ್ಳುವ ಮೆಂಟಾಲಿಟಿಯಿಂದ ಹೊರಬಂದು ವರ್ತಮಾನದಲ್ಲಿ ಜೀವಿಸುತ್ತಿದ್ಧೇನೆ' ಎಂದಿದ್ದಾರೆ ಚಂದನ್ ಶೆಟ್ಟಿ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
RNI.KAR/KAN/2009/31934.VOLUME-16/ISSUE-59 Email-mussanje2010@gmail.com, Phone: 9448074878